BV
ಕನ್ನಡ ದಿನಪತ್ರಿಕೆ
09 ಮಾರ್ಚ್ । ಶನಿವಾರ
09 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 19 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಹಣದ ಆಸೆಗಾಗಿ ಮಗಳನ್ನೇ ವೇಶ್ಯಾವಾಟಿಕೆ ದಂಧೆಗೆ ನೂಕಿದ್ದ ತಾಯಿಗೆ ಶಿಕ್ಷೆ ನೀಡಿದ ಕೋರ್ಟ್




ಚಿಕ್ಕಮಗಳೂರು: ಚಿಕ್ಕಮಗಳೂರಿನ ಶೃಂಗೇರಿ ತಾಲೂಕಿನ ಕುಂಚೇಬೈಲ್ ಬಳಿಯ ಗೋಚವಲ್ಲಿ ಗ್ರಾಮದಲ್ಲಿ ನಡೆದಿದ್ದ ಹಣಕ್ಕಾಗಿ ಮಗಳನ್ನೇ ವೇಶಾವ್ಯಾಟಿಕೆಗೆ ತಳ್ಳಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂತ್ರಸ್ತೆಯ ತಾಯಿ ಸೇರಿ ನಾಲ್ವರನ್ನು ದೋಷಿಗಳು ಎಂದು ಕೋರ್ಟ್ ತೀಪು ನೀಡಿದೆ.

ಪ್ರಕರಣದಲ್ಲಿ 53 ಜನರನ್ನು ಬಂಧಿಸಲಾಗಿತ್ತು. 53 ಆರೋಪಿಗಳಲ್ಲಿ 49 ಆರೋಪಿಗಳನ್ನು ಖುಲಾಸೆಗೊಳಿಸಿರುವ ಕೋರ್ಟ್ ನಾಲ್ವರು ಆರೋಪ ಸಾಬೀತಾಗಿದೆ. ಮಾರ್ಚ್ 11 ರಂದು ಶಿಕ್ಷೆ ಪ್ರಮಾಣ ಪ್ರಕಟಿಸುವುದಾಗಿ ತಿಳಿಸಿದೆ.

ಚಿಕ್ಕಮಗಳೂರಿನ ವಿಶೇಷ ಪೋಕ್ಸೋ ಕೋರ್ಟ್ ಈ ತೀಪು ನೀಡಿದೆ. ಸಂತ್ರಸ್ತೆಯ ತಾಯಿ ಗೀತಾ, ಸಲ್ಮಾನ್ ಅಭಿ, ಗಿರೀಶ್, ದೇವಿ ಶರಣ್ ಅಪರಾಧಿಗಳು. ಹಣದ ಆಸೆಗಾಗಿ ಹೆತ್ತ ತಾಯಿಯೇ ತನ್ನ ಅಪ್ರಾಪ್ತ ಮಗಳನ್ನು ವೇಶ್ಯಾವಾಟಿಕೆಗೆ ತಳ್ಳಿದ್ದಳು. 2020 ರ ಸೆಪ್ಟೆಂಬರ್ 1ರಿಂದ 2021 ಜನವರಿ 27ರವರೆಗೆ ಬಾಲಕಿ ಮೇಲೆ ನಿರಂತರ ಅತ್ಯಾಚಾರ ನಡೆದಿತ್ತು . ಗೋಚುವಲ್ಲಿ ಗ್ರಾಮದಲ್ಲಿ ವೇಶ್ಯಾವಾಟಿಕೆ ದಂಧೆ ನಡೆಯುತ್ತಿದೆ ಎಂಬ ಬಗ್ಗೆ ದೂರು ಬಂದ ಹಿನ್ನೆಲೆಯಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ಸಂತ್ರಸ್ತ ಬಲಕಿಯನ್ನು ರಕ್ಷಿಸಿದ್ದರು. ಪ್ರಕರಣದಲ್ಲಿ 53 ಆರೋಪಿಗಳನ್ನು ಬಂಧಿಸಿದ್ದರು.

## 7ನೇ ತರಗತಿ ವಿದ್ಯಾರ್ಥಿನಿ 6 ತಿಂಗಳ ಗರ್ಭಿಣಿ; ಕೇಸ್ ದಾಖಲು



ಚಿಕ್ಕಬಳ್ಳಾಪುರ: ಯುವಕನೊಬ್ಬ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಕೃತ್ಯವೊಂದು ಚಿಕ್ಕಬಳ್ಳಾಪುರದಲ್ಲಿ ನಡೆದಿದೆ.

7ನೇ ತರಗತಿ ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ವಿದ್ಯಾರ್ಥಿನಿ 6 ತಿಂಗಳ ಗರ್ಭಿಣಿಯಾಗಿದ್ದು, ಸಂಬಂಧಿ ಯುವಕನಿಂದಲೇ ಅತ್ಯಾಚಾರದ ಆರೋಪ ಕೇಳಿ ಬಂದಿದೆ.

ಲೈಂಗಿಕ ಸಂಪರ್ಕ ಬೆಳೆಸಿದ ಪರಿಣಾಮ ಆಕೆ ಗರ್ಭಿಣಿಯಾಗಿದ್ದಾಳೆ. ಈ ಬಗ್ಗೆ ತಿಳಿದು ಬಾಲಕಿಯ ಪಾಲಕರು ಕಂಗಾಲಾಗಿದ್ದಾರೆ. ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಸದ್ಯ ಬಾಲಕಿಯನ್ನ ರಕ್ಷಿಸಿ ಸರ್ಕಾರಿ ಬಾಲಕಿಯರ ಬಾಲಮಂದಿರಲ್ಲಿ ಆರೈಕೆ ಮಾಡಲಾಗಿದ್ದು, ಸಾರ್ವಜನಿಕರಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಮಾಹಿತಿ ನೀಡಲಾಗಿದೆ. ಈ ಕುರಿತು ಚಿಕ್ಕಬಳ್ಳಾಫುರ ಮಹಿಳಾ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಪ್ರಕರಣ ದಾಖಲಾಗಿದೆ.

## ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್ ದರ 100 ರೂ. ಇಳಿಕೆ



ನವದೆಹಲಿ: ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ಕೇಂದ್ರ ಸರ್ಕಾರ ಗೃಹ ಬಳಕೆಯ ಎಲ್ಪಿಜಿ ಸಿಲಿಂಡರ್ ಬೆಲೆಯಲ್ಲಿ 100 ರೂ. ಕಡಿತಗೊಳಿಸಿ ಮಹಿಳೆಯರಿಗೆ ಸಿಹಿ ಸುದ್ದಿ ನೀಡಿದೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರಮೋದಿ, ಇಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಿನ್ನೆಲೆಯಲ್ಲಿ ನಮ್ಮ ಸರ್ಕಾರವು ಎಲ್ಪಿಜಿ ಸಿಲಿಂಡರ್ ಬೆಲೆಯನ್ನು 100 ರೂಪಾಯಿ ಇಳಿಕೆ ಮಾಡಿದೆ. ಇದು ದೇಶಾದ್ಯಂತ ಅನ್ವಯವಾಗಲಿದ್ದು, ಲಕ್ಷಾಂತರ ಕುಟುಂಬಗಳ ಮೇಲಿನ ಆರ್ಥಿಕ ಹೊರೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ವಿಶೇಷವಾಗಿ ನಮ್ಮ ನಾರಿ ಶಕ್ತಿಗೆ ಪ್ರಯೋಜನವನ್ನು ನೀಡುತ್ತದೆ ಎಂದಿದ್ದಾರೆ. ಅಡುಗೆ ಅನಿಲವನ್ನು ಹೆಚ್ಚು ಕೈಗೆಟುಕುವಂತೆ ಮಾಡುವ ಮೂಲಕ, ನಾವು ಕುಟುಂಬಗಳ ಯೋಗಕ್ಷೇಮ ಹಾಗೂ ಆರೋಗ್ಯಕರ ವಾತಾವರಣವನ್ನು ಖಚಿತಪಡಿಸಿಕೊಳ್ಳಲು ಗುರಿ ಹೊಂದಿದ್ದೇವೆ. ಇದು ಮಹಿಳೆಯರನ್ನು ಸಬಲೀಕರಣಗೊಳಿಸುವ ಮತ್ತು ಅವರಿಗೆ ಸುಲಭವಾಗಿ ಬದುಕುವ ಖಾತ್ರಿಪಡಿಸುವ ನಮ್ಮ ಬದ್ಧತೆಗೆ ಅನುಗುಣವಾಗಿದೆ ಎಂದು ತಿಳಿಸಿದ್ದಾರೆ.

ಉಜ್ವಲ ಯೋಜನೆಯಡಿ ಸಿಲಿಂಡರ್ ಬೆಲೆಯ ಮೇಲಿನ 300 ರೂಪಾಯಿ ರಿಯಾಯಿತಿಯನ್ನು ಮುಂದಿನ ಒಂದು ವರ್ಷಕ್ಕೆ ಮುಂದುವರಿಸಲು ಕೇಂದ್ರ ಸಚಿವ ಸಂಪುಟ ಗುರುವಾರ ನಿರ್ಧಾರ ಕೈಗೊಂಡಿತ್ತು. ಅದರಾಚೆಗೆ, ಎಲ್ಲಾ ಸಾಮಾನ್ಯ ಸಿಲಿಂಡರ್ ಗ್ರಾಹಕರಿಗೆ ಪ್ರತಿ ಸಿಲಿಂಡರ್ಗೆ 100 ರೂ. ದರ ಇಳಿಕೆ ಅನ್ವಯವಾಗಲಿದೆ.

ಸರ್ಕಾರದ ಅಂಕಿಅಂಶಗಳ ಪ್ರಕಾರ, ದೇಶಾದ್ಯಂತ ಸುಮಾರು 32.5 ಕೋಟಿ ಎಲ್ಪಿಜಿ ಸಂಪರ್ಕಗಳಿವೆ. ಇದರಲ್ಲಿ ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ಕಳೆದ 10 ವರ್ಷಗಳಲ್ಲಿ ಸುಮಾರು 10.25 ಕೋಟಿ ಸಿಲಿಂಡರ್ಗಳನ್ನು ವಿತರಣೆ ಮಾಡಲಾಗಿದೆ. ಮಾರ್ಚ್ 1ರಂದು ವಾಣಿಜ್ಯ ಬಳಕೆಯ ಎಲ್ಪಿಜಿ ಸಿಲಿಂಡರ್ ಬೆಲೆಯನ್ನು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು 25 ರೂ. ಹೆಚ್ಚಳ ಮಾಡಿದ್ದವು. ಆದರೆ ಗೃಹ ಬಳಕೆಯ ಸಿಲಿಂಡರ್ ಬೆಲೆಯನ್ನು ಕಳೆದ 6 ತಿಂಗಳಲ್ಲಿ ಪರಿಷ್ಕರಣೆ ಮಾಡಿರಲಿಲ್ಲ.

## ರೈಲಿಗೆ ತಲೆ ಕೊಟ್ಟು ವಿದ್ಯಾರ್ಥಿನಿ ಆತ್ಮಹತ್ಯೆ

ಶಿವಮೊಗ್ಗ: ಶಿವಮೊಗ್ಗ ಜಿಲ್ಲೆ ಸಾಗರದ ಗೋಪಾಲಗೌಡ ನಗರದಲ್ಲಿ ಬುಧವಾರ ರಾತ್ರಿ ರೈಲಿಗೆ ತಲೆ ಕೊಟ್ಟು ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಗೋಪಾಲಗೌಡ ನಗರ ನಿವಾಸಿ, ಸಿರವಂತೆ ಸರ್ಕಾರಿ ಪಿಯು ಕಾಲೇಜ್ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಭೂಮಿಕಾ(18) ಆತ್ಮಹತ್ಯೆ ಮಾಡಿಕೊಂಡವರು.

ಘಟನೆಗೆ ಕಾರಣ ತಿಳಿದು ಬಂದಿಲ್ಲ. ಬುಧವಾರ ರಾತ್ರಿ ಮನೆಯಿಂದ ಹೊರಗೆ ಹೋಗಿದ್ದ ಭೂಮಿಕಾ ವಾಪಸ್ ಬಂದಿರಲಿಲ್ಲ. ಗುರುವಾರ ಬೆಳಗ್ಗೆ ರೈಲ್ವೆ ಹಳಿಯ ಮೇಲೆ ಶವವಾಗಿ ಪತ್ತೆಯಾಗಿದ್ದಾರೆ. ರೈಲ್ವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವಿವಿ ಪ್ರವೇಶ, ನೌಕರಿಯ ಆಮಿಷವೊಡ್ಡಿ ಯುಕ್ರೇನ್ ವಿರುದ್ಧದ ಯುದ್ಧರಂಗಕ್ಕೆ ಭಾರತೀಯರ ಸಾಗಣೆ: ಸಿಬಿಐ

ನವದೆಹಲಿ: ವಿಶ್ವವಿದ್ಯಾಲಯ ಪ್ರವೇಶ, ನೌಕರಿಯ ಆಮಿಷಗಳನ್ನೊಡ್ಡಿ ಯುಕ್ರೇನ್ ವಿರುದ್ಧದ ಯುದ್ಧರಂಗಕ್ಕೆ ಭಾರತೀಯರನ್ನು ಸಾಗಣೆ ಮಾಡಲಾಗಿದೆ ಎಂದು ಸಿಬಿಐ ಹೇಳಿದೆ. ರಷ್ಯಾ-ಯುಕ್ರೇನ್ ಕದನರಂಗಕ್ಕೆ ಭಾರತೀಯರನ್ನು ಸಾಗಣೆ ಮಾಡಿರುವವರ ಮೇಲೆ ಕಣ್ಣಿಡಲಾಗಿದೆ ಎಂದು ಸಿಬಿಐ ಅಧಿಕಾರಿಗಳು ತಿಳಿಸಿದ್ದಾರೆ.

ಏಜೆಂಟರು ರಷ್ಯಾಕ್ಕೆ ಆಗಮಿಸುವ ಭಾರತೀಯರ ಪಾಸ್‌ಪೋರ್ಟ್‌ಗಳನ್ನು ವಶಪಡಿಸಿಕೊಂಡರು ಮತ್ತು ಸಶಸ್ತ್ರ ಪಡೆಗಳೊಂದಿಗೆ ಹೋರಾಡುವಂತೆ ಒತ್ತಾಯಿಸಿದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಜಾಲವನ್ನು ಸಿಬಿಐ ಗುರುವಾರ ಭೇದಿಸಿತ್ತು. ರಾಜಸ್ಥಾನದ ನಿವಾಸಿ ಕ್ರಿಸ್ಟಿನಾ ಮತ್ತು ಮೊಯಿನುದ್ದೀನ್ ಚಿಪ್ಪಾ ಅವರು ರಷ್ಯಾದಲ್ಲಿ ನೆಲೆಸಿದ್ದಾರೆ ಮತ್ತು ಅಲ್ಲಿ ಲಾಭದಾಯಕ ಉದ್ಯೋಗಾವಕಾಶಗಳನ್ನು ನೀಡುವ ಮೂಲಕ ಭಾರತೀಯ ಯುವಕರನ್ನು ರಷ್ಯಾಕ್ಕೆ ಸಾಗಿಸಲು ಅನುಕೂಲ ಮಾಡಿಕೊಡುತ್ತಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೇಂದ್ರೀಯ ತನಿಖಾ ಸಂಸ್ಥೆಯ ಎಫ್‌ಐಆರ್‌ನಲ್ಲಿ 17 ಇತರ ವೀಸಾ ಸಲಹಾ ಕಂಪನಿಗಳು, ಅವುಗಳ ಮಾಲೀಕರು ಮತ್ತು



ಭಾರತದಾದ್ಯಂತ ಹರಡಿರುವ ಏಜೆಂಟ್‌ಗಳನ್ನು ಪಟ್ಟಿ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕ್ರಿಮಿನಲ್ ಪಿತೂರಿ, ವಂಚನೆ ಮತ್ತು ಮಾನವ ಕಳ್ಳಸಾಗಣೆಗೆ ಸಂಬಂಧಿಸಿದ ಭಾರತೀಯ ದಂಡ ಸಂಹಿತೆಯ ಸೆಕ್ಷನ್‌ಗಳ ಅಡಿಯಲ್ಲಿ ಸಂಸ್ಥೆ ಅವರ ವಿರುದ್ಧ ಪ್ರಕರಣ ದಾಖಲಾಗಿದೆ.

ಆರೋಪಿಗಳು ತಮ್ಮ ಏಜೆಂಟರ ಮೂಲಕ ರಷ್ಯಾದ ಸೇನೆಗೆ ಸಂಬಂಧಪಟ್ಟ ಉದ್ಯೋಗ, ಸೆಕ್ಯೂರಿಟಿ ಗಾರ್ಡ್, ಸಹಾಯಕರು, ಉತ್ತಮ ಜೀವನ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದ ಉದ್ಯೋಗಗಳನ್ನು ಪಡೆಯುವ ನೆಪದಲ್ಲಿ ಭಾರತೀಯ ಪ್ರಜೆಗಳನ್ನು ರಷ್ಯಾಕ್ಕೆ ಕಳ್ಳಸಾಗಣೆ ಮಾಡಿದ್ದಾರೆ ಎಂದು ಸಿಬಿಐ ಆರೋಪಿಸಿದೆ.

ರಿಯಾಯತಿ ಶುಲ್ಕಗಳು ಮತ್ತು ವೀಸಾ ವಿಸ್ತರಣೆಗಳನ್ನು ನೀಡುವ ಮೂಲಕ ಸರ್ಕಾರಿ ಅಥವಾ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಬದಲಾಗಿ ರಷ್ಯಾದಲ್ಲಿರುವ ಸಂಶಯಾಸ್ಪದ ಖಾಸಗಿ ವಿಶ್ವವಿದ್ಯಾಲಯಗಳಿಗೆ ಪ್ರವೇಶವನ್ನು ಒದಗಿಸುವ ಮೂಲಕ ಏಜೆಂಟರು ವಿದ್ಯಾರ್ಥಿಗಳನ್ನು ವಂಚಿಸಿದರು, ಅಂತಿಮವಾಗಿ ಅವರು ಸ್ಥಳೀಯ ಏಜೆಂಟರ ಬಳಿ ಸಿಲುಕಿಕೊಳ್ಳುವ ಪರಿಸ್ಥಿತಿ ಉಂಟಾಗಿದೆ.

ಈ ಆಕಾಂಕ್ಷಿಗಳು ರಷ್ಯಾವನ್ನು ತಲುಪಿದ ನಂತರ, ಅವರ ಪಾಸ್‌ಪೋರ್ಟ್‌ಗಳನ್ನು ಅಲ್ಲಿನ ಏಜೆಂಟರು ವಶಪಡಿಸಿಕೊಂಡರು ಮತ್ತು ಯುದ್ಧ ಪಾತ್ರದ ತರಬೇತಿಯ ನಂತರ ಅವರನ್ನು ಸಶಸ್ತ್ರ ಪಡೆಗಳಿಗೆ ಸೇರಲು ಒತ್ತಾಯಿಸಲಾಯಿತು.

ಎಫ್‌ಐಆರ್ ದಾಖಲಿಸಿದ ನಂತರ ಸಿಬಿಐ ದೆಹಲಿ, ತಿರುವನಂತಪುರಂ, ಮುಂಬೈ, ಅಂಬಾಲಾ, ಚಂಡೀಗಢ, ಮಧುರೈ ಮತ್ತು ಚೆನ್ನೈನ 13 ಸ್ಥಳಗಳಲ್ಲಿ ದೇಶಾದ್ಯಂತ ಶೋಧ ನಡೆಸಿತು. "ಈ ಏಜೆಂಟರ ಮಾನವ ಕಳ್ಳಸಾಗಣೆ ಜಾಲವು ದೇಶಾದ್ಯಂತ ಹಲವಾರು ರಾಜ್ಯಗಳಲ್ಲಿ ಹರಡಿದೆ ಮತ್ತು ಅವರು ಸಂಘಟಿತ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ" ಎಂದು ವಕ್ತಾರರು ಹೇಳಿದ್ದಾರೆ.

## ಕೇದಾರನಾಥ ದೇವಾಲಯ ಮೇ 10ರಿಂದ ಭಕ್ತರ ದರ್ಶನಕ್ಕೆ ಮುಕ್ತ



ಕೇದಾರನಾಥ: ಮೇ 10 ರಂದು ಬೆಳಗ್ಗೆ 7 ಗಂಟೆಗೆ ಭಕ್ತರಿಗಾಗಿ ಕೇದಾರನಾಥ ದೇವಾಲಯದ ಬಾಗಿಲು ತೆರೆಯಲಿದೆ ಎಂದು ಬದರಿನಾಥ-ಕೇದಾರನಾಥ ದೇವಾಲಯ ಸಮಿತಿ (BKTC) ಶುಕ್ರವಾರ ಮಹಾಶಿವರಾತ್ರಿಯ ಸಂದರ್ಭದಲ್ಲಿ ಪ್ರಕಟಿಸಿದೆ.

ಉಖಿಮಠದ ಓಂಕಾರೇಶ್ವರ ದೇವಸ್ಥಾನದಲ್ಲಿ ಬಿಕೆಟಿಸಿ ಅಧ್ಯಕ್ಷ ಅಜೇಂದ್ರ ಅಜಯ್ ಅವರು ಇಂದು ಕೇದಾರನಾಥ ಧಾಮ ತೆರೆಯುವ ಘೋಷಣೆ ಮಾಡಿದರು.

ಪ್ರತಿ ವರ್ಷ ಲಕ್ಷಗಟ್ಟಲೆ ಜನ ಭೇಟಿ ನೀಡುವ ಹಿಮಾಲಯದ ಈ ದೇವಾಲಯದ ದ್ವಾರಗಳನ್ನು ಚಳಿಗಾಲದಲ್ಲಿ ಹಿಮದ ಕಾರಣದಿಂದಾಗಿ ಮುಚ್ಚಲಾಗುತ್ತದೆ.

ಮಹಾಶಿವರಾತ್ರಿಯ ಸಂದರ್ಭದಲ್ಲಿ ಜನರಿಗೆ ಶುಭಾಶಯ ಕೋರಿದ ಅಜಯ್ ಅವರು, ಕಳೆದ ಯಾತ್ರೆಯ ಋತುವಿನಲ್ಲಿ ಕೇದಾರನಾಥ ಧಾಮಕ್ಕೆ ದಾಖಲೆಯ ಸಂಖ್ಯೆಯ ಭಕ್ತರು ಭೇಟಿ ನೀಡಿದ್ದು, ಈ ವರ್ಷ ಯಾತ್ರಿಕರ ಸಂಖ್ಯೆ ಮತ್ತಷ್ಟು ಹೆಚ್ಚಾಗಲಿದೆ ಎಂದರು.

ರುದ್ರಪ್ರಯಾಗದಲ್ಲಿರುವ ಕೇದಾರನಾಥ ಧಾಮದ ಬಾಗಿಲುಗಳನ್ನು ವರ್ಷದಲ್ಲಿ 6 ತಿಂಗಳು ಮುಚ್ಚಲಾಗುತ್ತದೆ.

ಇನ್ನು, 6 ತಿಂಗಳ ಕಾಲ ಉಖಿಮಠ, ಪ್ರತಿ ವರ್ಷ ಮಹಾಶಿವರಾತ್ರಿಯ ದಿನದಂದು ಬಾಗಿಲು ತೆರೆಯುವ ದಿನಾಂಕವನ್ನು ಪ್ರಕಟಿಸುತ್ತದೆ.

## ಚುನಾವಣಾ ಬಾಂಡ್: ಗಡುವು ವಿಸ್ತರಣೆ ಕೋರಿ ಎಸ್‌ಬಿಐ ಸಲ್ಲಿಸಿದ ಅರ್ಜಿ ಮಾ. 11ಕ್ಕೆ ಸುಪ್ರೀಂ ವಿಚಾರಣೆ

ನವದೆಹಲಿ: ರಾಜಕೀಯ ಪಕ್ಷಗಳು ನಗದೀಕರಿಸಿದ ಪ್ರತಿ ಚುನಾವಣಾ ಬಾಂಡ್‌ಗಳ ವಿವರ ನೀಡಲು ಜೂನ್ 30 ರವರೆಗೆ ಕಾಲಾವಕಾಶ ಕೋರಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ(-ಎಸ್‌ಬಿಐ) ಸಲ್ಲಿಸಿದ ಅರ್ಜಿಯನ್ನು ಸುಪ್ರೀಂ ಕೋರ್ಟ್‌ನ ಐವರು ನ್ಯಾಯಾಧೀಶರ ಸಂವಿಧಾನ ಪೀಠ ಮಾರ್ಚ್ 11 ರಂದು ವಿಚಾರಣೆ ನಡೆಸಲಿದೆ.

ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ನೇತೃತ್ವದ ಪೀಠ, ರಾಜಕೀಯ ಪಕ್ಷಗಳಿಗೆ ನೀಡಿದ ಕೊಡುಗೆಗಳ ವಿವರಗಳನ್ನು



ಸಲ್ಲಿಸಲು ಸುಪ್ರೀಂ ಕೋರ್ಟ್ ನೀಡಿದ ಮಾರ್ಚ್ 6 ಗಡುವನ್ನು "ಉದ್ದೇಶ ಪೂರ್ವಕವಾಗಿ ಎಸ್ ಬಿಐ ಧಿಕ್ಕರಿಸಿದೆ ಎಂದು ಆರೋಪಿಸಿ, ಬ್ಯಾಂಕ್ ವಿರುದ್ಧ ನ್ಯಾಯಾಂಗ ನಿಂದನೆ ಕ್ರಮ ಆರಂಭಿಸುವಂತೆ ಕೋರಿದ ಪ್ರತ್ಯೇಕ ಮನವಿಯನ್ನು ಸಹ ಸೋಮವಾರ ಆಲಿಸಲಿದೆ.

ಫೆಬ್ರವರಿ 15 ರಂದು ನೀಡಿದ ಮಹತ್ವದ ತೀರ್ಪಿನಲ್ಲಿ, ಐವರು ನ್ಯಾಯಾಧೀಶರ ಸಂವಿಧಾನ ಪೀಠ, ಕೇಂದ್ರದ ಚುನಾವಣಾ ಬಾಂಡ್ ಯೋಜನೆಯನ್ನು ರದ್ದುಗೊಳಿಸಿತ್ತು ಮತ್ತು ಇದು "ಅಸಂವಿಧಾನಿಕ" ಎಂದು ಹೇಳಿತ್ತು.

ರಾಜಕೀಯ ಪಕ್ಷಗಳು ನಗದಾಗಿ ಪರಿವರ್ತಿಸಿಕೊಂಡ ಪ್ರತಿಯೊಂದು ಚುನಾವಣಾ ಬಾಂಡ್ ಗಳ ಕುರಿತು ನಗದಿನ ದಿನಾಂಕ, ಮುಖಬೆಲೆ ಸೇರಿದಂತೆ ಪ್ರತಿಯೊಂದು ಮಾಹಿತಿಯನ್ನು ಎಸ್ ಬಿಐ ಬಹಿರಂಗಗಿಳಿಸಬೇಕು ಎಂದು ಸುಪ್ರೀಂ ಕೋರ್ಟ್ ಆದೇಶಿಸಿದೆ.

## ಇನ್ಫೋಸಿಸ್ ಫೌಂಡೇಶನ್ ಮಾಜಿ ಅಧ್ಯಕ್ಷೆ ಡಾ. ಸುಧಾಮೂರ್ತಿ ರಾಜ್ಯಸಭೆಗೆ ನಾಮನಿರ್ದೇಶನ



ನವದೆಹಲಿ: ಮಹಿಳಾ ದಿನಾಚರಣೆಯಂದು ಪ್ರಧಾನಿ ನರೇಂದ್ರ ಮೋದಿ ಮಹಿಳಾ ಸಮುದಾಯಕ್ಕೆ ಮತ್ತೊಂದು ಗುಡ್ ನ್ಯೂಸ್ ಕೊಟ್ಟಿದ್ದಾರೆ. ಇನ್ಫೋಸಿಸ್ ಫೌಂಡೇಶನ್ ಮಾಜಿ ಅಧ್ಯಕ್ಷೆ, ಸಮಾಜಸೇವಕಿ, ಲೇಖಕಿ ಡಾ ಸುಧಾಮೂರ್ತಿ ರಾಜ್ಯಸಭೆಗೆ ನಾಮನಿರ್ದೇಶನಗೊಂಡಿದ್ದಾರೆ. ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ಡಾ ಸುಧಾಮೂರ್ತಿಯವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿದ್ದಾರೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಟ್ವೀಟ್ ಮೂಲಕ ತಿಳಿಸಿದ್ದಾರೆ. ಖುಷಿಯ ವಿಚಾರವನ್ನು ಹಂಚಿಕೊಂಡಿರುವ ಅವರು, "ಭಾರತದ ರಾಷ್ಟ್ರಪತಿಗಳು ಸುಧಾ ಮೂರ್ತಿ ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿರುವುದು ನನಗೆ ಖುಷಿ ತಂದಿದೆ. ಸಮಾಜಸೇವೆ, ಲೋಕೋಪಕಾರಿ ಮತ್ತು ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಸುಧಾಮೂರ್ತಿಯವರ ಕೊಡುಗೆ ಅಪಾರ ಮತ್ತು ಸ್ಫೂರ್ತಿದಾಯಕವಾಗಿದೆ. ರಾಜ್ಯಸಭೆಯಲ್ಲಿ ಅವರ ಉಪಸ್ಥಿತಿಯು ನಮ್ಮ 'ಪ್ರಬಲ ಸಾಕ್ಷಿಯಾಗಿದೆ. ನಾರಿ ಶಕ್ತಿ', ನಮ್ಮ ದೇಶದ ಭವಿಷ್ಯ ರೂಪಿಸುವಲ್ಲಿ ಮಹಿಳೆಯರ ಶಕ್ತಿ ಮತ್ತು ಸಾಮರ್ಥ್ಯವನ್ನು ಉದಾಹರಿಸುತ್ತದೆ. ರಾಜ್ಯಸಭೆ ಸದಸ್ಯೆಯಾಗಿ ಅವರ ಮುಂದಿನ ಪಯಣ ಶುಭಕರವಾಗಿರಲಿ." ಎಂದು ಆಶಯ ವ್ಯಕ್ತಪಡಿಸಿದ್ದಾರೆ.

## ಅನೈತಿಕ ಸಂಬಂಧ ಹೊಂದಿದ ಪತ್ನಿಗೆ ಜೀವನಾಂಶ ಇಲ್ಲ

ಬೆಂಗಳೂರು : ರಾಜ್ಯ ಹೈಕೋರ್ಟ್ ವಿಭಿನ್ನ ರೀತಿಯ ತೀರ್ಪೊಂದನ್ನು ನೀಡಿದೆ. ಗಂಡನಿಂದ ಡಿವೋರ್ಸ್ ಪಡೆಯಲು ಅರ್ಜಿ ಸಲ್ಲಿಸಿದ ಮಹಿಳೆ ಬೇರೆ ಪುರುಷನೊಂದಿಗೆ ಸಂಬಂಧ ಹೊಂದಿದ್ದರೆ ಜೀವನಾಂಶ ಪಡೆಯಲು ಸಾಧ್ಯವಿಲ್ಲ ಎಂದು ತಿಳಿಸಿದೆ.

ಮಹಿಳೆಯೊಬ್ಬರು ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ, 2005 (ಡಿವಿ ಕಾಯ್ದೆ) ಸೆಕ್ಷನ್ 12 ರ ಅಡಿಯಲ್ಲಿ ಜೀವನಾಂಶ ನೀಡಲು ನಿರಾಕರಿಸಿದ ಆದೇಶದ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅದನ್ನು ವಜಾಗೊಳಿಸುವಾಗ ನ್ಯಾಯಮೂರ್ತಿ ರಾಜೇಂದ್ರ ಬಾದಾಮಿಕರ್ ಅವರು ಈ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಅರ್ಜಿದಾರ ಪತ್ನಿಯು ತನ್ನ ಪತಿಯೊಂದಿಗೆ ಪ್ರಾಮಾಣಿಕವಾಗಿರದೆ ತನ್ನ ನೆರೆಹೊರೆಯವರೊಂದಿಗೆ ವಿವಾಹೇತರ ಸಂಬಂಧಗಳನ್ನು ಹೊಂದಿದ್ದಳು ಎಂಬುದನ್ನು ಸಾಕ್ಷಿಗಳಿಂದ ತಿಳಿದುಬಂದಿದೆ ಎಂದು ನ್ಯಾಯಾಲಯ ಹೇಳಿದೆ.




ಕಾನೂನು ಬದ್ಧವಾಗಿ ಮದುವೆಯಾಗಿದ್ದೇನೆ. ಹೀಗಾಗಿ ಜೀವನಾಂಶಕ್ಕೆ ಅರ್ಹಳು ಎಂಬ ವಾದವನ್ನು ಒಪ್ಪಿಕೊಳ್ಳಲಾಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ.

ಇನ್ನೂ ವ್ಯಭಿಚಾರ ಮಾಡುತ್ತಿರುವಾಗ ಆಕೆ ಜೀವನಾಂಶವನ್ನು ಕೇಳುವ ಪ್ರಶ್ನೆಯೇ ಇಲ್ಲ. ಅರ್ಜಿದಾರರು ಕಾನೂನುಬದ್ಧವಾಗಿ ವಿವಾಹವಾದ ಪತ್ನಿ ಮತ್ತು ಜೀವನಾಂಶಕ್ಕೆ ಅರ್ಹರು ಎಂಬ ಅರ್ಜಿದಾರರ ವಾದವನ್ನು ಪರಿಗಣಿಸಲು ಒಪ್ಪಿಕೊಳ್ಳಲಾಗುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

## ನಾಸೀರ್ ಹುಸೇನ್ ಗೆ ಪ್ರಮಾಣ ವಚನ ಮಾಡಲು ಬಿಡಬೇಡಿ: ಸಚಿವ ರಾಜಣ್ಣ

ತುಮಕೂರು: ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾಗಿರುವ ನಾಸೀರ್ ಹುಸೇನ್ ಅವರಿಗೆ ಪ್ರಮಾಣ ವಚನ ಮಾಡಲು ಬಿಡಬಾರದು ಎಂದು ಸಹಕಾರಿ ಸಚಿವ ಕೆ.ಎನ್. ರಾಜಣ್ಣ ಹೇಳಿದ್ದಾರೆ.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಸಿರ್ ಹುಸೇನ್ ಗೆಲುವಿನ ಬಳಿಕ ಅವರ ಹಿಂಬಾಲಕರು ಪಾಕ್ ಪರ ಘೋಷಣೆ ಕೂಗಿರುವುದರಲ್ಲಿ ಅವರ ಪಾತ್ರ ಇದ್ದರೆ ಅವರಿಗೆ ಪ್ರಮಾಣ ವಚನ ಮಾಡಲು ಬಿಡಬಾರದು ಮತ್ತು ಅವರನ್ನು ರಾಜ್ಯಸಭಾ ಸದಸ್ಯರಾಗಿನ್ನಾಗಿ ಮಾಡಬಾರದು ಎಂದರು.



ಪಾಕ್ ಪರ ಘೋಷಣೆಯಲ್ಲಿ ನಾಸಿರ್ ಹುಸೇನ್ ಅವರ ಪಾತ್ರ ಸಾಬೀತಾದರೆ ಬಿಜೆಪಿಯವರು ಅವನ ಪ್ರಮಾಣ ವಚನ ತಡೆಯಲಿ ಎಂಬುದು ನನ್ನ ಆಗ್ರಹ ಎಂದು ತಿಳಿಸಿದರು.

ರಾಮೇಶ್ವರಂ ಕೆಫೆ ಬಾಂಬ್ ಬ್ಲಾಸ್ಟ್ ವಿಚಾರವಾಗಿ ಮಾತನಾಡಿದ ಅವರು, ಸಮಾಜಘಾತುಕ ಕೆಲಸ ಮಾಡುವವರ ವಿರುದ್ಧ ಶೂಟ್ ಡೌನ್ ಕಾನೂನು ತರಬೇಕು. ಯಾರೇ ಮಾಡಿದರೂ ಇದನ್ನು ಖಂಡಿಸಲೇಬೇಕು. ಬೇರೆ ದೇಶಗಳಲ್ಲಿ ಇಂತವರಿಗೆ ತಕ್ಷಣ ಶೂಟ್ ಡೌನ್ ಮಾಡುತ್ತಾರೆ.

ಅದೇ ರೀತಿ ಭಾರತದಲ್ಲೂ ಭಯೋತ್ಪಾದಕರ ವಿರುದ್ಧ ಕಠಿಣ ಕಾನೂನು ಕಾನೂನು ಜಾರಿಯಾಗಬೇಕು ಎಂದು ಹೇಳಿದರು.

## ಗದ್ದೆಯಲ್ಲಿ ನವಜಾತ ಶಿಶು ಹೂತಿಟ್ಟು ಹೋದ ದುರುಳರು

ಕೊಡಗು:ಕೆಸರು ಗದ್ದೆಯಲ್ಲಿ ನವಜಾತ ಶಿಶುವನ್ನು ಹೂತು ಹೋಗಿರುವ ಘಟನೆ ಕೊಡಗು ಜಿಲ್ಲೆಯ ಸುಂಟಿಕೊಪ್ಪದ ಗದ್ದೆಹಳ್ಳದ ಜಮೀನೊಂದರಲ್ಲಿ ನಡೆದಿದೆ.

ಯಾರೋ ದುಷ್ಕರ್ಮಿಗಳು ಕೊಂದು ಶಿಶುವನ್ನು ಗದ್ದೆಯಲ್ಲಿ ಹೂತುಹೋಗಿದ್ದಾರೆ. ಸಂಜೆ ಸ್ಥಳೀಯ ರೈತರಿಗೆ ಗದ್ದೆಯಿಂದ ದುರ್ವಾಸನೆ ಬಂದಿದೆ. ಈ ಹಿನ್ನೆಲೆ ಇಂದು ಮುಂಜಾನೆ ಸ್ಥಳಕ್ಕೆ ಹೋಗಿ ಪರಿಶೀಲಿಸಿದಾಗ ಘಟನೆ ಬೆಳಕಿಗೆ ಬಂದಿದೆ. ಹೂತಿದ್ದ ಮಣ್ಣು ತೆಗೆದಾಗ ನವಜಾತ ಶಿಶುವಿನ ಮೃತದೇಹ ಪತ್ತೆಯಾಗಿದೆ. ನವಜಾತ ಶಿಶು ಹೆಣ್ಣು ಎಂದು ಹೂಳಲಾಗಿದೆಯೇ, ಹತ್ಯೆ ಮಾಡಿದ್ದಾರೆ ಈ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ. ಘಟನೆ ಬಳಿಕ ಸುಂಟಿಕೊಪ್ಪ ಪೊಲೀಸರು, ಕುಶಾಲನಗರ ತಹಸೀಲ್ದಾರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸುಂಟಿಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಲೋಕಸಭೆಗೆ ಕಾಂಗ್ರೆಸ್‌ನ 9 ಅಭ್ಯರ್ಥಿಗಳ ಫೈನಲ್: ಇವರೇ ನೋಡಿ ಕೈಕಲಿಗಳು

ಬೆಂಗಳೂರು: ಲೋಕಸಭಾ ಚುನಾವಣೆ ಇನ್ನೇನು ಹತ್ತಿರ ಬಂದೇಬಿಟ್ಟಿದೆ. ಹೀಗಾಗಿ ರಾಜಕೀಯ ಪಕ್ಷಗಳಲ್ಲಿ ದಿನೇ ದಿನೇ ಆತಂಕಗಳು ಹೆಚ್ಚಾಗ ತೊಡಗಿವೆ. ಹೀಗಾಗಿ ಪ್ರತಿಯೊಂದು ಹೆಜ್ಜೆಯನ್ನೂ ಲೆಕ್ಕಾಚಾರ ಮಾಡಿ ಇಡುತ್ತಿದ್ದಾರೆ. ಬಿಜೆಪಿ ಈಗಾಗಲೇ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಎರಡನೇ ಪಟ್ಟಿ ಬಿಡುಗಡೆಗೆ ಸಜ್ಜಾಗಿದೆ. ಅದರಲ್ಲಿ ಕರ್ನಾಟಕದ ಅಭ್ಯರ್ಥಿಗಳ ಹೆಸರನ್ನೂ ಘೋಷಣೆ ಮಾಡಲಿದೆ. ಅದೇ ಕಾಂಗ್ರೆಸ್ ಸಹ ಭರ್ಜರಿ ಸಿದ್ಧತೆಯಲ್ಲಿ ತೊಡಗಿದೆ. ಅಭ್ಯರ್ಥಿಗಳ ಆಯ್ಕೆ ಸಂಬಂಧ ಗುರುವಾರ ನವ ದೆಹಲಿಯಲ್ಲಿ ಸಭೆ ನಡೆಸಲಾಗಿದೆ. ಇಲ್ಲಿ ಕರ್ನಾಟಕದ 14 ಕ್ಷೇತ್ರಗಳ ಬಗ್ಗೆ ಚರ್ಚೆಯಾಗಿ 9 ಕ್ಷೇತ್ರಗಳ ಅಭ್ಯರ್ಥಿಗಳನ್ನು ಅಂತಿಮಗೊಳಿಸಲಾಗಿದೆ.

ಹೈಕಮಾಂಡ್ ಸಭೆಗೆ ಮುಂಚಿತವಾಗಿ ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಚರ್ಚೆ ನಡೆಸಿ ಒಂದು ಹಂತದ ಪಟ್ಟಿಯನ್ನು ಸಿದ್ಧಪಡಿಸಿದ್ದರು. ಈ ಪಟ್ಟಿಯ ಬಗ್ಗೆ ಹೈಕಮಾಂಡ್‌ನಲ್ಲಿ ಚರ್ಚೆಯಾಗಿದ್ದು, 9 ಅಭ್ಯರ್ಥಿಗಳ ಪಟ್ಟಿಯನ್ನು ಫೈನಲ್ ಮಾಡಲಾಗಿದೆ.

ಇನ್ನೂ 19 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆ ಬಾಕಿ ಇದ್ದು, ಇವುಗಳನ್ನು ಸೋಮವಾರ ನಡೆಯಲಿರುವ ಸಭೆಯಲ್ಲಿ ಅಂತಿಮ ಮಾಡಲಾಗುವುದು ಎಂದು ತಿಳಿದುಬಂದಿದೆ. ಆದರೆ, ಈ ಮಧ್ಯೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಶುಕ್ರವಾರವೂ ನಾಯಕರು ಭೇಟಿ ಮಾಡಿ ಚರ್ಚೆ ನಡೆಸಿದ್ದು, ಇಂದೇ ಐದಾರು ಕ್ಷೇತ್ರಗಳ ಅಭ್ಯರ್ಥಿಗಳ ಹೆಸರನ್ನು



ಅಂತಿಮಗೊಳಿಸುವ ಸಾಧ್ಯತೆ ಇದೆ ಎಂದು ದೆಹಲಿ ಕಾಂಗ್ರೆಸ್ ಮೂಲಕಗಳು ತಿಳಿಸಿವೆ.

ಕಾಂಗ್ರೆಸ್‌ನಿಂದ ಎಷ್ಟು ಪಟ್ಟಿ ಬಿಡುಗಡೆ? ಈಗ ಕಾಂಗ್ರೆಸ್ ಎಷ್ಟು ಪಟ್ಟಿ ಬಿಡುಗಡೆ ಮಾಡುತ್ತದೆ ಎಂಬುದು ಸದ್ಯದ ಕುತೂಹಲವಾಗಿದೆ. ಒಂದಾ, ಎರಡೇ? ಮೂರೇ? ಹೀಗೆ ಎಷ್ಟು ಪಟ್ಟಿಯನ್ನು ಬಿಡುಗಡೆ ಮಾಡಲಾಗುತ್ತದೆ ಎಂಬುದು ಸದ್ಯದ ಕುತೂಹಲವಾಗಿದೆ. ಕೆಲವು ಕ್ಷೇತ್ರಗಳಿಗೆ ಪ್ರಬಲ ಅಭ್ಯರ್ಥಿಗಳ ಕೊರತೆ ಇದೆ. ಈ ಹಿನ್ನೆಲೆಯಲ್ಲಿ ಕೆಲವು ಕಡೆ ಕಾದು ನೋಡುವ ತಂತ್ರಕ್ಕೆ ಮೊರೆ ಹೋಗಲಾಗಿದೆ. ಈಗ ಬಿಜೆಪಿ 28 ಕ್ಷೇತ್ರಗಳಿಗೆ ಟಿಕೆಟ್ ಫೈನಲ್ ಮಾಡುವವರೆಗೂ ಕೈಪಡೆ ಕಾಯಲಿದೆ. ಹೀಗಾಗಿ ಎರಡು ಪಟ್ಟಿ ಬಿಡುಗಡೆ ಮಾಡಲಿರುವ ಕಾಂಗ್ರೆಸ್, ಮೂರನೇ ಪಟ್ಟಿಯನ್ನು ಬಿಡುಗಡೆ ಮಾಡಲು ವಿಳಂಬ ಮಾಡಲಿದೆ.

ಅಭ್ಯರ್ಥಿ ಕೊರತೆ ಇರುವ ಕ್ಷೇತ್ರಗಳಲ್ಲಿ ಪ್ರಬಲ ಅಭ್ಯರ್ಥಿಗಾಗಿ ಹುಡುಕಾಟ ನಡೆಸುತ್ತಿರುವ ಕಾಂಗ್ರೆಸ್ ಈಗ ಬಿಜೆಪಿ ಬೆಳವಣಿಗೆಯನ್ನು ಸೂಕ್ಷ್ಮವಾಗಿ ಗಮನಿಸಲು ಮುಂದಾಗಿದೆ. ಅಲ್ಲಿ ಟಿಕೆಟ್ ವಂಚಿತರನ್ನು ಪಕ್ಷಕ್ಕೆ ಸೆಳೆಯುವ ಬಗ್ಗೆ ಯೋಚನೆ ಮಾಡಲಾಗಿದೆ. ಹೀಗಾಗಿ ಐದಾರು ಕ್ಷೇತ್ರಗಳ ಅಭ್ಯರ್ಥಿಗಳನ್ನು ಕೊನೇ ಗಳಿಗೆಯಲ್ಲಿ ಘೋಷಣೆ ಮಾಡುವ ನಿರ್ಧಾರಕ್ಕೆ ಕಾಂಗ್ರೆಸ್ ಬಂದಿದೆ.

**ಈ 9 ಮಂದಿಗೆ ಟಿಕೆಟ್ ಫೈನಲ್?**

ಬೆಂಗಳೂರು ಗ್ರಾಮಾಂತರ- ಡಿ.ಕೆ. ಸುರೇಶ್
ಬೆಂಗಳೂರು ಕೇಂದ್ರ- ಎನ್.ಎ. ಹ್ಯಾರಿಸ್
ತುಮಕೂರು- ಮುದ್ದಹನುಮೇಗೌಡ
ಚಿತ್ರದುರ್ಗ- ಚಂದ್ರಪ್ಪ
ಕೋಲಾರ- ಕೆ.ಎಚ್. ಮುನಿಯಪ್ಪ
ಮಂಡ್ಯ- ಸ್ಟಾರ್ ಚಂದ್ರು (ವೆಂಕಟರಾಮಣೇಗೌಡ)
ಮೈಸೂರು- ಎಂ. ಲಕ್ಷ್ಮಣ್
ಬೀದರ್- ರಾಜಶೇಖರ್ ಪಾಟೀಲ್
ಕಲಬುರಗಿ- ರಾಧಾಕೃಷ್ಣ

# ಮೌಲ್ಯಾಂಕನವೆಂಬ ಮೌಲ್ಯಮಾಪನ



ಶೈಕ್ಷಣಿಕ ವರ್ಷದ ಕೊನೆಯ ತಿಂಗಳು ಮಾರ್ಚ್ ಬಂತೆಂದರೆ ಕಲಿಕೆಯ ಮೌಲ್ಯಮಾಪನ ಮಾಡುವ ಕಾರ್ಯಕ್ಕೆ ಶಿಕ್ಷಣ ಕ್ಷೇತ್ರ ಅಣಿಗೊಳ್ಳುತ್ತದೆ.ಪರೀಕ್ಷೆಯ ದಿನಗಳು ಸಮೀಪಿಸುತ್ತಿದ್ದಂತೆ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಸಮರ ವೀರರಂತೆ ಸಿದ್ಧತೆ ನಡೆಸುವುದು ಸರ್ವೇಸಾಮಾನ್ಯವಾಗಿದೆ. ಕೇವಲ 10 ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಿಗೆ ಮಕ್ಕಳು ನೇರವಾಗಿ ಪಬ್ಲಿಕ್ ಪರೀಕ್ಷೆ ಎದುರಿಸುತ್ತಿಲ್ಲ.ರಾಜ್ಯ ಪಠ್ಯಕ್ರಮದ 5,8 ಮತ್ತು 9 ನೇ ತರಗತಿ ವಿದ್ಯಾರ್ಥಿಗಳು ಕೂಡ ಇಡೀ ರಾಜ್ಯದಾದ್ಯಂತ ಏಕಕಾಲದಲ್ಲಿ ಪರೀಕ್ಷೆ ಬರೆಯುವ ಮೌಲ್ಯಾಂಕನ ಪರೀಕ್ಷೆಯ ತಯಾರಿಯಲ್ಲಿದ್ದಾರೆ. ಮಾರ್ಚ್ 11 ರಿಂದ ಪರೀಕ್ಷೆ ನಡೆಯುವ ವೇಳಾಪಟ್ಟಿ ಕೂಡ ಪ್ರಕಟಗೊಂಡಿದೆ.ಮಕ್ಕಳು ಆತಂಕ ರಹಿತವಾಗಿ ಪರೀಕ್ಷೆ ಎದುರಿಸಿದರೆ ಯಶಸ್ವಿ ಫಲಿತಾಂಶ ಪಡೆಯಬಹುದು.

**ಪರೀಕ್ಷಾ ತಯಾರಿ ಹೀಗಿರಲಿ :**

ಮಕ್ಕಳನ್ನು ಉತ್ತೀರ್ಣ / ಅನುತ್ತೀರ್ಣ ಮಾಡುವುದು ಮುಖ್ಯವಲ್ಲ, ವಯಸ್ಸು ಮತ್ತು ತರಗತಿಗೆ ಅನುಗುಣವಾಗಿ ಮಕ್ಕಳ ಕಲಿಕೆಯ ಪ್ರಗತಿಯಾಗುತ್ತಿದೆಯೇ ಎಂಬುದನ್ನು ತಿಳಿಯುವುದು ಅವಶ್ಯಕವಾಗಿದೆ ಎಂಬ ಉದ್ದೇಶದಿಂದ ಈ ಪರೀಕ್ಷೆ ನಡೆಯುತ್ತಿದೆ ಎಂಬುದನ್ನು ಮೊದಲು ಮನಗಾಣಬೇಕು. 5 ನೇ ತರಗತಿ ಮಕ್ಕಳಿಗೆ ಈವರೆಗೆ ಕೇವಲ ಶಾಲಾ ಹಂತದ ಪರೀಕ್ಷೆಗಳನ್ನು ಮಾತ್ರ ಎದು-ರಿಸಿದ ಅನುಭವ ಇರುತ್ತದೆ.ಕೆಲವು ಮಕ್ಕಳು ಮಾತ್ರ ವಸತಿ ಶಿಕ್ಷಣ ಸಂಸೆಕ್ಥೊಗಳಿಗ ಪ್ರವೇಶ ಪರೀಕ್ಷೆ ಬರೆದಿರುತ್ತಾರೆ.ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಅಭ್ಯಾಸ ಮಾಡುವುದರಿಂದ ಮೊದಲ ಬಾರಿ ರಾಜ್ಯ ಮಟ್ಟದ ಪರೀಕ್ಷೆ ಎದುರಿಸುವ ಭಯ ದೂರ ಮಾಡಬಹುದು. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ ( ಕೆ.ಎಸ್.ಕ್ಯು.ಎ.ಎ.ಸಿ) ಯ ವೆಬ್ ಸೈಟ್ ನಿಂದ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಡೌನ್ಲೋಡ್ ಮಾಡಿಕೊಂಡು ಅಭ್ಯಾಸ ಮಾಡಬಹುದಾಗಿದೆ.

ಬಹು ಆಯ್ಕೆ ಮಾದರಿಯಲ್ಲಿ ಪ್ರಶ್ನೆಗಳು ಇರುವುದರಿಂದ ಯಾವುದೇ ಗೊಂದಲವಿಲ್ಲದೆ ನಿಖರವಾದ ಉತ್ತರವನ್ನು ಆರಿಸುವಷ್ಟು ಕಲಿಕೆ ಮನನವಾಗಿರಬೇಕು.ಭಾಷಾ ವಿಷಯದಲ್ಲಿ ವ್ಯಾಕರಣಾಂಶಗಳ ಕರಾರುವಕ್ಕಾದ ಅಭ್ಯಾಸವು ಹೆಚ್ಚು ಅಂಕ ಗಳಿಕೆಗೆ ಸಹಕಾ-ರಿಯಾಗುತ್ತದೆ. ಕುರುಡು ಕಂಠಪಾಠದ ಸುದೀರ್ಘ ಪ್ರಶ್ನೋತ್ತರಗಳ ಕಲಿಕೆಗೆ ಗಮನ ನೀಡುವುದಕ್ಕಿಂತ ,ವಿಷಯಾಂಶವನ್ನು ಅರ್ಥ-ೈಸಿಕೊಂಡು ಸ್ವಯಂ ಉತ್ತರಿಸುವ ಅನ್ವಯ ಮಾದರಿ ಪ್ರಶ್ನೆಗಳಿಗೆ ಉತ್ತರಿಸುವ ಸಾಮರ್ಥ್ಯ ಇಲ್ಲಿ ಅತ್ಯಗತ್ಯವಾಗಿರುತ್ತದೆ.ಮಾದರಿ ಪ್ರಶ್ನೆ ಪತ್ರಿಕೆಯಲ್ಲಿ ನೀಡಿದ ಪ್ರಶ್ನೆಗಳಂತೆ ತಾವೇ ಬಹು ಆಯ್ಕೆ ಪ್ರಶ್ನೆಗಳ ಬ್ಯಾಂಕ್ ಒಂದನ್ನು ಶಿಕ್ಷಕರ ಮಾರ್ಗದರ್ಶನದಲ್ಲಿ ತಯಾರಿಸಿಕೊಂಡು ಅಭ್ಯಾಸ ಮಾಡಬಹುದಾಗಿದೆ.

**ಭವಿಷ್ಯದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಡಿಗಲ್ಲು:**

ಇತ್ತೀಚಿನ ವರ್ಷಗಳಲ್ಲಿ ಅನೇಕ ಸರ್ಕಾರಿ ಉದ್ಯೋಗಳು,ಸರ್ಕಾರೇತರ ಕೆಲವು ಉದ್ಯೋಗಗಳಿಗೂ ಲಿಖಿತ ಪರೀಕ್ಷೆ ಸಾಮಾನ್ಯವಾಗಿರುತ್ತವೆ. ಇದರಲ್ಲಿ ಬಹು ಆಯ್ಕೆ ಮಾದ-ರಿಯ ಲಿಖಿತ ಪರೀಕ್ಷೆ ಯನ್ನು ಸ್ಪರ್ಧಾತ್ಮಕ ಪರೀಕ್ಷೆಯಾಗಿ ಎದು-ರಿಸಬೇಕಾಗುತ್ತದೆ. ಹಾಗಾಗಿ ಬಹು ಆಯ್ಕೆ ಪ್ರಶ್ನೆ ಅಧಿಕವಾಗಿರುವ 5,8 ಮತ್ತು 9 ನೇ ತರಗತಿಯ ಮೌಲ್ಯಾಂಕನ ಪರೀಕ್ಷೆಗಳು ಭವಿಷ್ಯದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಡಿಗಲ್ಲು ಎಂಬಂತೆ ಆಸಕ್ತಿಯಿಂದ ವಿದ್ಯಾರ್ಥಿಗಳು ತಯಾರಿ ನಡೆಸಬೇಕಿದೆ.ವಿದ್ಯಾರ್ಥಿ ಜೀವನದಲ್ಲಿ ಉನ್ನತ ಶಿಕ್ಷಣ ಪಡೆಯಲು ಅಗತ್ಯವಿರುವ ಸಿಇಟಿ,ನೀಟ್,ಜೆಇಇ-ಯಂತಹ ಪರೀಕ್ಷೆಗಳನ್ನೂ ಕೂಡ ಆತ್ಮವಿಶ್ವಾಸದಿಂದ ಎದುರಿಸಲು ರಾಜ್ಯ ಮಟ್ಟದ ಮೌಲ್ಯಾಂಕನ ಪರೀಕ್ಷೆ ಉತ್ತಮ ಅನುಭವವನ್ನು ನೀಡುತ್ತದೆ.

**ಪರೀಕ್ಷಾ ದಿನ ಗಾಬರಿ ಬೇಡ:**

ಪರೀಕ್ಷಾ ಮೇಲ್ವಿಚಾರಕರಾಗಿ ಬೇರೆ ಶಾಲೆಯ ಶಿಕ್ಷಕರು ಪರೀಕ್ಷಾ ಕೊಠಡಿಗೆ ಆಗಮಿಸುತ್ತಾರೆ. 5 ನೇ ತರಗತಿ ತನಕ ತಮ್ಮದೇ ಶಾಲಾ ಶಿಕ್ಷಕರ ಮೇಲ್ವಿಚಾರಣೆಯಲ್ಲಿ ಪರೀಕ್ಷೆ ಬರೆದ ಪುಟ್ಟ ಮಕ್ಕಳು ಒಮ್ಮೆಲೇ ಗಾಬರಿಯಾಗುವ ಅಗತ್ಯವಿಲ್ಲ.ತಮ್ಮದೇ ಶಾಲಾ ಕೊಠಡಿಯಲ್ಲಿ ಪರೀಕ್ಷೆ ನಡೆಯುವುದರಿಂದ ನಿರಾತಂಕವಾಗಿ ಬರೆಯಲು ಆತ್ಮ ವಿಶ್ವಾಸ ಬೆಳೆಸಿಕೊಳ್ಳಬೇಕಿದೆ.

**ಪೋಷಕರ ಕಾಳಜಿ:**

ಮೌಲ್ಯಾಂಕನ ಪರೀಕ್ಷೆಯ ಬಗೆಗೆ ಪೋಷಕರು ತಮ್ಮ ಮಕ್ಕಳಿಗೆ ಯಾವುದೇ ರೀತಿಯ ಒತ್ತಡ ಹೇರುವ ಅಗತ್ಯವಿಲ್ಲ.ನವೆಂಬರ್ ನಂತರದ ದ್ವಿತೀಯ ಸೆಮಿಸ್ಟರ್ ಅವಧಿಯ ಪಾಠಗಳನ್ನು ಪ್ರತಿನಿತ್ಯ ಅಭ್ಯಾಸ ಮಾಡಲು ಮಕ್ಕಳಿಗೆ ಪ್ರೇರೇಪಿಸಬೇಕು.ಮಾದರಿ ಪ್ರಶ್ನೆ ಪತ್ರಿಕೆಯ ಆಧಾರದಲ್ಲಿ ಮಕ್ಕಳು ಪೂರ್ವ ತಯಾರಿ ಮಾಡಿಕೊಳ್ಳಲು ಮಾರ್ಗದರ್ಶನ ನೀಡಬೇಕಿದೆ.ಪರೀಕ್ಷಾ ದಿನದಂದು ಬರೆಯಲು ಅಗತ್ಯವಿರುವ ಲೇಖನ ಸಾಮಗ್ರಿಗಳನ್ನು ಖರೀದಿಸಿ ತೆಗೆದುಕೊಂಡು ಹೋಗಲು ಮಕ್ಕಳಿಗೆ ಸಹಕರಿಸಬೇಕು.

**ಶಿಕ್ಷಕರ ಸಹಕಾರವೂ ಮುಖ್ಯ:**

ಶಾಲಾ ಹಂತದಲ್ಲಿ ರೂಪಣಾತ್ಮಕ ಮೌಲ್ಯಮಾಪನ ಮತ್ತು ಒಂದನೇ ಸಂಕಲನಾತ್ಮಕ ಮೌಲ್ಯಮಾಪನ ಎದುರಿಸಿದ 5,8,9 ನೇ ತರಗತಿಯ ಮಕ್ಕಳು, ಎರಡನೇ ಸಂಕಲನಾತ್ಮಕ ಮೌಲ್ಯಮಾಪನಕ್ಕಾಗಿ ರಾಜ್ಯ ಮಟ್ಟದ ಮೌಲ್ಯಾಂಕನ ಪರೀಕ್ಷೆ ಎದುರಿಸುವಾಗ ಶಿಕ್ಷಕರು ಮಕ್ಕಳಿಗೆ ಆತ್ಮವಿಶ್ವಾಸ ಮೂಡಿಸಬೇಕು.ತರಗತಿಯಲ್ಲಿ ಪುನರ್ಮನನ, ಸ್ವಕಲಿಕೆ,ಅಣಕು ಪರೀಕ್ಷೆಗಳ ಮೂಲಕ ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡಿಸಬಹುದಾಗಿದೆ.ಮೌಲ್ಯಾಂಕನದ ದಿನದಂದು ಪರೀಕ್ಷಾ ಪಾರದರ್ಶಕತೆ ಮತ್ತು ಗೊಂದಲರಹಿತ ಪರೀಕ್ಷೆ ನಡೆಸುವುದು ಅತ್ಯಗತ್ಯವಾಗಿದೆ.

ಪರೀಕ್ಷೆ ಎಂಬುದು ಮಕ್ಕಳಿಗೆ ಶಿಕ್ಷೆಯಂತಾಗದೆ ಮಕ್ಕಳು ಪರೀಕ್ಷೆಯನ್ನು ಕಲಿಕೆಯ ಭಾಗವಾಗಿ ಸಂಭ್ರಮಿಸಬೇಕಿದೆ.ಆ ನಿಟ್ಟಿನಲ್ಲಿ ಪೋಷಕರು ಮತ್ತು ಶಿಕ್ಷಕರು ಮಕ್ಕಳಿಗೆ ಪೂರ್ಣ ಪ್ರಮಾಣದ ಸಹಕಾರ ಮತ್ತು ಪ್ರೋತ್ಸಾಹ ನೀಡಿ ಗುಣಮಟ್ಟದ ಫಲಿತಾಂಶ ಪಡೆಯಲು ಪ್ರೇರೇಪಿಸೋಣ.

# ವರ್ತಮಾನಕ್ಕೆ ಬೇಕು ಸಾಂತ್ವನದ ಮುಲಾಮು


ನಮ್ಮ ಭರತಭೂಮಿಯ ವೈಶಿಷ್ಟವೇ ಹಾಗೆ. ಹತ್ತಾರು ಮತಪಂಥಗಳು, ನೂರಾರು ಜಾತಿ, ಬುಡಕಟ್ಟುಗಳು, ಸಾವಿರಾರು ಭಾಷೆ, ಬೋಧೆಗಳಲ್ಲಿ ಹಸನುಗೊಂಡ ಸಮೃದ್ಧ ನೆಲವಿದು. ಸರ್ವಜನಾಂಗದ ಶಾಂತಿಯ ಪ್ರಜಾತಂತ್ರ ತೋಟದಲ್ಲಿ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ವಿಭಿನ್ನ ಹಿನ್ನೆಲೆ. ಜನಮನದ ಸಾಮಾನ್ಯ ತುಡಿತಗಳಲ್ಲಿ ಭಕ್ತಿಭಾವವೂ ಒಂದು. ಆರಾಧಿಸುವ ದೇವರು, ಆರಾಧನಾ ಕ್ರಮಗಳಲ್ಲಿ ಭಿನ್ನತೆಯಿದ್ದರೂ ಧಾರ್ಮಿಕಶ್ರದ್ಧೆಯು ಸಾಮಾಜಿಕ ನೈತಿಕತೆಗೆ ಮೂಲದ್ರವ್ಯವಾಗಿಯೂ ವೈಯಕ್ತಿಕ ನೆಲೆಯಲ್ಲಿ ಸನ್ಮಾರ್ಗದ ದಿಕ್ಸೂಚಿಯಾಗಿಯೂ ಒದಗುತ್ತಾ ಬಂದಿದ್ದಕ್ಕೆ ಇತಿಹಾಸದಲ್ಲಿ ಕುರುಹುಗಳಿವೆ.

ಹಾಗಿದ್ದೂ ಮೌಲ್ಯಗಳು ಅಧಃಪತನ ಕಂಡಿರುವ ಪ್ರಸ್ತುತ ದುರಿತ ಕಾಲಘಟ್ಟದಲ್ಲಿ, ಭಕ್ತಿಭಾವ ಕೂಡ ಇತರ ಪದಾರ್ಥಗಳಂತೆ ಸ್ವಾರ್ಥಕ್ಕೋ ಲಾಭಕ್ಕೋ ಹಣ, ಅಧಿಕಾರವೆಂಬ ವಿಷದೊಟ್ಟಿಗೆ ಸೇರಿ ಕಲಬೆರಕೆ ಗೊಂಡಿರುವುದು ಸತ್ಯ. ಹೊಸ್ತಿಲ ಒಳಗಿರಬೇಕಾದ ವೈಯಕ್ತಿಕ ನೆಲೆಯ ಜಾತಿಮತಗಳ ಪ್ರೀತಿ, ನಂಬಿಕೆ, ಆಚರಣೆಗಳಂತೂ ಈಗ ಬೀದಿಗೆ ಬಂದು ಅಬ್ಬರಿಸುತ್ತಿರುವ ಹೊತ್ತು. ಅಷ್ಟಕ್ಕೂ ನಮ್ಮನ್ನು ನಾವು ಕೇಳಿಕೊಳ್ಳಬೇಕಾದದ್ದು ಏನೆಂದರೆ, 'ದಯೆಯೇ ಧರ್ಮದ ಮೂಲ' ಎಂಬುದನ್ನು ಅರಿತಿದ್ದರೆ ಜಗತ್ತಿನಲ್ಲಿ ಈ ಪರಿ ಗಲಭೆ, ಹಿಂಸೆ, ಯುದ್ಧ, ರಕ್ತಪಾತ, ಸಾವುನೋವುಗಳೆಲ್ಲಾ ನಡೆಯುತ್ತಿದ್ದವೇ?

'ಅಶಕ್ತರಲ್ಲಿ ದೇವರನ್ನು ಕಾಣಬೇಕು' ಎಂಬ ಭಕ್ತಿವಾಣಿಯು ಅರ್ಥವಾಗಿದ್ದರೆ ಸುಡುವ ಬಡತನ, ಹಸಿವು, ಅಸುರಕ್ಷತೆಯಿಂದ ಜಗತ್ತು ಬಳಲುತ್ತಿತ್ತೇ? ಸತ್ಯ, ನಿಷ್ಠೆ, ಪ್ರಾಮಾಣಿಕತೆ ಎಲ್ಲವೂ ದೈವನಿಯಮಗಳು ಎಂದು ನಾವು ಬಗೆದಿದ್ದರೆ ಹೀಗೆಲ್ಲಾ ಸುಳ್ಳು, ಮೋಸ, ವಂಚನೆ, ಭ್ರಷ್ಟಾಚಾರ, ಅನಾಚಾರ ನಮ್ಮನ್ನು ಆಳುತ್ತಿದ್ದವೇ?

ಮತ್ತೊಬ್ಬರನ್ನು ವಂಚಿಸುವುದು, ನೋಯಿಸುವುದೆಲ್ಲ ದೈವನಿಂದನೆಯೆಂದು ಅರಿತಿದ್ದರೆ ಈ ಪರಿ ದೌರ್ಜನ್ಯ, ಅತ್ಯಾಚಾರ, ಆಕ್ರಂದನ ಕೇಳಿಬರುತ್ತಿದ್ದವೇ? ಹಾಗಿದ್ದರೆ ನಮ್ಮಲ್ಲಿ ನಿಜವಾದ ದೈವಭಕ್ತಿ ಎಲ್ಲಿದೆ ಎಂದು ಯೋಚಿಸಬೇಕಿದೆ.

ನಿಜ, ನಮ್ಮ ಶ್ರದ್ಧಾಭಕ್ತಿಯಲ್ಲಿ ನೈಜತೆ, ಬದ್ಧತೆ ಇದ್ದಿದ್ದರೆ ಜಗತ್ತು ಇಷ್ಟೊಂದು ಕ್ಷೋಭೆಗೆ ಒಳಗಾಗುತ್ತಿ ರಲಿಲ್ಲ. ಜಗತ್ತಿನೆಲ್ಲೆಡೆ ಇರುವ ಧರ್ಮಸಾರವನ್ನು ಅರ್ಥೈಸುವಲ್ಲಿ ಸೋತ ಅನುಯಾಯಿಗಳು ಅಪಾರ್ಥ ಗಳನ್ನೇ ಸಮಾಜದ ಮೇಲೆ ಹೇರುತ್ತಾ ನಿಜವಾದ ಅರ್ಥದಲ್ಲಿ ಧರ್ಮವಿರೋಧಿಗಳಾಗಿರುವ ವಾಸ್ತವ ಎದುರಿಗಿದೆ.



'ಸಹನೆ ಮತ್ತು ಪ್ರೀತಿಯೇ ನನ್ನ ಧರ್ಮ' ಎಂಬ ಗಾಂಧೀಜಿಯ ಆಶಯವನ್ನು ಕಣ್ಣಿಗೊತ್ತಿಕೊಳ್ಳಬೇಕು. ನಮಗೆಲ್ಲಾ ದೈವಭಕ್ತಿ, ನಂಬಿಕೆಗಳು ಇರಬೇಕು ಮತ್ತವು ಪ್ರಾಮಾಣಿಕವಾಗಿರಬೇಕು. ಯಾಕೆಂದರೆ, ನಮ್ಮ ನಡುವಿನ ಮೋಸಗಾರರು, ಭ್ರಷ್ಟಾಚಾರಿಗಳು, ಅತ್ಯಾಚಾರಿಗಳು, ಜಾತಿವಾದಿಗಳು, ಮತಾಂಧರು, ಹಿಂಸಾವಿನೋದಿಗಳು, ಯುದ್ಧೋನ್ಮಾದಿಗಳು, ಭಯೋತ್ಪಾದಕರಲ್ಲಿ ಹೆಚ್ಚಿನವರು ಅಪಾರ ದೈವಭಕ್ತರೂ ಧರ್ಮಶ್ರದ್ಧೆಯುಳ್ಳವರಾಗಿಯೇ ಅಂತಹ ನೀಚ ಕೃತ್ಯಗಳಲ್ಲಿ ತೊಡಗಿಕೊಳ್ಳುತ್ತಿರುವುದು! ಸತ್ಯ, ನ್ಯಾಯ, ನೀತಿ, ಮಾನವೀಯತೆಯನ್ನು ನಿತ್ಯ ಕೃತಿಯಲ್ಲಿ ಬಾಳದೇ ಹೋದವರು ಅದು ಹೇಗೆ ದೈವಭಕ್ತರಾಗಿ ಉಳಿದಾರು?

ಜಾತಿಭೇದ, ವರ್ಗಸಂಘರ್ಷಗಳನ್ನು ನಿರ್ಮೂಲ ಮಾಡುವಲ್ಲಿ ಶ್ರದ್ಧಾಕೇಂದ್ರಗಳು, ಮಠಮಾನ್ಯಗಳ ಪಾಲು ದೊಡ್ಡದಿರಬೇಕಿತ್ತು. ವಿಪರ್ಯಾಸವೆಂದರೆ, ಅವೆಲ್ಲಾ ತಮ್ಮ ಆಸ್ತಿ-ಸಂಪತ್ತನ್ನು ಕ್ರೋಡೀಕರಿಸುವ, ವೃದ್ಧಿಸುವ, ರಾಜಕೀಯ ಲಾಭ ಪಡೆಯುವ, ಭ್ರಷ್ಟರನ್ನು ರಕ್ಷಿಸುತ್ತಿರುವಂತಹ ನಿದರ್ಶನಗಳೇ ಬಹಳ. ದೇವರು, ಧರ್ಮಗಳ ಹೆಸರಿನಲ್ಲಿ ಮನುಷ್ಯ ಸಂಬಂಧಗಳನ್ನು ಸೀಳಿ ಕಂದಕ ಸೃಷ್ಟಿಸುವಂತಹ ಸದ್ಯದ ಸ್ಥಿತಿ ನಿಜಕ್ಕೂ ಅಪಾಯಕಾರಿಯಾದದ್ದು.

ಹಿಂಸೆಯನ್ನು ಭೂಮಿಯಿಂದಲೇ ಓಡಿಸಬೇಕೆಂದು ಪಣ ತೊಟ್ಟವರು ಅದೆಷ್ಟೋ ಮಂದಿ ಸಂತರು, ದಾರ್ಶನಿಕರು. ಸಾಕ್ರೆಟಿಲ್‌ನಂತೆ ಕೆಲವರು ಆ ಪ್ರಯತ್ನದಲ್ಲಿ ಜೀವತ್ಯಾಗಕ್ಕೂ ಸಿದ್ಧರಾಗಿ, ಹಿಂಸೆಗೇ ಬಲಿಯಾದರು! ಲೋಕದ ಕಣಕಣವೂ ಹುಟ್ಟುವ ಪ್ರತಿ ಜೀವಚರವೂ ದೇವರ ಸೃಷ್ಟಿಯೆಂದು ನಂಬುವ ನಾವು ದೈವತ್ವವನ್ನು ಕಾಣಬೇಕಿರುವುದು ಜೀವಪರ, ಮನುಷ್ಯಪರ ಧೋರಣೆಗಳಲ್ಲಿ.

ಪ್ರಕೃತಿಸಹಜ ಭಿನ್ನತೆ ಯನ್ನು ಸ್ವೀಕರಿಸುತ್ತಾ, ರೋಗದಂತೆ ಬಾಧಿಸುತ್ತಿರುವ ರಾಗದ್ವೇಷಗಳನ್ನು ತೊರೆಯದೇ ಹೋದರೆ ನಾಳಿನ ಜಗತ್ತು ಜೀವಕಳೆಯನ್ನು ಕಳೆದುಕೊಂಡು ಸ್ಮಶಾನದಂತೆ ಆಗುತ್ತದೆ. ಭವಿಷ್ಯದಲ್ಲಿ ಆರೋಗ್ಯಕರ ತಲೆಮಾರುಗಳು ಉಳಿಯಬೇಕೆಂದರೆ, ಬೆಳೆಯಬೇಕಾದ ಎಳೆಯ ಕುಡಿಗಳಿಗೆ ದ್ವೇಷ, ಸಂಕುಚಿತತೆಯ ಬದಲು ಒಲವು, ಜೀವದಯೆಯನ್ನು ಧಾರೆಯೆರೆಯಬೇಕಿದೆ.

ಪರಧರ್ಮ ಸಹಿಷ್ಣುಗಳಾಗದ ವಿನಾ ನಾವು ಮನುಷ್ಯರಾಗುವುದಿಲ್ಲ ಎಂಬುದನ್ನರಿತು ನಮ್ಮ ಧಾರ್ಮಿಕ, ರಾಜಕೀಯ ನಿಲುವುಗಳು ನಮ್ಮೊಳಗಿನ ಮಾನವೀಯತೆಯನ್ನೇ ಕೊಲ್ಲುವಷ್ಟು ಕ್ರೂರವಾಗದಂತೆ ಕಾಯ್ದುಕೊಳ್ಳಬೇಕು. 'ಸ್ಥಾವರಕ್ಕಳಿವುಂಟು...' ಎಂಬಂತಹ ಅರಿವಿನಲ್ಲಿ ನಮಗೆ ಮನುಷ್ಯರ ಸದ್ಗುಣ, ನಡತೆಯು ಗುಡಿ, ಚರ್ಚು, ಮಸೀದಿಗಳಿಗಿಂತಲೂ ಮುಖ್ಯವಾಗಬೇಕು.

ನಿರ್ಜೀವವಾದ ಕಲ್ಲು, ಕಂಬ, ಗೋಪುರ, ಮಿನಾರು, ಶಿಲುಬೆಗಳಲ್ಲಿ ದೇವರನ್ನು ಹುಡುಕುವ ನಾವು, ದೇವರ ಜೀವಂತ ಸೃಷ್ಟಿಯಾದ ಮನುಷ್ಯರಲ್ಲಿ ದೇವರನ್ನು ಹುಡುಕುವುದು ಮತ್ತು ಸ್ವತಃ ದೇವರಾಗುವ ಅಗತ್ಯವನ್ನು ಮರೆಯಬಾರದು.

ಪ್ರಕೃತಿಯ ಆರಾಧನೆ ಶ್ರೇಷ್ಠವಾದುದು. ಸಕಲ ಜೀವಚರಗಳಿಗೆ ಲೇಸನು ಬಗೆವುದೇ ದೇವರೆಡೆಗೆ ನಮ್ಮನ್ನು ಕೊಂಡೊಯ್ಯುವ ಹಾದಿ ಎಂದು ಭಾವಿಸಿದರೆ ಈ ಜೀವಜಗತ್ತು ನಿರಾಳ.

# ವಿಶ್ವದ ಅತ್ಯಂತ ಅಪಾಯಕಾರಿ ಸಸ್ಯ, ಮುಟ್ಟಿದ ತಕ್ಷಣ ಸಾವು ಖಚಿತ.!

ಭೂಮಿಯ ಮೇಲೆ ಹಲವು ವಿಶಿಷ್ಟ ಸಸ್ಯಗಳಿವೆ. ಕೆಲವು ಕೀಟಗಳನ್ನು ತಿಂದು ಬದುಕಿದೆ, ಮತ್ತೆ ಕೆಲವು ರಾತ್ರಿ ಹೊತ್ತು ಬೆಳಕು ಚೆಲ್ಲುತ್ತವೆ. ಆದರೆ ಜಗತ್ತಿನಲ್ಲಿ ಆತ್ಮಹತ್ಯಾ ಸಸ್ಯವಿದೆ ಎಂದು ನಿಮಗೆ ತಿಳಿದಿದೆಯೇ? ಇದು ಜನರ ಸಾವಿಗೆ ಕಾರಣವಾಗುತ್ತದೆ.

ಇದೇ ಕಾರಣಕ್ಕೆ ಈ ಸಸ್ಯವನ್ನು ಆತ್ಮಹತ್ಯಾ ಸಸ್ಯ ಎಂದು ಕರೆಯುತ್ತಾರೆ. ಇದರ ವಿಡಿಯೋ ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ.

ಪ್ರಪಂಚದ ಅತ್ಯಂತ ಅಪಾಯಕಾರಿ ಸಸ್ಯ. ಈ ಸಸ್ಯವು ಆಸ್ಟ್ರೇಲಿಯಾದಲ್ಲಿ ಕಂಡುಬರುತ್ತದೆ. ಈ ಸಸ್ಯದ ವೈಜ್ಞಾನಿಕ ಹೆಸರು ಡೆಂಡ್ರೊಕ್ನೈಡ್ ಮೊರಾಯ್ಡ್. ಈ ಸಸ್ಯವು ನೋಡಲು ಬಹಳ ಆಕರ್ಷಕವಾಗಿ ಕಾಣುತ್ತದೆ. ಇದರ ಎಲೆಗಳು ಹೃದಯದ ಆಕಾರದಲ್ಲಿರುತ್ತವೆ. ಆದರೆ ಯಾರಾದರೂ ಈ ಸಸ್ಯವನ್ನು ತಪ್ಪಾಗಿ ಮುಟ್ಟಿದರೂ ಆ ವ್ಯಕ್ತಿಯು ಸಹಿಸಲಾಗದ ನೋವು ಅನುಭವಿಸಬೇಕಾಗುತ್ತದೆ ಮತ್ತು ಕೆಲವೊಮ್ಮೆ ಜನರು ತಮ್ಮ ಪ್ರಾಣವನ್ನು ಸಹ ಕಳೆದುಕೊಳ್ಳುತ್ತಾರೆ.

ಈ ಸಸ್ಯದ ಎಲೆಗಳ ಮೇಲ್ಮೈಯಲ್ಲಿ ಸಣ್ಣ ಮುಳ್ಳುಗಳಿವೆ. ಅವು ಗೋಚರಿಸುವುದಿಲ್ಲ. ಆದರೆ ಯಾರಾದರೂ ಅವುಗಳನ್ನು ಸ್ಪರ್ಶಿಸಿದ ತಕ್ಷಣ, ಈ




ಮುಳ್ಳುಗಳು ಚರ್ಮವನ್ನು ಪ್ರವೇಶಿಸುತವೆ. ಮತ್ತೆ ಹೊರಬರುವವರೆಗೂ ನೋವು ನೀಡುತ್ತಲೇ ಇರುತವೆ. ಇದರ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ವೈರಲ್ ಆಗುತ್ತಿದೆ.

ಈ ಸಸ್ಯದ ಎಲೆಗಳ ಮೇಲಿನ ಮುಳ್ಳುಗಳು ತುಂಬಾ ಚಿಕ್ಕದಾಗಿದೆ ಮತ್ತು ಅತ್ಯಂತ ವಿಷಕಾರಿಯಾಗಿದೆ. ಒಮ್ಮೆ ಇವು ತ್ವಚೆಯೊಳಗೆ ಸೇರಿದರೆ ಹೆಚ್ಚು ಹೊತ್ತು ಹೊರಬರುವುದಿಲ್ಲ. ಚರ್ಮದೊಳಗೆ ತೂರಿಕೊಳ್ಳುತ್ತವೆ ಮತ್ತು ಬಹಳಷ್ಟು ನೋವನ್ನು ಉಂಟುಮಾಡುತ್ತವೆ. ಇಲ್ಲಿಯವರೆಗೆ ಅದರ ನೋವಿಗೆ ಯಾವುದೇ ಔಷಧಿಯನ್ನು ತಯಾರಿಸಲಾಗಿಲ್ಲ. ಇದು ಭಾರತದಲ್ಲಿ ಇನ್ನೂ ಕಂಡುಬಂದಿಲ್ಲ. ಇದು ಆಸ್ಟ್ರೇಲಿಯಾದಲ್ಲಿ ಕಂಡುಬರುತ್ತದೆ.

# ಆರೋಗ್ಯ ಪೂರ್ಣ ಡಯಟ್‌ನಿಂದ ಪಡೆಯಿರಿ ಲಾಭ

ಆರೋಗ್ಯ ಪೂರ್ಣ ಡಯಟ್ ನಿಂದ ನರರೋಗವನ್ನು ತಡೆಯಬಹುದು ಅನ್ನೋದು ಇತ್ತೀಚಿಗಿನ ಸಂಶೋಧನೆಯಿಂದ ತಿಳಿದು ಬಂದಿದೆ. ಸಂಶೋಧಕರು ಗೋಧಿ ಹಾಗೂ ಧಾನ್ಯಗಳಲ್ಲಿರುವ ಪ್ರೋಟೀನ್ ಅಂಶಗಳಿಲ್ಲದ ಆಹಾರ ಸೇವಿಸುವುದರಿಂದ ನರಗಳ ನೋವನ್ನು ತಡೆಯಬಹುದು ಎಂದು ಹೇಳಿದ್ದಾರೆ. ಪ್ರೋಟೀನ್ ಗೂ ನರರೋಗಕ್ಕೂ ಸಂಬಂಧವಿದೆ.

ಗ್ಲುಟೆನ್ ರಹಿತ ಆಹಾರ ಸೇವನೆಯ ಡಯಟ್ ಮಾಡಿದಲ್ಲಿ ನರರೋಗ ಬರುವ ಸಾಧ್ಯತೆ ಕಡಿಮೆ ಎಂಬುದಾಗಿ ಸಂಶೋಧಕರು ಹೇಳುತ್ತಾರೆ. ಸುಮಾರು 60 ಮಂದಿ ನರರೋಗ ಹೊಂದಿರುವವರು ಈ



ಸಂಶೋಧನೆಯಲ್ಲಿ ಭಾಗವಹಿಸಿದ್ದರು.

ನರರೋಗದಿಂದ ಕೈ, ಪಾದಗಳಲ್ಲಿ ನೋವು, ನಿಶ್ಶಕ್ತಿ ಹಾಗೂ ಮರಗಟ್ಟುವಿಕೆಯ ಲಕ್ಷಣಗಳು ಕಾಣುತ್ತವೆ. ಈ ಸಿಂಪಲ್ ಡಯಟ್ ನಿಂದ ನರರೋಗದಿಂದ ಉಂಟಾಗಬಹುದಾದ ನೋವನ್ನು ಕಡಿಮೆ ಮಾಡಬಹುದು.

# ಒತ್ತು ಶಾವಿಗೆ ಕಾಯಿ ಹಾಲು

ರುಚಿಕರವಾದ ಒತ್ತು ಶಾವಿಗೆ, ಕಾಯಿ ಹಾಲು ಮಾಡುವ ವಿಧಾನ... ಬೇಕಾಗುವ ಪದಾರ್ಥಗಳು,,, ಅಕ್ಕಿ- 3 ಬಟ್ಟಲು ಅವಲಕ್ಕಿ-1 ಬಟ್ಟಲು ಉಪ್ಪು-ರುಚಿಗೆ ತಕ್ಕಷ್ಟು ಮಾಡುವ ವಿಧಾನ... ನೀರಿನಲ್ಲಿ ಅಕ್ಕಿಯನ್ನು ಚೆನ್ನಾಗಿ ತೊಳೆದು ಹಿಂದಿನ ದಿವಸ ರಾತ್ರಿ ಅಕ್ಕಿ ನೆನಸಬೇಕು.

ಮರು ದಿವಸ ಬೆಳಿಗ್ಗೆ 1 ಬಟ್ಟಲು ಅವಲಕ್ಕಿ 5 ನಿಮಿಷ ನೆನೆಸಿ ಅದನ್ನು ಅಕ್ಕಿಯ ಜೊತೆ ನುಣ್ಣಗೆ ರುಬ್ಬಬೇಕು. ಆಮೇಲೆ ರುಬ್ಬಿದ ಹಿಟ್ಟನ್ನು ಒಂದು ಪಾತ್ರೆಗೆ ಹಾಕಬೇಕು. ಅರ್ಧ ಚಮಚ ಉಪ್ಪು ಹಾಕಿ ಒಲೆಯ ಮೇಲೆ ಇಟ್ಟು ಹಿಟ್ಟನ್ನು ಕಾಯಿಸಬೇಕು. ಕೈಗೆ ಹಿಡಿಯದಂತೆ ಚೆನ್ನಾಗಿ ತೊಳೆಸಬೇಕು.

ಹಿಟ್ಟು ಮುದ್ದೆಯಾದ ನಂತರ ಇಳಿಸಬೇಕು. ಆ ಮೇಲೆ ಹಿಟ್ಟು ತಣಿದ ನಂತರ ಉಂಡೆ ಕಟ್ಟಬೇಕು. ಬೇಯಿಸಿದ ಒಂದೊಂದು ಉಂಡೆಯನ್ನು ಶಾವಿಗೆ ಒರಳಿಗೆ ಹಾಕಿ ಒತ್ತಬೇಕು. ಜನೀವಾರದ ತರಹ ಎಳೆ ಎಳೆಯಾಗಿ ಶಾವಿಗೆ ಬರುತ್ತದೆ.

ಶಾವಿಗೆಗೆ ಕಾಯಿಹಾಲು ಹಾಕಿಕೊಂಡು ತಿನ್ನಬೇಕು.



ಕಾಯಿಹಾಲು ಮಾಡುವ ವಿಧಾನ... ಬೇಕಾಗುವ ಪದಾರ್ಥಗಳು... ತೆಂಗಿನಕಾಯಿ ತುರಿ-1 ಬಟ್ಟಲು ಗಸಗಸೆ-ಸ್ವಲ್ಪ ಏಲಕ್ಕಿ-2 ಲವಂಗ-1 ಬೆಲ್ಲ-1 ಉಂಡೆ ಸಣ್ಣದು ನೀರು-2 ಬಟ್ಟಲು ಮಾಡುವ ವಿಧಾನ...

ತೆಂಗಿನಕಾಯಿ ತುರಿ ಜೊತೆಯಲ್ಲಿ ಏಲಕ್ಕಿ, ಗಸಗಸೆ, ಲವಂಗ, ನೀರು ಹಾಕಿ ನುಣ್ಣಗೆ ರುಬ್ಬಬೇಕು. ರುಬ್ಬಿದ ಹಾಲನ್ನು ಸೋಸಬೇಕು. ಆಮೇಲೆ ಒಂದು ಪಾತ್ರೆಗೆ ಅರ್ಧ ಕಪ್ ಬೆಲ್ಲ, ಕಾಲು ಕಪ್ ನೀರು ಹಾಕಿ. ಬೆಲ್ಲ ಕರಗುವ ತನಕ ಬಿಸಿಮಾಡಿ ಪಾಕ ಮಾಡಿಕೊಳ್ಳಬೇಕು.

# ನಿಮ್ಮ ಸೌಂದರ್ಯ ಹೆಚ್ಚಿಸಿಕೊಳ್ಳಲು ಹೀಗೆ ಮಾಡಿ



ಸೌಂದರ್ಯ ವೃದ್ಧಿ ಮಾಡಿಕೊಳ್ಳಲು ಬಯಸುವ ಮಹಿಳೆಯರಿಗೆ ಕೆಲವಷ್ಟು ಟಿಪ್ಸ್ ಗಳಿವೆ. ಅವುಗಳು ಯಾವುವು ಎಂದಿರಾ?

ಒಂದು ಚಮಚ ಕೊತ್ತಂಬರಿ ಕಾಳನ್ನು ಹಿಂದಿನ ರಾತ್ರಿ ನೆನೆಸಿ, ಮರುದಿನ ಬೆಳಗ್ಗೆ ಆ ನೀರಿನಿಂದ ಮುಖ ತೊಳೆಯಿರಿ. ಒರೆಸಿಕೊಳ್ಳದಿರಿ. ಹಾಗೇ ಒಣಗಲು ಬಿಡಿ. ಅರ್ಧ ಗಂಟೆ ಬಳಿಕ ಮುಖ ತೊಳೆದರೆ ತ್ವಚೆ ವಿಶೇಷ ಹೊಳಪು ಪಡೆದುಕೊಂಡಿರುತ್ತದೆ.

ಅರಶಿನ ಕೊಂಬನ್ನು ತೇಯ್ದು ಹಾಲು ಬೆರೆಸಿ ಮುಖಕ್ಕೆ ಹಚ್ಚುತ್ತಾ ಬಂದರೆ ನಿಮ್ಮ ಮುಖದಲ್ಲಿ ವಯಸ್ಸಾದ ಲಕ್ಷಣಗಳು ಕಾಣಿಸಿಕೊಳ್ಳುವುದೇ ಇಲ್ಲ.

ಮೊಡವೆ ಮೂಡಿದ ಜಾಗಕ್ಕೆ ಕಾಳು ಮೆಣಸಿನ ಪುಡಿಗೆ ಮೊಸರು ಮಿಕ್ಸ್ ಮಾಡಿ ಹಚ್ಚಿ ನೋಡಿ. ಇದು ಎಷ್ಟು ಖಾರವೋ ಅಷ್ಟೇ ತಂಪು, ಬಹುಬೇಗ ಮೊಡವೆಯನ್ನೂ, ಅದರ ಕಲೆಯನ್ನೂ ನಿವಾರಿಸುತ್ತದೆ. ಶುಂಠಿಯ ಪೇಸ್ಟ್ ನಿಂದಲೂ ಇದೇ ಪ್ರಯೋಜನವನ್ನು ಪಡೆಯಬಹುದು.

ಅಡುಗೆ ಮನೆಯಲ್ಲಿ ಬಳಸುವ ಮೇಯನೇಸ್ ಸಾಸ್ ಅನ್ನು ಸುಲಭದಲ್ಲಿ ತಯಾರಿಸಬಹುದು. ಮೊಟ್ಟೆ, ಎಣ್ಣೆ, ನಿಂಬೆರಸವನ್ನು ಬೌಲ್ ಗೆ ಹಾಕಿ ನಿಧಾನಕ್ಕೆ ತಿರುವಿದರೆ ಮೇಯನೇಸ್ ರೆಡಿ. ಇದನ್ನು ಕೂದಲಿಗೆ ಮಾಸ್ಕ್ ನಂತೆ ಬಳಸಿ. ಒಂದು ಗಂಟೆ ಬಳಿಕ ಸ್ನಾನ ಮಾಡಿದರೆ ಕಂಡಿಷನರ್ ಪರಿಣಾಮ ನಿಮಗೆ ಸಿಗುತ್ತದೆ.

# ನಿಮ್ಮನ್ನು ಶೀತ-ಕೆಮ್ಮಿನಿಂದ ದೂರವಿರಿಸುತ್ತೆ ಈ 5 ಹಣ್ಣುಗಳು

ಬೆಂಗಳೂರು: ಬದಲಾಗುತ್ತಿರುವ ಋತುವಿನಲ್ಲಿ ಹಲವರು ಕೆಮ್ಮು, ನೆಗಡಿ, ವೈರಲ್ ಜ್ವರ ಮತ್ತು ಅಲರ್ಜಿಯಂತಹ ಹಲವಾರು ರೋಗಗಳಿಗೆ ಬಲಿಯಾಗುತ್ತಿದ್ದಾರೆ. ದುರ್ಬಲ ರೋಗನಿರೋಧಕ ಶಕ್ತಿಯಿಂದಾಗಿ ಇಂತಹ ಸಮಸ್ಯೆಗಳು ಉದ್ಭವಿಸುತ್ತವೆ. ಇದನ್ನು ತಪ್ಪಿಸಲು ನಮ್ಮ ರೋಗನಿರೋಧಕ ಶಕ್ತಿಯನ್ನು ವೃದ್ಧಿಸುವುದು ಬಹಳ ಮುಖ್ಯ.

ವೈದ್ಯರ ಪ್ರಕಾರ, ನಮ್ಮ ದೇಹದ ಪ್ರತಿ-ರಕ್ಷಣಾ ವ್ಯವಷ್ಥೆಯನ್ನು ಬಲಪಡಿಸಲು ಕಾಲೋಚಿತ ಹಣ್ಣುಗಳು ಮತ್ತು ತರಕಾರಿಗಳನ್ನು ಸೇವಿಸುವುದು ಅತ್ಯಗತ್ಯ. ನೀವು ಋತು ಬದಲಾದಂತೆ ನಿಮ್ಮನ್ನು ಕಾಡುವ ಶೀತ, ಕೆಮ್ಮು, ನೆಗಡಿ, ಜ್ವರದಂತಹ ಸಮಸ್ಯೆಗಳಿಂದ ಪರಿಹಾರ ಪಡೆಯಲು ಬಯಸಿದರೆ ಕೆಲವು ಹಣ್ಣುಗಳು ನಿಮಗೆ ಪ್ರಯೋಜನಕಾರಿ ಎಂದು ಸಾಬೀತುಪಡಿಸಲಿವೆ.

ಹೌದು, ನಿಮ್ಮ ಡಯಟ್ನಲ್ಲಿ ಐದು ಹಣ್ಣುಗಳನ್ನು ಸೇರಿಸುವುದರಿಂದ ನೀವು



ನಿಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಬಹುದು. ಮಾತ್ರವಲ್ಲ, ಇದು ತೂಕ ನಿಯಂತ್ರಣ ಕ್ಕೂ ಕೂಡ ತುಂಬಾ ಸಹಕಾರಿ ಆಗಿದೆ. ಆ ಹಣ್ಣುಗಳು ಯಾವುವು ಎಂದು ತಿಳಿಯೋಣ.

ಬೆಸ್ಟ್ ಇಮ್ಯುನಿಟಿ ಬೂಸ್ಟರ್ ಹಣ್ಣುಗಳಿವು: ಪರಂಗಿ ಹಣ್ಣು: ಎಲ್ಲ ಋತುವಿನಲ್ಲೂ ಬಹಳ ಸುಲಭವಾಗಿ ಲಭ್ಯವಿರುವ ಹಣ್ಣುಗಳಲ್ಲಿ ಪರಂಗಿ ಹಣ್ಣು ಕೂಡ ಒಂದು. ಈ ಹಣ್ಣನ್ನು ನಿಮ್ಮ ಡಯಟ್ ಭಾಗವನ್ನಾಗಿಸಿದರೆ ಜೀರ್ಣಕಾರಿ ಸಮಸ್ಯೆಗಳಿಂದ ಪರಿಹಾರ ದೊರೆಯುತ್ತದೆ. ತೂಕ ನಿಯಂತ್ರಣಕ್ಕೂ ಕೂಡ ಬಹಳ ಪರಿಣಾಮಕಾರಿ ಆಗಿರುವ ಈ ಹಣ್ಣು ಬೆಸ್ಟ್ ಇಮ್ಯುನಿಟಿ ಬೂಸ್ಟರ್ ಕೂಡ ಆಗಿದೆ. ಸ್ತ್ರೀಯರ ಈ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ನೀಡುತ್ತೆ ಚಿಟಿಕೆ ಅರಿಶಿನ


ಸ್ಟ್ರಾಬೆರಿ: ವಸಂತ ಋತುವಿಗೆ ಸ್ಟ್ರಾಬೆರಿ ಹಣ್ಣನ್ನು ಅತ್ಯುತ್ತಮ ಹಣ್ಣು ಪರಿಗಣಿಸಲಾಗುತ್ತದೆ. ಅವು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿವೆ, ಇದು ಕೆಟ್ಟ ಕೊಲೆಸ್ಟ್ರಾಲ್ ಮಟ್ಟ ವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಜೊತೆಗೆ, ಸ್ಟ್ರಾಬೆರಿ ಆರೋಗ್ಯಕರ ತೂಕವನ್ನು ಕಾಪಾಡಿಕೊಳ್ಳಲು ಕೂಡ ಬಹಳ ಪರಿಣಾಮಕಾರಿ ಆಗಿದೆ.

ಬ್ಲ್ಯಾಕ್ಬೆರಿ: ಬ್ಲ್ಯಾಕ್ಬೆರಿ ಕಡಿಮೆ ಕ್ಯಾಲೋರಿ ಹೊಂದಿದ್ದು ಫೈಬರ್, ವಿಟಮಿನ್ಗಳಲ್ಲಿ ಸಮೃದ್ಧವಾಗಿದೆ. ಬ್ಲ್ಯಾಕ್ ಬೆರ್ರಿ ಮೆದುಳಿನ ಆರೋಗ್ಯಕ್ಕೆ ಒಳ್ಳೆಯದು. ಜೊತೆಗೆ, ಬ್ಲ್ಯಾಕ್ ಬೆರ್ರಿ ದೇಹದ ಚಯಾಪಚಯವನ್ನು ವೇಗಗೊಳಿಸಲು ಮತ್ತು ಮಧುಮೇಹದ ಲಕ್ಷಣಗಳನ್ನು ನಿಯಂತ್ರಿಸುವಲ್ಲಿ ಪರಿಣಾಮಕಾರಿಯಾಗಿದೆ.

ಚೆರ್ರಿಗಳು: ಚೆರ್ರಿ ಹಣ್ಣುಗಳು ಶಕ್ತಿಯನ್ನು ಹೆಚ್ಚಿಸಲು, ನಿದ್ರೆಯ ಗುಣಮಟ್ಟವನ್ನು ಸುಧಾರಿಸಲು ಮತ್ತು ನಮ್ಮ ಮನಸ್ಸನ್ನು ವಿಶ್ರಾಂತಿಯಿಂದ ಇರಿಸಲು ಸಹಾಯಕವಾಗಿವೆ. ಇದಲ್ಲದೆ, ಚೆರ್ರಿ ಹಣ್ಣುಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಮತ್ತು ರಕ್ತದಲ್ಲಿನ ಯೂರಿಕ್ ಆಮ್ಲವನ್ನು ಕಡಿಮೆ ಮಾಡುವಲ್ಲಿಯೂ ಪರಿಣಾಮಕಾರಿ ಆಗಿದ್ದು, ಇದು ಪ್ರತಿರಕ್ಷಣಾ ವ್ಯವಸ್ಥೆಯನ್ನು ಬಲಪಡಿಸುತ್ತದೆ.

ಕಿತ್ತಳೆ ಹಣ್ಣು: ಸಾಮಾನ್ಯವಾಗಿ ನಮ್ಮಲ್ಲಿ ಹಲವರು ಚಳಿಗಾಲದಲ್ಲಿ, ವಸಂತ ಋತುವಿನಲ್ಲಿ ಶೀತ ಎಂಬ ಕಾರಣಕ್ಕೆ ಕಿತ್ತಳೆ ಹಣ್ಣನ್ನು ತಿನ್ನುವುದಿಲ್ಲ. ಆದರೆ, ಕಿತ್ತಳೆಯು ಚಳಿಗಾಲದ ಋತುಮಾನದ ಹಣ್ಣಾಗಿದೆ. ಕಿತ್ತಳೆ ಹಣ್ಣಿನಲ್ಲಿ ವಿಟಮಿನ್‌ಗಳು ಮತ್ತು ಆಂಟಿಆಕ್ಸಿಡೆಂಟ್‌ಗಳು ಸಮೃದ್ಧವಾಗಿವೆ, ಇದು ಪ್ರತಿರಕ್ಷಣಾ ವ್ಯವಸ್ಥೆಯನ್ನು ಬಲಪಡಿಸಲು ಸಹಾಯ ಮಾಡುತ್ತದೆ. ಸೂಚನೆ: ಇಲ್ಲಿ ನೀಡಲಾದ ಮಾಹಿತಿಯು ಮನೆಮದ್ದುಗಳು ಮತ್ತು ಸಾಮಾನ್ಯ ಜ್ಞಾನವನ್ನು ಆಧರಿಸಿದೆ. ಅದನ್ನು ಅಳವಡಿಸಿಕೊಳ್ಳುವ ಮೊದಲು ತಪ್ಪದೇ ವೈದ್ಯಕೀಯ ಸಲಹೆಯನ್ನು ಪಡೆಯಿರಿ.

# ಕಿಡ್ನಿಯಲ್ಲಿ ಕಲ್ಲುಗಳಾಗದಂತೆ ತಡೆಯಲು ಅನುಸರಿಸಿ ಈ ಹವ್ಯಾಸ



ಕಿಡ್ನಿ ನಮ್ಮ ದೇಹದ ಬಹುಮುಖ್ಯ ಅಂಗ. ಕಿಡ್ನಿಯನ್ನು ಆರೋಗ್ಯವಾಗಿಡುವುದು ತುಂಬಾನೇ ಮುಖ್ಯ. ಕಿಡ್ನಿಯಲ್ಲಿ ಕಲ್ಲುಗಳಾಗಿ ದೇಹದ ವ್ಯವಸ್ಥೆ ಏರುಪೇರಾಗುವುದಕ್ಕಿಂತ ಮೊದಲೇ ಎಚ್ಚೆತ್ತುಕೊಳ್ಳುವುದು ಉತ್ತಮ. ಕಿಡ್ನಿಯ ಆರೋಗ್ಯಕ್ಕೆ ಈ 5 ಹವ್ಯಾಸಗಳನ್ನು ನೀವು ರೂಢಿಸಿಕೊಳ್ಳುವುದು ಅತಿ ಮುಖ್ಯ.

ದೇಹದಲ್ಲಿ ನೀರಿನಂಶ ಹೆಚ್ಚಾಗಿರುವಂತೆ ನೋಡಿಕೊಳ್ಳಿ. ನೀರು ಕುಡಿಯುವುದರೊಂದಿಗೆ ನೀರಿನಂಶಗಳುಳ್ಳ ಆಹಾರ ಸೇವಿಸಿ.

ಉಪ್ಪಿನ ಸೇವನೆಯನ್ನು ಕಡಿಮೆ ಮಾಡಿ. ಇದು ದೇಹದಲ್ಲಿನ ನೀರಿನಂಶವನ್ನು ಕಡಿಮೆ ಮಾಡುತ್ತದೆ.

ದೇಹಕ್ಕೆ ಬೇಕಾದಷ್ಟು ಕ್ಯಾಲ್ಸಿಯಂ ನೀಡಿ. ಕ್ಯಾಲ್ಸಿಯಂ ಅಂಶಗಳುಳ್ಳ ಸೊಪ್ಪು, ತರಕಾರಿಗಳನ್ನು ಸೇವಿಸಿ.

ಪ್ರಾಣಿಗಳ ದೇಹದಲ್ಲಿನ ಪ್ರೋಟೀನ್ ಅಂಶ ದೇಹವನ್ನು ಹೆಚ್ಚಾಗಿ ಸೇರುವುದನ್ನು ತಪ್ಪಿಸಿ. ಕಿಡ್ನಿಯಲ್ಲಿ ಕಲ್ಲುಗಳನ್ನು ಉಂಟು ಮಾಡಲು ಕಾರಣವಾಗಬಹುದಾದ ಟೀ, ಆಲೂಗಡ್ಡೆ, ದ್ರಾಕ್ಷಿ, ಬೆರ್ರಿ ಹಣ್ಣುಗಳು, ಮುಂತಾದವುಗಳ ಸೇವನೆ ಹಿತಮಿತವಾಗಿರಲಿ.

# ಅಮೃತ ಬಳ್ಳಿ ಸೇವಿಸಿ ರೋಗ ನಿರೋಧಕ ಶಕ್ತಿ ಹೆಚ್ಚಿಸಿಕೊಳ್ಳಿ

ಅಶ್ವಗಂಧ, ಅರಿಶಿನ, ಅಮೃತ ಬಳ್ಳಿ ಇತ್ಯಾದಿಗಳ ಕಷಾಯವನ್ನು ಕುಡಿಯುವುದರಿಂದ ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಸಹಾಯಕಾರಿ, ಸುಲಭವಾಗಿ ಸಿಗುವ ಅಮೃತ ಬಳ್ಳಿ ಬಗ್ಗೆ ಹೆಚ್ಚು ಹೆಚ್ಚು ತಿಳಿದುಕೊಳ್ಳಲು ಜನ ಪ್ರಯತ್ನಿಸುತ್ತಿದ್ದಾರೆ. ಅಮೃತ ಬಳ್ಳಿ ಸೇವನೆ ಬಗ್ಗೆ ಸರಿಯಾದ ವಿಧಾನ ತಿಳಿದುಕೊಳ್ಳುವ ಅಗತ್ಯವಿದೆ.

ಅಮೃತ ಬಳ್ಳಿಯನ್ನು 3 ರೀತಿಯಲ್ಲಿ ಸೇವಿಸಬಹುದು. ಕಾಂಡ, ಬೇರು, ಎಲೆಗಳಲ್ಲೂ ಔಷಧಿ ಗುಣವಿದೆ. ಅಮೃತ ಬಳ್ಳಿ ಕಾಂಡವನ್ನು ಚೆನ್ನಾಗಿ ತೊಳೆದು ನೀರಿನಲ್ಲಿ ಚೆನ್ನಾಗಿ ಕುದಿಸಿ. ನಾಲ್ಕು ಲೋಟ ನೀರನ್ನು ಒಂದು ಲೋಟ ನೀರಾಗುವವರೆಗೆ ಕುದಿಸಿ ನೀರು ಒಂದು ನೋಟವಾದ ಮೇಲೆ ಬಿಡಿ. ಕಾಲು ಲೋಟ ನೀರನ್ನು ಪ್ರತಿ ದಿನ ಸೇವಿಸಬೇಕು.

ಅಮೃತ ಬಳ್ಳಿ ಕಷಾಯವನ್ನು ಕುಡಿಯಲು ಬಯಸಿದರೆ ಇದಕ್ಕಾಗಿ ಅಮೃತ ಬಳ್ಳಿ ತುಂಡು, 4-5 ತುಳಸಿ ಎಲೆಗಳು, 2 ಕರಿಮೆಣಸು, ಸ್ವಲ್ಪ ಅರಿಶಿನ, ಸ್ವಲ್ಪ ಶುಂಠಿ, ಸ್ವಲ್ಪ ಅಶ್ವಗಂಧ ಹಾಕಿ ಕಷಾಯ ಮಾಡಿ. ಒಂದು ಬಾಣಲೆಯಲ್ಲಿ 2 ಗ್ಲಾಸ್ ನೀರನ್ನು ಬಿಸಿ ಮಾಡಿ ಅದರಲ್ಲಿ ಈ ಪುಡಿ ಮಾಡಿದ ವಸ್ತುವನ್ನು ಹಾಕಿ. ಇದನ್ನು ಕಡಿಮೆ ಶಾಖದಲ್ಲಿ ಕುದಿಸಿ.

ನೀರು ಒಂದು ಲೋಟವಾದ್ಮೇಲೆ ಫಿಲ್ಟರ್ ಮಾಡಿ ನಂತ್ರ ಕುಡಿಯಿರಿ. ಅಮೃತ ಬಳ್ಳಿ ಅನೇಕ ಸ್ಥಳಗಳಲ್ಲಿ ಕಂಡು ಬರುವುದಿಲ್ಲ. ಹಾಗಾಗಿ ಅಮೃತ ಬಳ್ಳಿ ಮಾತ್ರೆಗಳನ್ನು ಸೇವಿಸಬಹುದು, ಮಗುವಿಗೆ 5 ರಿಂದ 10 ವರ್ಷವಾಗಿದ್ದರೆ, ಅವರಿಗೆ ಅರ್ಧ ಟ್ಯಾಬ್ಲೆಟ್ ನೀಡಿ. ಅದಕ್ಕಿಂತ ದೊಡ್ಡವರಾಗಿದ್ದರೆ ಒಂದು ಮಾತ್ರೆ ನೀಡಿ. ವಯಸ್ಕರು ದಿನದಲ್ಲಿ 2 ಮಾತ್ರೆಗಳನ್ನು ತೆಗೆದುಕೊಳ್ಳಬಹುದು.

# ಬಾಯ್ ಫ್ರೆಂಡ್ ಜೊತೆ ಸೇರಿ ಮಕ್ಕಳಿಗೆ ನಿತ್ಯ ಕಿರುಕುಳ: ಪ್ರಕರಣ ದಾಖಲು

ಬೆಂಗಳೂರು: ಪತಿಯ ಮೇಲಿನ ಸಿಟ್ಟಿನಿಂದ ಪ್ರಿಯಕರನೊಂದಿಗೆ ಸೇರಿ ಮಹಿಳೆಯೊಬ್ಬಳು ತನ್ನ ಸ್ವಂತ ಮಕ್ಕಳಿಗೆ ಚಿತ್ರಹಿಂಸೆ ನೀಡಿರುವ ಅಮಾನವೀಯ ಘಟನೆಯೊಂದು ನಗರದ ಜೆಜೆ ನಗರದಲ್ಲಿ ಬೆಳಕಿಗೆ ಬಂದಿದೆ.

ಆಯೇಷಾ ಎಂಬಾಕೆ ಇಮ್ರಾನ್ ಖಾನ್ ಎಂಬಾತನನ್ನು ಮದುವೆಯಾಗಿದ್ದಳು. ಆದರೆ ದಾಂಪತ್ಯದಲ್ಲಿ ಕಲಹ ಉಂಟಾಗಿ ನಂತರ ಡಿವೋರ್ಸ್ ಪಡೆದಿದ್ದಳು. ಈ ವೇಳೆ ಮಕ್ಕಳು ತಾಯಿ ಆಯೇಷಾ ಜೊತೆಯಲ್ಲೇ ಇದ್ದವು. ಆಗಾಗ ಇಮ್ರಾನ್ ಭೇಟಿಯಾಗುತ್ತಿದ್ದರು. ಆದರೆ, ಇತ್ತೀಚಿಗೆ ಆಯೀಶಾ ತನ್ನ ಪ್ರಿಯಕರನೊಂದಿಗೆ ಸೇರಿ ಮಕ್ಕಳಿಗೆ ಕಿರುಕುಳ ನೀಡಲು ಆರಂಭಿಸಿದ್ದಳು.

ಮಕ್ಕಳ ಕಚ್ಚುತ್ತಿದ್ದ ಪಾಪಿ ತಾಯಿ, ಫ್ರಿಡ್ಜ್ ನಿಂದ ತಣ್ಣೀರು ಸು-ರಿದಿದ್ದಾಳೆ. ಬಳಿಕ ಆಕೆಯ ಬಾಯ್ ಫ್ರೆಂಡ್ ಸಲೀಂ ಎಂಬಾತ ಮಕ್ಕಳ ಕೈ ಮೇಲೆ ಸಿಗರೇಟ್ ನಿಂದ ಸುಟ್ಟು ಗಾಯಗೊಳಿಸಿದ್ದಾನೆ. ಚಿತ್ರ ಹಿಂಸೆ ಬಗ್ಗೆ ಹೇಳಿದರೆ ತಂದೆಯನ್ನ ಕೊಲ್ಲುವುದಾಗಿ ಬೆದರಿಕೆ ಹಾಕುತ್ತಿದ್ದಾರೆ.

# ಶಿವರಾತ್ರಿ ಮೆರವಣಿಗೆ ವೇಳೆ ವಿದ್ಯುತ್ ತಗುಲಿ 14 ಮಕ್ಕಳಿಗೆ ಸುಟ್ಟ ಗಾಯ



ಕೋಟಾ: ರಾಜಸ್ಥಾನದ ಕೋಟಾ ದಲ್ಲಿ ಮಹಾಶಿವರಾತ್ರಿಯ ಪ್ರಯುಕ್ತ ಶುಕ್ರವಾರ ನಡೆದ 'ಶಿವ ಭಾರತ್' ಮೆರವಣಿಗೆಯಲ್ಲಿ ಭಾಗವಹಿಸಿದ್ದ ಹದಿನಾಲ್ಕು ಮಕ್ಕಳಿಗೆ ವಿದ್ಯುತ್ ತಗುಲಿದೆ.

ಕುನ್ಹಾರಿ ಪೊಲೀಸ್ ಠಾಣಾ ವ್ಯಾಪ್ತಿಯ ಸಕಟೂರಾ ಪ್ರದೇಶದಲ್ಲಿ 10 ರಿಂದ 16 ವರ್ಷದ ಮಕ್ಕಳಿಗೆ ಹೈಟೆನ್ಷನ್ ವಿದ್ಯುತ್ ತಂತಿ ತಗುಲಿದೆ. ಘಟನೆಯಲ್ಲಿ 14 ಮಕ್ಕಳಿಗೆ ಸುಟ್ಟಗಾಯಳಾಗಿವೆ.

ಇಬ್ಬರು ಮಕ್ಕಳಿಗೆ ಶೇ. 100 ಮತ್ತು ಶೇ. 50 ರಷ್ಟು ಸುಟ್ಟ ಗಾಯಗಳಾಗಿದ್ದು, ಉಳಿದ 12 ಮಕ್ಕಳಿಗೆ ಶೇಕಡಾ 50 ಕ್ಕಿಂತ ಕಡಿಮೆ ಸುಟ್ಟ ಗಾಯಗಳಾಗಿವೆ ಎಂದು ಹಿರಿಯ ಪೊಲೀಸ್ ಅಧಿಕಾ-ರಿಯೊಬ್ಬರು ತಿಳಿಸಿದ್ದಾರೆ.

ಎಲ್ಲಾ ಗಾಯಾಳುಗಳನ್ನು ಕೋಟಾದ ಎಂಬಿಎಸ್ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಶುಕ್ರವಾರ ಬೆಳಗ್ಗೆ 11:30 ಸುಮಾರಿಗೆ 'ಶಿವ ಭಾರತ್' ಮೆರವಣಿಗೆಯು ಕಾಳಿಬಸ್ತಿ ಮೂಲಕ ಸಾಗುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದ್ದು, ಮೆರವಣಿಗೆಯಲ್ಲಿದ್ದ ಬಾಲಕನೊಬ್ಬ 22 ಅಡಿ ಎತ್ತರದ ಬಿದಿರಿನ ಕೋಲಿನ ಮೇಲೆ ಧ್ವಜ ಹಿಡಿದುಕೊಂಡು ತೆರಳುತ್ತಿದ್ದಾಗ ಅದು ಹೈ-ಟೆನ್ಷನ್ ಲೈನ್ ಗೆ ತಗುಲಿದೆ ಎಂದು ಕೋಟಾ ಸಿಟಿ ಎಸ್ಪಿ ಅಮೃತಾ ದುಹಾನ್ ಅವರು ತಿಳಿಸಿದ್ದಾರೆ.

# ಪೋಕ್ಸೋ ಕೇಸ್‌ನಲ್ಲಿ ರಾಜ್ಯದ ಮತ್ತೊಬ್ಬ ಸ್ವಾಮೀಜಿ ಅರೆಸ್ಟ್



ತುಮಕೂರು: ಪೋಕ್ಸೋ ಪ್ರಕರಣದ ಅಡಿಯಲ್ಲಿ ಜಿಲ್ಲೆಯ ಕುಣಿಗಲ್ ತಾಲೂಕಿನ ಹಂಗರಹಳ್ಳಿ ವಿದ್ಯಾಚೌಡೇಶ್ವರಿ ಮಠದ ಪೀಠಾಧ್ಯಕ್ಷರಾಗಿದ್ದ ಶ್ರೀ ಬಾಲಮಂಜುನಾಥ ಸ್ವಾಮೀಜಿಯನ್ನು ಬಂಧಿಸಲಾಗಿದೆ.

ಕಳೆದ ಫೆಬ್ರುವರಿ 10 ರಂದು ತುಮಕೂರು ಸೈಬರ್ ಪೊಲೀಸ್ ಠಾಣೆಯಲ್ಲಿ ಸ್ವಾಮೀಜಿ ವಿರುದ್ಧ ಎಫ್ಐಆರ್ ದಾಖಲಾಗಿತ್ತು. ತನಿಖೆ ಕೈಗೆತ್ತಿಕೊಂಡಿರುವ ಪೊಲೀಸರು ನಿನ್ನೆ ತಡರಾತ್ರಿ ಆರೋಪಿತ ಸ್ವಾಮೀ-ಜಿಯನ್ನು ಅರೆಸ್ಟ್ ಮಾಡಿದ್ದಾರೆ.

ವಿದ್ಯಾಚೌಡೇಶ್ವರಿ ಮಠದಲ್ಲಿ ಅಭಿಲಾಷ್ ಮತ್ತು ಅಭಿಷೇಕ್ ಅನ್ನೋರ ಸ್ವಾಮೀಜಿ ಜೊತೆ ಸೇವೆ ಸಲ್ಲಿಸುತ್ತಿದ್ದರು. ಇವರಲ್ಲಿ ಅಭಿಷೇಕ್ ಎಂಬ ವ್ಯಕ್ತಿಗೆ ಸ್ವಾಮೀಜಿ ಜೊತೆ ಭಿನ್ನಾಭಿಪ್ರಾಯ ಬಂದ ಹಿನ್ನೆಲೆಯಲ್ಲಿ ಮಠವನ್ನು ತೊರೆದಿದ್ದರು. ಈ ಘಟನೆ ನಡೆದ ಬಳಿಕ 'ಚರ್ಮ ರೋಗಕ್ಕೆ ಚಿಕಿತ್ಸೆ ಕೊಡುವ ನೆಪದಲ್ಲಿ ನನ್ನ ಬೆತ್ತಲೆ ವಿಡಿಯೋ ಮಾಡಿಕೊಂಡು ನನ್ನನ್ನು ಬೆದರಿಸಿ ಹಣಕ್ಕೆ ಡಿಮ್ಯಾಂಡ್ ಇಟ್ಟಿದ್ದಾರೆಂದು ಆರೋಪಿಸಿ ಅಭಿಷೇಕ್ ಅಂಡ್ ಟೀಂ ವಿರುದ್ಧ ಸ್ವಾಮೀಜಿ ದೂರು ದಾಖಲಿಸಿದ್ದರು. (ಸ್ವಾಮೀಜಿಗಳ ಪರವಾಗಿ ಆಪ್ತ ಅಭಿಲಾಷ್ ದೂರು ಕೊಟ್ಟಿರುತ್ತಾರೆ) ಈ ಸಂಬಂಧ ಒಟ್ಟು 6 ಜನರ ಮೇಲೆ ಎಫ್ಐಆರ್ ದಾಖಲಾಗಿತ್ತು.

ಪೊಲೀಸರು ಅಭಿಷೇಕ್ ಅಂಡ್ ಟೀಂ ಅನ್ನು ವಿಚಾರಣೆಗೆ ಒಳಪಡಿಸಿದೆ. ತೀವ್ರ ತನಿಖೆ ವೇಳೆ ಅಭಿಷೇಕ್, ಶ್ರೀಗಳ ವಿರುದ್ಧ ಪ್ರತಿಯಾಗಿ ದೂರು ನೀಡುತ್ತಾರೆ. ಸ್ವಾಮೀಜಿ ಮಠದಲ್ಲಿ ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ. ಜೊತೆಗೆ ವಿಚಾರಣೆ ವೇಳೆಯೂ ಶ್ರೀಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಅಂತೆಯೇ ಅಭಿಷೇಕ್ ಕೊಟ್ಟ ಮಾಹಿತಿ ಮೇರೆಗೆ ಪೊಲೀಸರು ನಿನ್ನೆ ತಡರಾತ್ರಿ ಮಠಕ್ಕೆ ತೆರಳಿದ್ದಾರೆ. ಪರಿಶೀಲನೆ ಬಳಿಕ ಬಾಲಮಂಜುನಾಥ ಸ್ವಾಮೀಜಿ ಹಾಗೂ ಆತನ ಆಪ್ತ ಸಹಾಯಕ ಅಭಿಲಾಷ್ ವಿರುದ್ಧ ಪೋಕ್ಸೋ ಕೇಸ್ ದಾಖಲಿಸಿಕೊಂಡು ಬಂಧಿಸಿದ್ದಾರೆ ಎಂಬ ಮಾಹಿತಿ ತಿಳಿದುಬಂದಿದೆ. ಹುಲಿಯೂರುದುರ್ಗ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಕೇಸ್ ದಾಖಲಾಗಿದ್ದು, ತುಮಕೂರು ಎಸ್ಪಿ ಅಶೋಕ್ ಕೆವಿ ನೇತೃತ್ವದಲ್ಲಿ ಸ್ವಾಮೀಜಿಯ ಬಂಧನ ಆಗಿದೆ, ತನಿಖೆ ತೀವ್ರಗೊಂಡಿದೆ.

# ಹಾವೇರಿ ಗ್ಯಾಂಗ್ ರೇಪ್ ಪ್ರಕರಣ: ಕೊನೆಗೂ 19 ಆರೋಪಿಗಳ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ ಪೊಲೀಸರು

ಹಾವೇರಿ: ಹಾವೇರಿ ಸಾಮೂಹಿಕ ಅತ್ಯಾಚಾರ ಪ್ರಕರಣದಕ್ಕೆ ಸಂಬಂಧಿಸಿ ಕೊನೆಗೂ ಪೊಲೀಸರು 19 ಆರೋಪಿಗಳ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ.

ಹಾವೇರಿ ಗ್ಯಾಂಗ್ ರೇಪ್ ಪ್ರಕರಣ ರಾಜ್ಯದಾದ್ಯಂತ ಸಂಚಲನ ಸೃಷ್ಟಿಸಿದ್ದು ಅಲ್ಲದೆ ರಾಜಕೀಯವಾಗಿಯೂ ಬಹಳ ಚರ್ಚೆಗೆ ಗ್ರಾಸವಾಗಿತ್ತು. ಇನ್ನು ಗ್ಯಾಂಗ್‌ರೇಪ್ ಘಟನೆ ನಡೆದು 58 ದಿನಗಳ ಬಳಿಕ ಪೊಲೀಸರು ಹಾನಗಲ್ ಜೆಎಂಎಫ್ ಕೋರ್ಟ್ಗೆ 873 ಪುಟಗಳ ಚಾರ್ಜ್‌ಶೀಟ್ ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ.

ಕಳೆದ ಜನವರಿ 8ರಂದು ಹಾನಗಲ್ ಬಳಿ ಶಿರಸಿ ಮೂಲದ ಮುಸ್ಲಿಂ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿತ್ತು. ಪ್ರಕರಣ ಸಂಬಂಧ 19 ಆರೋಪಿಗಳನ್ನು ಹಾನಗಲ್ ಪೊಲೀಸರು ಬಂಧಿಸಿದ್ದರು.

ಅತ್ಯಾಚಾರ ಎಸಗಿದ 7 ಪ್ರಮುಖ ಆರೋಪಿಗಳು ಸೇರಿ ಒಟ್ಟು 19 ಮಂದಿಯ ಹೆಸರು ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಲಾಗಿದೆ. ಅಲ್ಲದೆ ವಿಚಾರಣೆ ವೇಳೆ 7 ಪ್ರಮುಖ ಆರೋಪಿಗಳನ್ನು ಸಂತ್ರಸ್ತೆ ಗುರುತಿಸಿದ್ದರು.



ಹಾನಗಲ್ ಪೊಲೀಸರು ಘಟನೆ ಸಂಬಂಧ 20 ದಿನಗಳ ಹಿಂದೆಯೇ ತನಿಖೆಯನ್ನು ಪೂರ್ಣಗೊಳಿಸಿದ್ದರು. ಆದರೆ ಎಫ್ಎಸ್-ಎಲ್ ವರದಿ ಹಾಗೂ ಡಿಎನ್ಎ ವರದಿಗಳಿಗಾಗಿ ಕಾಯುತ್ತಿದ್ದರು.

ಇದೀಗ ಆ ವರದಿಗಳು ಕೈ ಸೇರುತ್ತಿದ್ದಂತೆ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದ್ದಾರೆ.

ಪೊಲೀಸರು ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿರುವ ಪ್ರಕಾರ, ಅಫ್ತಾಬ್ ಚಂದನಕಟ್ಟಿ, ಮದರ್ಸಾಬ್ ಮಂಡಕ್ಕಿ, ಸಮೀವುಲ್ಲಾ ಲಾಲಾನವರ, ಶೋಯೆಬ್ ನಿಯಾಜ್ ಅಹ್ಮದ್ ಮುಲ್ಲಾ, ಮೊಹಮ್ಮದ್ ಸಾದೀಕ್, ತೌಷಿಪ್, ರಿಯಾಜ್ ಸಾವಿಕೇರಿ ಪ್ರಮುಖ ಆರೋಪಿಗಳಾಗಿದ್ದಾರೆ.

# ಬಳ್ಳಾರಿ ಮಹಾನಗರ ಪಾಲಿಕೆಗೆ ರಾಜ್ಯ ಮಟ್ಟದ ಪ್ರಶಸ್ತಿ ಗರಿ



ಬಳ್ಳಾರಿ: ಡೇ ನಲ್ಮ್ ಯೋಜನೆಯಡಿ ಪಿಎಂ ಸ್ವನಿಧಿ (ಬೀದಿ ಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯ ಯೋಜನೆ) ಹಾಗೂ ನಿರಾಶ್ರಿತರಿಗೆ ಆಶ್ರಯ ಕೇಂದ್ರದ ಸೌಲಭ್ಯ (Night Shelter) ಈ ಎರಡು ಯೋಜನೆಯಲ್ಲಿ ಅತ್ಯುತ್ತಮ ಗುರಿ ಸಾಧನೆಗೆ ಬಳ್ಳಾರಿ ಮಹಾನಗರ ಪಾಲಿಕೆಗೆ 2 ರಾಜ್ಯ ಪ್ರಶಸ್ತಿಗಳು ಲಭಿಸಿವೆ.

ರಾಜ್ಯ ಸರ್ಕಾರದ ಕೌಶಲ್ಯಾಭಿವೃದ್ಧಿ ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಬೆಂಗಳೂರಿನ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಶುಕ್ರವಾರ ಏರ್ಪಡಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಡೇ ನಲ್ಮ್ ಯೋಜನೆಯಡಿ ಪಿಎಂ ಸ್ವನಿಧಿ ಬೀದಿ ಬದಿ ವ್ಯಾಪಾರಿಗಳಿಗೆ ನೀಡಲಾಗುವ ಸಾಲ ಯೋಜನೆಯಡಿ ಸಮರ್ಪಕ ಅನುಷ್ಠಾನದಲ್ಲಿ ಪ್ರಥಮ ಸ್ಥಾನ ಪಡೆದ ಬಳ್ಳಾರಿ ಮಹಾನಗರ ಪಾಲಿಕೆಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅದೇರೀತಿಯಾಗಿ ಡೇ ನಲ್ಮ್ ಯೋಜನೆಯಡಿ ನಿರಾಶ್ರಿತರ ಕೇಂದ್ರದ ಉತ್ತಮ ನಿರ್ವಹಣೆಗಾಗಿ ಬಳ್ಳಾರಿ ಮಹಾನಗರ ಪಾಲಿಕೆಗೆ ಇನ್ನೊಂದು ಪ್ರಶಸ್ತಿಯನ್ನು ನೀಡಲಾಯಿತು.

ಎರಡು ಪ್ರಶಸ್ತಿಗಳನ್ನು ಕೌಶಲ್ಯಾಭಿವೃದ್ಧಿ ಇಲಾಖೆಯ ಅಪರ ಕಾರ್ಯದರ್ಶಿಗಳಾದ ಉಮಾ ಮಹಾದೇವನ್ ಮತ್ತು ನಲ್ಮ್ ಅಭಿಯಾನ ನಿರ್ದೇಶಕರಾದ ಶ್ರೀವಿದ್ಯಾ ಅವರು ವಿತರಿಸಿದರು.

ಬಳ್ಳಾರಿ ಮಹಾನಗರ ಪಾಲಿಕೆಯ ಯೋಜನಾ ನಿರ್ದೇಶಕ ದೇವರಾಜ ಅವರು ಸ್ವೀಕರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕೌಶ್ಯಲಾಭಿವೃದ್ಧಿ ಕಚೇರಿಯ ಅಭಿಯಾನ ವ್ಯವಸ್ಥಾಪಕರಾದ ಸೌಮ್ಯ, ಪಾಲಿಕೆಯ ಸಿಬ್ಬಂದಿಗಳಾದ ಪುಷ್ಪಲತಾ ಮತ್ತು ಮಾಬುನಿ ಇವರು ಹಾಜರಿದ್ದರು.

# ಲೋಕಸಭೆ ಚುನಾವಣೆಗೆ ಮಲ್ಲಿಕಾರ್ಜುನ ಖರ್ಗೆ ಸ್ಪರ್ಧಿಸುವುದು ಅನುಮಾನ



ಬೆಂಗಳೂರು: ಲೋಕಸಭೆ ಚುನಾವಣೆಗೆ ರಣತಂತ್ರ ರೂಪಿಸಲು ಮತ್ತು ಪ್ರಚಾರಕ್ಕೆ ರಾಜಕೀಯ ಪಕ್ಷಗಳು ಚುನಾವಣಾ ಅಖಾಡಕ್ಕೆ ಇಳಿದಿದ್ದು, ಪ್ರಧಾನಿ ನರೇಂದ್ರ ಮೋದಿ ಅವರನ್ನು ಸೋಲಿಸಲು ಇಂಡಿಯಾ ಮೈತ್ರಿಕೂಟ ಪ್ರಯತ್ನ ನಡೆಸುತ್ತಿದೆ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಲೋಕಸಭೆ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂಬ ಮೂಲಗಳನ್ನು ಉಲ್ಲೇಖಿಸಿ ಮಾಹಿತಿ ಹೊರಬಿದ್ದಿದೆ.

ಕಳೆದ ಲೋಕಸಭೆ ಚುನಾವಣೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಸೋಲನ್ನು ಎದುರಿಸಬೇಕಾಯಿತು. ಅವರು ಪ್ರಸ್ತುತ ರಾಜ್ಯಸಭೆಯ ಸಂಸದರಾಗಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಸಾಂಪ್ರದಾಯಿಕ ಕ್ಷೇತ್ರವಾದ ಕಲಬುರಗಿಯಿಂದ ಸ್ಪರ್ಧಿಸುವುದಿಲ್ಲ ಎಂದು ಮೂಲಗಳು ತಿಳಿಸಿವೆ.

ಪ್ರಸ್ತುತ ಅವರು ಇಂಡಿಯಾ ಮೈತ್ರಿಕೂಟದಲ್ಲಿ ದೊಡ್ಡ ಪಾತ್ರವನ್ನು ವಹಿಸುತ್ತಿದ್ದಾರೆ. ಆದ್ದರಿಂದ ಅವರು ಚುನಾವಣೆಯಲ್ಲಿ ಸ್ಪರ್ಧಿಸದಿರಲು ನಿರ್ಧರಿಸಿದ್ದಾರೆ. ಸದ್ಯಕ್ಕೆ ಅವರು ಚುನಾವಣೆಗೆ ಸ್ಪರ್ಧಿಸುವ ಉದ್ದೇಶ ಹೊಂದಿಲ್ಲ. ಖರ್ಗೆ ಅವರು ಕಲಬುರಗಿ ಲೋಕಸಭೆ ಕ್ಷೇತ್ರದಿಂದ ಎರಡು ಬಾರಿ ಗೆದ್ದಿದ್ದಾರೆ, ಆದರೆ 2019 ರ ಚುನಾವಣೆಯಲ್ಲಿ ಸೋಲನ್ನು ಎದುರಿಸಿದ್ದರು.


ರಾಜ್ಯಸಭೆಯಲ್ಲಿ ಖರ್ಗೆ ಅವರ ಅಧಿಕಾರಾವಧಿ ಇನ್ನೂ ನಾಲ್ಕು ವರ್ಷಗಳಿಗಿಂತ ಹೆಚ್ಚು ಉಳಿದಿದೆ. ಅವರ ಪುತ್ರ ಪ್ರಿಯಾಂಕ್ ಖರ್ಗೆ ಕಲಬುರಗಿ ಪ್ರದೇಶದ ಚಿತ್ತಾಪುರ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ ಮತ್ತು ಕರ್ನಾಟಕದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಸಚಿವರಾಗಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರು ಕಲಬುರಗಿಲ್ಲಿ ಕಾಂಗ್ರೆಸ್ನಿಂದ ಸ್ಪರ್ಧಿಸಬಹುದು ಎಂದು ಹೇಳಲಾಗುತ್ತಿದೆ. ಅವರು ಉದ್ಯಮಿಯಾಗಿದ್ದು ಶಿಕ್ಷಣ ಸಂಸ್ಥೆಗಳನ್ನು ಕೂಡ ನಿರ್ವಹಿಸುತ್ತಿದ್ದಾರೆ.

ದೊಡ್ಡಮನಿ ಚುನಾವಣೆಗೆ ಸ್ಪರ್ಧಿಸುವ ಕುರಿತು ಖರ್ಗೆ ಅವರು ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ, ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಸೇರಿದಂತೆ ಉನ್ನತ ನಾಯಕರೊಂದಿಗೆ ಮಾತುಕತೆ ನಡೆಸುವ ಸಾಧ್ಯತೆಯಿದೆ ಮತ್ತು ಖರ್ಗೆ ಅವರನ್ನು ಚುನಾವಣೆಗೆ ಸ್ಪರ್ಧಿಸಬೇಕೇ ಅಥವಾ ಬೇಡವೇ ಎಂಬ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆ.

ಕಳೆದ ಲೋಕಸಭೆ ಚುನಾವಣೆಯಲ್ಲಿ ಕಲಬುರಗಿ ಕ್ಷೇತ್ರದಿಂದ ಬಿಜೆಪಿಯ ಡಾ.ಉಮೇಶ್ ಜಾಧವ್ ವಿರುದ್ಧ ಖರ್ಗೆ ಸೋಲು ಕಂಡಿದ್ದರು. ಕಾಂಗ್ರೆಸ್ ಅಧ್ಯಕ್ಷರು 524740 ಮತಗಳನ್ನು ಪಡೆದರೆ, ಬಿಜೆಪಿ 620192 ಮತಗಳನ್ನು ಪಡೆದಿದ್ದಾರೆ. ಬಿಜೆಪಿ 95 ಸಾವಿರದ 452 ಮತಗಳ ಅಂತರದಿಂದ ಖರ್ಗೆ ಅವರನ್ನು ಸೋಲಿಸಿತ್ತು.

# ತಂಗಿಯನ್ನು ಪ್ರೀತಿಸುತ್ತಿದ್ದ ಯುವಕನಿಗೆ ಚಾಕು ಹಾಕಿದ ಅಣ್ಣ



ಶಿವಮೊಗ್ಗ: ತಂಗಿಯನ್ನು ಪ್ರೀತಿಸುತ್ತಿದ್ದ ಎಂಬ ಕಾರಣಕ್ಕೆ ಅಣ್ಣನೊಬ್ಬ ಯುವಕನಿಗೆ ಚಾಕು ಇರಿದಿರುವ ಘಟನೆ ಶಿವಮೊಗ್ಗ ಜಿಲ್ಲೆಯ ಶಿಕಾ-ರಿಪುರ ತಾಲೂಕಿನ ಶಿರಾಳಕೊಪ್ಪದಲ್ಲಿ ಈ ಘಟನೆ ನಡೆದಿದೆ.

ಸಲ್ಮಾನ ಅಲಿಯಾಸ್ ಗೂಡು (24) ಚಾಕು ಇರಿತಕ್ಕೊಳಗಾದವನು. ನಿನ್ನೆ ಗುರುವಾರ ತಡರಾತ್ರಿ ಶಿರಾಳಕೊಪ್ಪದಲ್ಲಿ ಘಟನೆ ನಡೆದಿದ್ದು, ಪ್ರಕರಣ ಸಂಬಂಧ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ. ಸಲ್ಮಾನ್ ಯುವತಿಯೊಬ್ಬಳನ್ನು ಪ್ರೀತಿಸುತ್ತಿದ್ದ. ಆದರೆ ಇದು ಯುವತಿ ಅಣ್ಣನಿಗೆ ಇಷ್ಟವಿರಲಿಲ್ಲ ಎನ್ನಲಾಗಿದೆ. ಇದರಿಂದಲೇ ಸಿಟ್ಟಾದ ಯುವತಿ ಅಣ್ಣ, ರಾತ್ರಿ ವೇಳೆ ಸಲ್ಮಾನ್‌ನನ್ನು ಮಾತಾಡಿಸುವ ನೆಪದಲ್ಲಿ ಚಾಕುವಿನಿಂದ ಇರಿದಿದ್ದಾನೆ.

ತೀವ್ರ ರಕ್ತಸ್ರಾವವಾಗಿದ್ದ ಸಲ್ಮಾನ್‌ನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದ್ದು, ಶಿರಾಳಕೊಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯುತ್ ಕಂಬಕ್ಕೆ ಕಾರು ಡಿಕ್ಕಿ; ಅದೃಷ್ಟವಶಾತ್ ಮಾಜಿ ಶಾಸಕ ಪಾರು




ಕಾರವಾರ: ವಿದ್ಯುತ್ ಕಂಬಕ್ಕೆ ಮಾಜಿ ಶಾಸಕರ ಕಾರು ಡಿಕ್ಕಿಯಾಗಿ, ಮಾಜಿ ಶಾಸಕರು ಅದೃಷ್ಟವಶಾತ್ ಪ್ರಾಣಾಪಾಂಯಂದಿಂದ ಪಾರಾಗಿರುವ ಘಟನೆ ನಡೆದಿದೆ.

ಮಾಜಿ ಶಾಸಕ ವಿ.ಎಸ್.ಪಾಟೀಲ್ ಕಾರು ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡು ತಾಲೂಕಿನ ಹಾರವಳ್ಳಿ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಅಪಘಾತ ಸಂಭವಿಸುತ್ತಿದ್ದಂತೆ ಕಾರಿನ ಏರ್ ಬ್ಯಾಗ್ ಓಪನ್ ಆಗಿದ್ದರಿಂದ ಸಾವು-ನೋವು ಸಂಭವಿಸಿಲ್ಲ. ಮಾಜಿ ಶಾಸಕ ವಿ.ಎಸ್.ಪಾಟೀಲ್ ಕಾರಿನಲ್ಲಿ ಸ್ವಗ್ರಾಮ ಅಂದಲಗಿಗೆ ತೆರಳುತ್ತಿದ್ದರು. ಈ ವೇಳೆ ಈ ಅಪಘಾತ ಸಂಭವಿಸಿದೆ. ವಿ.ಎಸ್.ಪಾಟೀಲ್ ಅವರ ಎದೆಗೆ ಪೆಟ್ಟಾಗಿದೆ. ಕಾರು ಚಾಲಕ ಆನಂದ್ ಕಣ್ಣಿಗೆ ಗಾಯಗಳಾಗಿವೆ. ಇಬ್ಬರನ್ನು ಮುಂಡಗೋಡು ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದೆ.

# ವಾರ್ತಾ ಇಲಾಖೆ: ವಸ್ತು ಪ್ರದರ್ಶನ ಮಳಿಗೆಗೆ ಎಡಿಸಿ ಮೊಹಮ್ಮದ್ ಝುಬೇರ್ ಉದ್ಘಾಟನೆ

ಬಳ್ಳಾರಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು, ಇತರೆ ಅಭಿವೃದ್ಧಿ ಯೋಜನೆಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲು ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಏರ್ಪಡಿಸಿರುವ ಮೂರು ದಿನಗಳ (ಮಾ.08 ರಿಂದ 10 ರವರೆಗೆ) ವಸ್ತು ಪ್ರದರ್ಶನ ಮಳಿಗೆಯನ್ನು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಶುಕ್ರವಾರ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಾದ ಶಕ್ತಿಯೋಜನೆ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ, ಅನ್ನಭಾಗ್ಯ ಸೇರಿದಂತೆ ಸರ್ಕಾರದ ಎಲ್ಲಾ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ.



ಯೋಜನೆಗಳ ಮಾಹಿತಿಯನ್ನು ವಸ್ತು ಪ್ರದರ್ಶನವು ಒಳಗೊಂಡಿದೆ. ಸಾರ್ವಜನಿಕರು ಇದರ ಪ್ರಯೋಜನ ಪಡೆಯಬೇಕು ಎಂದು ಹೇಳಿದರು.

ರಾಜ್ಯ ಸರ್ಕಾರವು ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆಗಳನ್ನು ತಲುಪಿಸಲು ಮತ್ತು ಸರ್ಕಾರದ ವಿವಿಧ ಯೋಜನೆಗಳ ಮಾಹಿತಿ ನೀಡಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಕೇಂದ್ರ ಬಸ್ ನಿಲ್ದಾಣದಲ್ಲಿ ವಸ್ತು ಪ್ರದರ್ಶನ ಮಳಿಗೆಯನ್ನು ಹಾಕಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮಾಹಿತಿ ಪಡೆಯಬಹುದಾಗಿದೆ ಎಂದರು.

ಮಳಿಗೆಯಲ್ಲಿ ಗ್ಯಾರಂಟಿ ಯೋಜನೆಗಳೂ ಸೇರಿದಂತೆ ವಿವಿಧ ಯೋಜನೆಗಳು, ಕಾರ್ಯಕ್ರಮಗಳು ಸೇರಿದಂತೆ ಮಾಹಿತಿ ಒಳಗೊಂಡಿದೆ. ಈ ವಸ್ತು ಪ್ರದರ್ಶನ ವೀಕ್ಷಣೆಯು ಉಚಿತವಾಗಿರುತ್ತದೆ. ಬಸ್ ನಿಲ್ದಾಣಕ್ಕೆ ಬರುವ ಸಾರ್ವಜನಿಕರು, ಪ್ರಯಾಣಿಕರು ಸೇರಿದಂತೆ ಜಿಲ್ಲೆಯ ಎಲ್ಲಾ ಸಾರ್ವಜನಿಕರು ಈ ವಸ್ತು ಪ್ರದರ್ಶನ ಮಳಿಗೆಗೆ ಭೇಟಿ ನೀಡಿ ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ ಪಡೆಯಬಹುದು ಎಂದು ಹೇಳಿದರು.

**ನುಡಿದಂತೆ ನಡೆದಿದ್ದೇವೆ ಸೆಲ್ಫಿ ಪಾಯಿಂಟ್:**

ಮಳಿಗೆಯಲ್ಲಿ ಗ್ಯಾರಂಟಿ ಯೋಜನೆಗಳು, ವಿವಿಧ ಕಾರ್ಯಕ್ರಮಗಳ ಕುರಿತು ಬೆಳಕು ವ್ಯವಸ್ಥೆಯ ಮಾಹಿತಿ ಫಲಕಗಳನ್ನು ಅಳವಡಿಲಾಗಿದ್ದು, ವೀಕ್ಷಿಸುವ ಸಾರ್ವಜನಿಕರಿಗೆ ಮಳಿಗೆಯ ಪಕ್ಕದಲ್ಲಿ 'ನುಡಿದಂತೆ ನಡೆದಿದ್ದೇವೆ' ಸೆಲ್ಫಿ ಪಾಯಿಂಟ್ ಹಾಕಲಾಗಿದೆ.

ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕೇಂದ್ರ ಕಚೇರಿಯಿಂದ ಪ್ರತಿ ಮಾಹೆಯಾನ ಹೊರತರುವ ಜನಪದ ಪುಸ್ತಕಗಳನ್ನು ವಿತರಿಸಲಾಯಿತು. ಸಾರ್ವಜನಿಕರು ವಸ್ತು ಮಳಿಗೆಯನ್ನು ವೀಕ್ಷಿಸಿ ಮಾಹಿತಿ ಪಡೆದುಕೊಂಡರು.

ಈ ವೇಳೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್ಬಾನ್, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಥಮ ದರ್ಜೆ ಸಹಾಯಕ ವಿ.ಸಿ.ಗುರುರಾಜ, ಇಲಾಖೆಯ ಸಿಬ್ಬಂದಿಗಳಾದ ವಿಜಯ್ ಕುಮಾರ್, ಹನುಮಂತಪ್ಪ, ಮಲ್ಲೇಶಪ್ಪ, ಶ್ರೀಧರ ಕವಾಲಿ, ಹನುಮೇಶ್, ತಿಪ್ಪೇಸ್ವಾಮಿ ಸೇ-ರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಬ್ಯಾಂಕ್ ಅಧಿಕಾರಿಗಳು ನಿಗದಿತ ಅವಧಿಯಲ್ಲಿ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳಿಗೆ ಸಾಲ ಮತ್ತು ಸಹಾಯಧನವನ್ನು ಬಿಡುಗಡೆ ಮಾಡಬೇಕು: ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ.

ಧಾರವಾಡ: ಸರ್ಕಾರವು ಸುಸ್ಥಿರ ಅಭಿವೃದ್ಧಿ, ಉದ್ಯೋಗ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ರೂಪಿಸಿ, ಜಾರಿಗೆ ತಂದಿದೆ. ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಮಾರ್ಗಸೂಚಿಗಳ ಪ್ರಕಾರ ನಿಗಧಿತ ಅವಧಿಯಲ್ಲಿ ಸಾಲ, ಸಹಾಯಧನ ಬಿಡುಗಡೆ ಮಾಡಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಅವರು ಹೇಳಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ಹಾಗೂ ಜಿಲ್ಲಾ ಸಲಹಾ ಸಮಿತಿ ಸಭೆ ಜರುಗಿಸಿ ಮತ್ತು ಜಿಲ್ಲೆಯ ವಾರ್ಷಿಕ ವಿತ್ತಿಯ ಯೋಜನೆ 2024-25 ಬಿಡುಗಡೆಗೊಳಿಸಿ, ಮಾತನಾಡಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳಿಗೆ ಫಲಾನುಭವಿಗಳನ್ನು ವಿವಿಧ ಇಲಾಖೆಗಳಿಂದ ಆಯ್ಕೆ ಮಾಡಿ, ಬ್ಯಾಂಕ್ಗಳಿಗೆ ಸಾಲ ಮತ್ತು ಸಹಾಯಧನ ಬಿಡುಗಡೆ ಮಾಡಲು ವಿಳಂಬವಾಗುತ್ತಿದೆ. ಈ ಕು-ರಿತು ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಮತ್ತು ಆಯಾ ಬ್ಯಾಂಕ್ ಮುಖ್ಯಸ್ಥರು ಪರಿಶೀಲಿಸಿ ತಕ್ಷಣ ಕ್ರಮ ಜರುಗಿಸಬೇಕೆಂದು ಅವರು ಹೇಳಿದರು.

ಬ್ಯಾಂಕ್ ಸೌಲಭ್ಯಗಳ ಕುರಿತು ಮತ್ತು ಸಕಾರದ ಯೋಜನೆಗಳ ಬಗ್ಗೆ ಗ್ರಾಮ ಮಟ್ಟದಲ್ಲಿ ಹೆಚ್ಚು ಪ್ರಚಾರ ನೀಡಬೇಕು. ಸರ್ಕಾರ ನೀಡಿರುವ ಆರ್ಥಿಕ ಸೌಲಭ್ಯಗಳು ಅರ್ಹರಿಗೆ ತಲುಪುವಂತೆ ಮಾಡಬೇಕೆಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಡಿಸೆಂಬರ್ 2023 ರ ಅಂತ್ಯಕ್ಕೆ ದುರ್ಬಲ ವರ್ಗದವರಿಗೆ ಒಟ್ಟು ರೂ. 5222.52 ಕೋಟಿ ಸಾಲ ವಿತರಣೆ ಮಾಡಲಾಗಿದೆ. ಮತ್ತು ಮಹಿಳೆಯರಿಗೆ ರೂ. 436501 ಕೋಟಿ ಸಾಲವನ್ನು ವಿತರಿಸಲಾಗಿದೆ ಹಾಗೂ ಅಲ್ಪತ-ರಿಗೆ ರೂ. 1676.00 ಕೋಟಿ ಸಾಲ ವಿತರಣೆ ಆಗಿದೆ ಎಂದು ಜಿಲ್ಲಾ ಪಂಚಾಯತ ಸಿಇಓ ಅವರು ತಿಳಿಸಿದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ಪ್ರಭುದೇವ ಎನ್. ಜಿ. ಅವರು ಪ್ರಸ್ತಾವಿಕವಾಗಿ ಮಾತನಾಡಿ, 2023-24 ನೇ ಸಾಲಿನ ವಾರ್ಷಿಕ ಸಾಲದ ಯೋಜನೆಯ ಮುಖ್ಯಾಂಶಗಳು ಹಾಗೂ ಡಿಸೆಂಬರ್ 2023 ರ ತ್ರೈಮಾಸಿಕ ಅಂತ್ಯದ ಪ್ರಗತಿಯನ್ನು ವಿವರಿಸಿದರು.

ಡಿಸೆಂಬರ್ 2023 ರ ಅಂತ್ಯಕ್ಕೆ ಬೆಳೆ ಸಾಲವು 1230.20 ಗುರಿ ಹೊಂದಿದ್ದು, ಡಿಸೆಂಬರ್ ಅಂತ್ಯಕ್ಕೆ 1785.65 ಸಾಧನೆ ಆಗಿದ್ದು ತ್ರೈಮಾಸಿಕ ಗುರಿಯ ಸಾಧನೆಯು 145 ಶೇಕಡವಾರು ಸಾಧನೆ ಹೊಂದಿದೆ, ಕೃಷಿ ಅವಧಿ ಸಾಲವು ಡಿಸೆಂಬರ್ ಅಂತ್ಯಕ್ಕೆ 1306.32 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 1621.23 ಸಾಧನೆ ಆಗಿದ್ದು ತ್ರೈಮಾಸಿಕ ಗುರಿಯ ಸಾಧನೆಯು 124% ಶೇಕಡವಾರು ಸಾಧನೆ ಹೊಂದಿದೆ.




ಸೂಕ್ಷ್ಮ, ಸಣ್ಣ ಹಾಗೂ ಮಾಧ್ಯಮ ಉಧ್ಯಮಗಳಿಗೆ ಡಿಸೆಂಬರ್ ಅಂತ್ಯಕ್ಕೆ 2265.75 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 4937.72 ಸಾಧನೆ ಆಗಿದ್ದು ತ್ರೈಮಾಸಿಕ ಗು-ರಿಯ ಸಾಧನೆಯು 218% ಶೇಕಡವಾರು ಸಾಧನೆ ಹೊಂದಿದೆ,

ಶಿಕ್ಷಣ ಸಾಲವು ಡಿಸೆಂಬರ್ ಅಂತ್ಯಕ್ಕೆ 48.14 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 36.97 ಸಾಧನೆ ಆಗಿದ್ದು ತ್ರೈಮಾಸಿಕ ಗು-ರಿಯ ಸಾಧನೆಯು 77% ಶೇಕಡವಾರು ಸಾಧನೆ ಹೊಂದಿದೆ, ಗೃಹ ಸಾಲವು ಡಿಸೆಂಬರ್ ಅಂತ್ಯಕ್ಕೆ 193.17 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 116.81 ಸಾಧನೆ ಆಗಿದ್ದು ತ್ರೈಮಾಸಿಕ ಗುರಿಯ ಸಾಧನೆಯು 60% ಶೇಕಡವಾರು ಸಾಧನೆ ಹೊಂದಿದೆ,

ಇತರೆ ಆಧ್ಯತಾ ವಲಯದಿಂದ ಡಿಸೆಂಬರ್ ಅಂತ್ಯಕ್ಕೆ 307.35 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 329.54 ಸಾಧನೆ ಆಗಿದ್ದು ತ್ರೈಮಾಸಿಕ ಗುರಿಯ ಸಾಧನೆಯು 136% ಶೇಕಡವಾರು ಸಾಧನೆ ಹೊಂದಿದೆ. ಈ ಎಲ್ಲವು ಸೇರಿ ಒಟ್ಟು ಆಧ್ಯತಾ ವಲಯದಿಂದ ಡಿಸೆಂಬರ್ ಅಂತ್ಯಕ್ಕೆ 5156.17 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 8827.92 ಸಾಧನೆ ಆಗಿದ್ದು ತ್ರೈಮಾಸಿಕ ಗುರಿಯ ಸಾಧನೆಯು 171% ಶೇಕಡವಾರು ಸಾಧನೆ ಹೊಂದಿದೆ ಮತ್ತು ಆಧ್ಯತಾ ರಹಿತ ವಲಯವು ಡಿಸೆಂಬರ್ ಅಂತ್ಯಕ್ಕೆ 5779. 17 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 6398.58 ಸಾಧನೆ ಆಗಿದ್ದು ತ್ರೈಮಾಸಿಕ ಗುರಿಯ ಸಾಧನೆಯು 110% ಶೇಕಡವಾರು ಸಾಧನೆ ಹೊಂದಿದೆ.

ಒಟ್ಟಾರೆ ಆದ್ಯತಾವಲಯ ಮತ್ತು ಆದ್ಯತ ರಹಿತ ವಲಯ ಸೇರಿ ಡಿಸೆಂಬರ್ ಅಂತ್ಯಕ್ಕೆ 10935.34 ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯಕ್ಕೆ 15226.50 ಸಾಧನೆ ಆಗಿದ್ದು ತ್ರೈಮಾಸಿಕ ಗುರಿಯ ಸಾಧನೆಯು 139% ಶೇಕಡವಾರು ಸಾಧನೆ ಹೊಂದಿದೆ ಎಂದು ತಿಳಿಸಿದರು.

ವಾಣಿಜ್ಯ ಬ್ಯಾಂಕ್ಗಳು ಶೇ 212 ರಷ್ಟು, ಕೆ ವಿ. ಜಿ. ಬ್ಯಾಂಕ್ ಶೇ. 76 ರಷ್ಟು, ಕೆ. ಸಿ.ಸಿ.ಬ್ಯಾಂಕ್ ಶೇ. 153 ರಷ್ಟು, ಕೆಎಸ್ ಕಾರ್ಡ ಶೇ. 16 ರಷ್ಟು ಮತ್ತು ಕೆ.ಎಸ್.ಎಫ್.ಸಿ.ಶೇ. 5 ರಷ್ಟು ಸಾಧನೆ ಮಾಡಿದೆ. ತಾಲ್ಲುಕಾವಾರು ಸಾಧನೆಯಲ್ಲಿ ಹುಬ್ಬಳ್ಳಿ ಗ್ರಾಮಾಂತರ ಪ್ರಥಮ ಸ್ಥಾನದಲ್ಲಿ, ಹುಬ್ಬಳ್ಳಿ ನಗರ ದ್ವಿತೀಯ ಸ್ಥಾನದಲ್ಲಿ ಹಾಗೂ ಇನ್ನುಳಿದ ನವಲಗುಂದ, ಕುಂದಗೋಳ, ಧಾರವಾಡ, ಕಲಘಟಗಿ, ಅಣ್ಣಿಗೇರಿ ಮತ್ತು ಅಳ್ನಾವರ ತಾಲ್ಲೂಕುಗಳು ಕ್ರಮವಾಗಿ ನಂತರದ ಸ್ಥಾನದಲ್ಲಿವೆ ಎಂದು ಹೇಳಿದರು.

*2024-25ನೇ ಸಾಲಿನ ವಾರ್ಷಿಕ ವಿತ್ತಿಯ ಯೋಜನೆ ?? ಜಿಲ್ಲಾ ಅಗ್ರಣೀಯ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ಪ್ರಭುದೇವ ಎನ್.ಜಿ. ಅವರು ಸಭೆಯಲ್ಲಿ 2024-25ನೇ ಸಾಲಿಗೆ ಜಿಲ್ಲೆಯ ವಾರ್ಷಿಕ ವಿತ್ತಿಯ ಯೋಜನೆಯತನ್ನು ಮಂಡಿಸಿದರು.

ಬೆಳೆ ಸಾಲವು 2003.74, ಕೃಷಿ ಅವಧಿ ಸಾಲವು 1223.11 ಸೇರಿ ಕೃಷಿ ವಲಯಕ್ಕೆ ಒಟ್ಟು ಸಾಲ ರೂ.3868.02, ಸೂಕ್ಷ್ಮ,ಸಣ್ಣ ಹಾಗೂ ಮಧ್ಯಮ ಉಧ್ಯಮಗಳಿಗೆ ರೂ. 8096.24, ಶಿಕ್ಷಣ ಸಾಲ ರೂ.59.70, ಗೃಹ ಸಾಲ ರೂ.284.90 ಇತರೆ ಆಧ್ಯತಾ ವಲಯ ರೂ.429.90, ಒಟ್ಟು ಆಧ್ಯತಾ ವಲಯ 12738.76, ಆಧ್ಯತಾ ರಹಿತಾ ವಲಯ 7314.77 ಸೇರಿದಂತೆ ಆಧ್ಯತಾವಲಯಕ್ಕೆ ಒಟ್ಟು ರೂ.20053.53, 2024-25 ರ ಅಂತ್ಯಕ್ಕೆ ಗುರಿಯನ್ನು ಹೊಂದಲಾಗಿದೆ.

ಜಿಲ್ಲೆಯಲ್ಲಿ 2024-25 ನೇ ಸಾಲಿಗೆ ರೂ. 12738.76 ಕೋಟಿ ಗುರಿ ನಿಗದಿಪಡಿಸಲಾಗಿದೆ. ಡಿಸೆಂಬರ್ 2023 ರ ಸಾಧನೆಗೆ ಹೋಲಿಸಲಾಗಿ ಅಧ್ಯತಾ ವಲಯಕ್ಕೆ ಸುಮಾರು ಶೇ.44 ರಷ್ಟು ಹೆಚ್ಚಿನ ಗುರಿಯಾಗಿದೆ.

ಮತ್ತು ಒಟ್ಟು ಕೃಷಿ ಸಾಲಕ್ಕೆ, ಶೇ. 14 ರಷ್ಟು ಹೆಚ್ಚಿನಂತೆ ರೂ. 3868.02 ಕೋಟಿ, ಉದ್ಯಮ ಸಾಲಕ್ಕೆ ಶೇ.64 ರಷ್ಟು ಹೆಚ್ಚಿನಂತೆ ರೂ. 8096.24 ಕೋಟಿ, ಶಿಕ್ಷಣ ಸಾಲಕ್ಕೆ ಶೇ.61 ರಷ್ಟು ಹೆಚ್ಚಿನಂತೆ ರೂ. 59.70 ಕೋಟಿ, ಗೃಹ ಸಾಲಕ್ಕೆ ಶೇ.144 ರಷ್ಟು ಹೆಚ್ಚಿನಂತೆ ರೂ. 284.90 ಮತ್ತು ಇತರ ಆಧ್ಯತಾ ವಲಯಕ್ಕೆ ಶೇ.30 ರಷ್ಟು ಹೆಚ್ಚಿನ ಗುರಿಯಂತೆ ರೂ. 429.90 ಕೋಟಿ ನಿಗದಿಪಡಿಸಲಾಗಿದೆ.

ಅಧ್ಯತಾ ಹಾಗೂ ಅಧ್ಯತಾ ರಹಿತ ವಲಯಕ್ಕೆ (ಒಟ್ಟು ವಾರ್ಷಿಕ ವಿತ್ತೀಯ ವ್ಯವಹಾರ) ಶೇ.31.70 ರಷ್ಟು ಹೆಚ್ಚಿನ ಗುರಿಯಾಗಿ ರೂ. 20053.53 ಕೋಟಿಯನ್ನು ನಿಗದಿಪಡಿಸಲಾಗಿದೆ ಎಂದು ಅವರು ತಿಳಿಸಿದರು.


ಬ್ಯಾಂಕ್ ಆಫ್. ಬರೋಡಾ, ಪ್ರಾದೇಶಿಕ ಕಛೇರಿಯ ಪ್ರಾದೇಶಿಕ ಮುಖ್ಯಸ್ತ ವಡೆ ಶ್ರೀಹರಿ, ಸಬಾರ್ಡ ಡಿಡಿಎಂ ಮಯೂರ ಕಾಂಬಳೆ, ಕೆವಿಜಿಬಿ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಭಟ ಅವರು ವೇದಿಕೆಯಲ್ಲಿದ್ದರು.

ಸಭೆಯಲ್ಲಿ ಸಭೆಯಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು, ಬ್ಯಾಂಕುಗಳ ಮುಖ್ಯಸ್ಥರು ಭಾಗವಹಿಸಿದ್ದರು.

# ಸ್ವಾರ್ಥರಹಿತ ರಾಜಕಾರಣ ಮುಖ್ಯ: ಲಕ್ಷ್ಮೀ ಹೆಬ್ಬಾಳಕರ್

## ಸಮುದಾಯ ಭವನಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಸಚಿವೆ ಹೇಳಿಕೆ

ಬೆಳಗಾವಿ: ಜನರ ಪ್ರೀತಿ, ವಿಶ್ವಾಸ ನನಗೆ ಮುಖ್ಯ. ನಾನು ಎಂದೂ ದ್ವೇಷ ರಾಜಕೀಯ ಮಾಡುವುದಿಲ್ಲ. ನನಗೆ ರಾಜಕೀಯ ಪುನರ್ಜನ್ಮ ನೀಡಿದ ಬೆಳಗಾವಿ ಗ್ರಾಮೀಣ ಕ್ಷೇತ್ರದ ಜನರ ಋಣ ತೀರಿಸಲು ಸಾಧ್ಯವಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಸತತ ಎರಡು ಚುನಾವಣೆಯಲ್ಲಿ ಸೋತರೂ ನನಗೆ ಧೈರ್ಯ ತುಂಬಿದ ಕ್ಷೇತ್ರದ ಜನರಿಗೆ ನಾನು ಜೀವನ ಪರ್ಯಂತ ಋಣಿಯಾಗಿರುವೆ ಎಂದರು.




ಬೆಳಗಾವಿ ಗ್ರಾಮೀಣ ಕ್ಷೇತ್ರದ ಮಾರಿಹಾಳ ಗ್ರಾಮದಲ್ಲಿ ಗುರುವಾರ ಸಂಜೆ ಮುತಗಾ, ಮೊದಗಾ, ತುಮ್ಮರಗುದ್ದಿ, ಕರಡಿಗುದ್ದಿ ಹಾಗೂ ಮಾರಿಹಾಳ ಈ ಎಲ್ಲ ಗ್ರಾಮಗಳಲ್ಲಿ ಸಮುದಾಯ ಭವನ ನಿರ್ಮಾಣದ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು.

**ರಾಮ ರಾಜ್ಯದ ಪರಿಕಲ್ಪನೆಯ ಸರ್ಕಾರ:** ನಾನು ಅಪ್ಪಟ ರಾಮಭಕ್ತಳು. ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಕೂಡ ರಾಮ ರಾಜ್ಯ ಪರಿಕಲ್ಪನೆಯಲ್ಲಿ ಕಾರ್ಯನಿರ್ವಹಿಸುತ್ತಿದೆ. ನಮ್ಮ ಸರ್ಕಾರ ಪ್ರತಿ ತಿಂಗಳು ಜನರ ಗ್ಯಾರಂಟಿ ಯೋಜನೆಗಳಿಗಾಗಿ 5 ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ. ಇದು ನಿಜವಾದ ರಾಮ ರಾಜ್ಯದ ಪರಿಕಲ್ಪನೆ ಎಂದು ಹೇಳಿದರು. ಗ್ಯಾರಂಟಿ ಯೋಜನೆಗಳಿಂದ ಜನರು ಖುಷಿಯಾಗಿದ್ದಾರೆ. ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೇ ನಮ್ಮ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯ ಮೂಲಕ ಪ್ರತಿ ತಿಂಗಳು ಎರಡು ಸಾವಿರ ರೂಪಾಯಿ ಹಣ ತಲುಪುತ್ತಿದೆ ಎಂದು ಸಚಿವರು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಸತೀಶ್ ಜಾರಕಿಹೊಳಿ ಅವರ ಆಶೀರ್ವಾದ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ಇಂದು ಕ್ಷೇತ್ರದ ಮನೆಮಗಳಾಗಿ ಕಾರ್ಯನಿರ್ವಹಿಸುತ್ತಿರುವೆ. ಬೆಳಗಾವಿ ಗ್ರಾಮೀಣ ಕ್ಷೇತ್ರ ಸಿಕ್ಕಿದ್ದು, ನನ್ನ ಪೂರ್ವ ಜನ್ಮದ ಪುಣ್ಯ ಎಂದು ಸಚಿವರು ಹೇಳಿದರು.

ಧರ್ಮರಾಯನ ಧರ್ಮ, ಅರ್ಜುನನ ಗುರಿ, ಕೃಷ್ಣನ ಚತುರತೆ, ವಿಧುರನ ಬುದ್ಧಿ, ಭೀಮನ ಬಲ, ರಾಮನ ಉದಾರತೆ, ಶಿವಾಜೀ ಮಹರಾಜರ ಧೈರ್ಯ.ಈ ಗುಣಗಳು ಇದ್ದಾಗ ಮಾತ್ರ ಒಳ್ಳೆಯ ನಾಯಕರಾಗಲು ಸಾಧ್ಯ. ನಾಯಕತ್ವ ಗುಣದ ಜೊತೆಗೆ ವಿನಮ್ರತೆಯೂ ಇರಬೇಕು. ಆ ವಿನಮ್ರತೆ ಇದ್ದಾಗಷ್ಟೆ ರಾಜಕೀಯ ನಾಯಕರಿಗೆ ಸಾರ್ಥಕತೆ ಇರುತ್ತದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ನಾನೆಂದು ಜಾತಿ ರಾಜಕೀಯ ಮಾಡುವುದಿಲ್ಲ. ನಾನು ಹುಟ್ಟಿದ್ದು ಲಿಂಗಾಯತ ಸಮಾಜವಾದರೂ ನನಗೆ ಪುನರ್ಜನ್ಮ ಕೊಟ್ಟಿದ್ದು ಕ್ಷೇತ್ರದ ಮತದಾರರು. ಸ್ವಾರ್ಥ ರಹಿತ ರಾಜಕೀಯ ಮಾಡುವುದೇ ನನ್ನ ಗುರಿ ಎಂದರು.

ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷರಾದ ಶಂಕರಗೌಡ ಪಾಟೀಲ, ಗ್ರಾಮ ಪಂಚಾಯತ್ ಅಧ್ಯಕ್ಷೆ ಗಿರಿಜಾ ಪಾಟೀಲ, ಉಪಾಧ್ಯಕ್ಷ ಆಸೀಫ್ ಮುಲ್ಲಾ, ರಾಮಚಂದ್ರ ಚವ್ಹಾಣ, ಮಹಮ್ಮದ್ ಗೌಸ ಭಾಗವಾನ್, ಕಲ್ಲಪ್ಪ ಸೀತಿಮನಿ, ನಾರಾಯಣ ಸೊಗಲಿ, ಸಂಜಯ್ ಚಾಟೆ, ಬಸವರಾಜ ಮ್ಯಾಗೋಟಿ, ಪಿಡಿಓ ರಾಣಿ ಪೂಜಾರ, ಲಕ್ಷ್ಮೀನಾರಾಯಣ ಕಲ್ಲೂರ್, ನಿರ್ಮಿತ್ರ ಕೇಂದ್ರ ಪ್ರೊಜೆಕ್ಟ್ ಡೈರೆಕ್ಟರ್ ಶೇಖರಗೌಡ ಕುರಡಗಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ತೇರದಾಳ: ಯುವತಿ ಮೇಲೆ ಹಲ್ಲೆಗೈದ ಮೂವರು ಅರೆಸ್ಟ್



ತೇರದಾಳ: ಯುವಕರ ಗುಂಪೊಂದು ವಿದ್ಯಾರ್ಥಿನಿಯರನ್ನು ಚುಡಾಯಿಸಿ, ಹಲ್ಲೆ ಮಾಡಿದ್ದು ಹಲ್ಲೆಗೊಳಗಾದ ವಿದ್ಯಾರ್ಥಿನಿ ಆಸ್ಪತ್ರೆಗೆ ದಾಖಲಾಗಿರುವ ಘಟನೆ ತಾಲೂಕಿನ ರಬಕವಿ ಬಸ್ ನಿಲ್ದಾಣದಲ್ಲಿ ನಡೆದಿದೆ.

ಹಲ್ಲೆಗೊಳಗಾದ ವಿದ್ಯಾರ್ಥಿನಿ (ಸ್ವಾತಿ ನಡಕಟ್ಟಿ) ಆಸ್ಪತ್ರೆಗೆ ದಾಖಲಾಗಿದ್ದಾಳೆ. ಬುಧವಾರ ನಡೆದಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಘಟನೆ ಸಂಬಂಧ ಅನ್ವರ್ ಮಕಾಂದಾರ್, ಆಯನ್ ಪಟೇಲ್, ಜಾವೀದ್ ಅಲಿಹ್ಮದ್ ಎಂಬ ಯುವಕರನ್ನು ಪೊಲೀಸರು ಬಂಧಿಸಿದ್ದಾರೆ.

ಹಲ್ಲೆಗೊಳಗಾದ ಯುವತಿ ಸ್ವಾತಿ ತನ್ನ ಸ್ನೇಹಿತೆಯರಾದ ಸಾಕ್ಷಿ, ಕವಿತಾ ಜೊತೆ ಕಾಲೇಜಿಗೆ ತೆರಳಲು ಬಸ್ಸಾಗಿ ಕಾಯುತ್ತಿದ್ದಳು. ಈ ವೇಳೆ ಬಂದ ಯುವಕರು ಯುವತಿಯನ್ನು ಚುಡಾಯಿಸಿದ್ದಾರೆ. ಹಾಗೂ ಹಲ್ಲೆ ಮಾಡಿದ್ದಾರೆ. ಬಸ್ಸಾಗಿ ಕಾದು ನಿಂತಿದ್ದ ವಿದ್ಯಾರ್ಥಿನಿಯರ ಫೋಟೋ ಕ್ಲಿಕ್ಕಿಸಿ, ಬಳಿಕ ಅವರ ಬಳಿ ತೆರಳಿ ಮೊಬೈಲ್ ನಂಬರ್ ನೀಡುವಂತೆ ಪೀಡಿಸಿದ್ದಾರೆ. ನಂಬರ್ ಕೊಡಲು ನಿರಾಕರಿಸಿದ್ದಕ್ಕೆ ಸ್ವಾತಿ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಹೇಳಲಾಗುತ್ತಿದೆ. ಸದ್ಯ ಘಟನೆ ಸಂಬಂಧ ತೇರದಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಯುವತಿಯನ್ನು ಚುಡಾಯಿಸಿದ ಯುವಕರನ್ನು ತೇರದಾಳ ಪೊಲೀಸರು ಬಂಧಿಸಿದ್ದಾರೆ.

# ಡಾ.ಪ್ರಭು ಗಂಜಿಹಾಳ ಅಯೋಧ್ಯೆ ಕವಿ ಸಮ್ಮೇಲನಕ್ಕೆ ಆಯ್ಕೆ



ಗದಗ: ಉತ್ತರಪ್ರದೇಶದ ಅಯೋಧ್ಯೆಯಲ್ಲಿ ಮಾ.15 ರಂದು ನಡೆಯಲಿರುವ ರಾಮೋತ್ಸವ-24ರ 'ಕವಿ ಸಮ್ಮೇಲನ' ದಲ್ಲಿ ಕಾವ್ಯ ವಾಚನಕ್ಕೆ ಕವಿ, ಕನ್ನಡ ಸಹಪ್ರಾಧ್ಯಾಪಕ ಡಾ.ಪ್ರಭು ಗಂಜಿಹಾಳ ಆಯ್ಕೆ ಆಗಿದ್ದಾರೆ.

ಅಯೋಧ್ಯೆಯಲ್ಲಿ ಜನೇವರಿ 14 ರಿಂದ ಆರಂಭವಾಗಿರುವ ರಾಮೋತ್ಸವ ಸಮಿತಿ -2024 ರ ಕಾರ್ಯಕ್ರಮಗಳು ಮಾ.24 ರವರೆಗೂ ನಡೆಯಲಿದ್ದು, ಮಾ.15ರಂದು ಬಹುಭಾಷಾ ಕವಿ ಸಮ್ಮೇಲನ ಬಿಹಾರದ ಕವಿ,ಸಾಹಿತಿಗಳಾದ ಈಶ್ವರ ಚಂದ್ರ ಝಾ ಅವರ ಮಾರ್ಗದರ್ಶನದಲ್ಲಿ ನಡೆಯಲಿದೆ ಎಂದು ರಾಮೋತ್ಸವ-2024ರ ಸಮಿತಿ-5ರ ಸಂಯೋಜಕ ಅಶುತೋಶ ದ್ವಿವೇದಿ ತಿಳಿಸಿದ್ದಾರೆ. ಕಾವ್ಯವಾಚನಕ್ಕೆ ಆಯ್ಕೆ ಆಗಿರುವ ಡಾ.ಪ್ರಭು ಗಂಜಿಹಾಳ ರೋಣ ತಾಲೂಕಿನ ಹೊಳೆಆಲೂರಿನ ಶ್ರೀ ಕಲ್ಮೇಶ್ವರ ಕಲಾ,ವಿಜ್ಞಾನ,ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾಗಿದ್ದಾರೆ.

ಕವಿಸಮ್ಮೇಲನದಲ್ಲಿ ಪಾಲ್ಗೊಳ್ಳುತ್ತಿರುವ ಇವರಿಗೆ ನಿವೃತ್ತ ತೋಟಗಾರಿಕಾ ಅಧಿಕಾರಿ ಸಿ.ಆರ್.ಗೌಡರ, ಪ್ರಾಚಾರ್ಯ ಡಾ.ಪಿ-ಎಸ್.ಕಣವಿ, ಡಾ.ಎಸ್.ಬಿ.ಸಜ್ಜನರ್ ಮತ್ತು ಮಹಾವಿದ್ಯಾಲಯದ ಸಿಬ್ಬಂದಿವರ್ಗ, ಕನ್ನಡ ಸಾಹಿತ್ಯ ಪರಿಷತ್ ಗದಗ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಡಾ.ರಾಜಶೇಖರ ದಾನರಡ್ಡಿ, ಪ್ರೊ.ವಿ.ಎಂ.ಗುರುಮಠ, ಪತ್ರಕರ್ತರಾದ ಮೌನೇಶ ಬಡಿಗೇರ, ಡಾ.ವೀರೇಶ ಹಂಡಿಗಿ, ರಾಘವೇಂದ್ರ ಕುಲಕರ್ಣಿ, ಪ್ರಾ.ಬಸವರಾಜ ಗಂಜಿಹಾಳ, ಸಾಹಿತಿಗಳು ,ಕಲಾವಿದರು ಮತ್ತು ಪತ್ರಕರ್ತ ಬಳಗದ ಸದಸ್ಯರು ಅಭಿನಂದಿಸಿದ್ದಾರೆ.

# ಕೃಷಿ ಉತ್ಸವ ಆಯೋಜಿಸಿರುವ ರೋಟರಿ ಕ್ಲಬ್ ಕಾರ್ಯ ಶ್ಲಾಘನೀಯ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಕೃಷಿ ಉತ್ಸವ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಿರುವ ರೋಟರಿ ಕ್ಲಬ್ ಆಫ್ ಬೆಳಗಾವಿ ಸೆಂಟ್ರಲ್ ಕಾರ್ಯ ಶ್ಲಾಘನೀಯ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.




ನಗರದ ಸಿ.ಪಿ.ಎಡ್ ಮೈದಾನದಲ್ಲಿ ರೋಟರಿ ಕ್ಲಬ್ ಆಫ್ ಬೆಳಗಾವಿ ಸೆಂಟ್ರಲ್, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ "ಬೆಳಗಾವಿ ಕೃಷಿ ಉತ್ಸವ -2024 " ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಯಾವುದೇ ಒಂದು ಕಾರ್ಯಕ್ರಮ ಆಯೋಜಿಸಲು ಕನಿಷ್ಟ ಎರಡು ತಿಂಗಳಾದರೂ ಸಮಯ ಬೇಕು. ಧಾರವಾಡ ಕೃಷಿ ವಿಶ್ವವಿದ್ಯಾಯಲದಲ್ಲಿ ಪ್ರತಿ ವರ್ಷ ಕೃಷಿ ಉತ್ಸವವನ್ನು ಮಾಡುತ್ತಾರೆ. ಅಲ್ಲಿ ನಾಲ್ಕು ದಿನದ ಕಾರ್ಯಕ್ರಮದಲ್ಲಿ ಸುಮಾರು 16 ಲಕ್ಷ ಜನ ಸೇರುತ್ತಾರೆ. ಇಂತಹ ಕಾರ್ಯಕ್ರಮ ಆಯೋಜಿಸುವುದರಿಂದ ರೈತರಿಗೆ ಯಂತ್ರೋಪಕರಣಗಳ ಬಗ್ಗೆ ತಿಳಿದುಕೊಳ್ಳಲು ಅನುಕೂಲ ಆಗುತ್ತದೆ ಎಂದು ತಿಳಿಸಿದರು.

ರೋಟರಿ ಕ್ಲಬ್ ಯಾವುದೇ ರೀತಿಯ ಸಮಾಜಮುಖಿ ಕಾರ್ಯಕ್ರಮ ಆಯೋಜಿಸಿದರೆ ಜಿಲ್ಲಾಡಳಿತ, ಸರ್ಕಾರ, ನಮ್ಮಿಂದಲೂ ಸದಾ ನಿಮಗೆ ಎಲ್ಲಾ ರೀತಿಯ ಸಹಾಯ, ಸಹಕಾರ ನೀಡುತ್ತೇವೆ ಎಂದ ಅವರು, ರೈತರಿಗೆ, ಜಿಲ್ಲೆಯ ಜನರಿಗೆ ಅನುಕೂಲವಾಗುವ ಕಾರ್ಯಕ್ರಮ ಹಮ್ಮಿಕೊಳ್ಳಲು ಸಲಹೆ ನೀಡಿದರು.

ನಾನು ಕೂಡ ಧಾರವಾಡ, ಬೆಂಗಳೂರು, ಹೈದರಬಾದ್, ಪುಣೆ, ದುಬೈನಲ್ಲಿ ನಡೆಯುವ ಇಂತಹ ಅನೇಕ ಕಾರ್ಯಕ್ರಮಗಲ್ಲಿ ಪಾಲ್ಗೊಂಡು ಮಾಹಿತಿ ಪಡೆಯಲು ಹೋಗುತ್ತೇನೆ. ಕೃಷಿಯಲ್ಲಿ ತಂತ್ರಜ್ಞಾನ ಅಳವಡಿಸಿಕೊಳ್ಳಲು ರೈತರಿಗೆ ಮಾಹಿತಿ ನೀಡಲು ಕೃಷಿ ಉತ್ಸವ ಆಯೋಜಿಸಿರುವುದು ಸಂತಸದ ವಿಷಯ ಎಂದರು.

ಧಾರವಾಡ ಕೃಷಿ ವಿಶ್ವವಿದ್ಯಾಲಯದ ಉಪ ಕುಲಪತಿ ಪಿ.ಎಲ್. ಪಾಟೀಲ್ ಮಾತನಾಡಿ, ಕೃಷಿಯಲ್ಲಿ ತಂತ್ರಜ್ಞಾನದ ಬಳಕೆ, ಯಂತ್ರೋಪಕರಣಗಳ ಬಗ್ಗೆ ಮಾಹಿತಿ ನೀಡುತ್ತಿರುವ ರೋಟರಿ ಕ್ಲಬ್ ಆಫ್ ಬೆಳಗಾವಿ ಸೆಂಟ್ರಲ್‌ನ ಕಾರ್ಯ ಶ್ಲಾಘನೀಯ. ರೈತರು ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ಅಧಿಕ ಲಾಭ ಪಡೆಯಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ರೋಟರಿ ಕ್ಲಬ್ ಆಫ್ ಬೆಳಗಾವಿ ಸೆಂಟ್ರಲ್ ಅಧ್ಯಕ್ಷ ಮಂಜುನಾಥ ಅಳವಣಿ ಪ್ರಾಸ್ತಾವಿಕ ಮಾತನಾಡಿ, ಕೃಷಿಗೆ ಸಂಬಂಧಿಸಿದ 200ಕ್ಕೂ ಅಧಿಕ ಮಳಿಗೆಗಳನ್ನು ಮೇಳದಲ್ಲಿ ಹಾಕಲಾಗಿದೆ. ರೈತರು ಇವುಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಇದೇ ವೇಳೆ ರೋಟರಿ ಕ್ಲಬ್ ಆಫ್ ಬೆಳಗಾಮ್ ಸೆಂಟ್ರಲ್ ವತಿಯಿಂದ ಆಯೋಜಿಸಲಾಗಿದ್ದ ಕೃಷಿ ಉತ್ಸವ ಉದ್ಘಾಟನೆ ಸಮಾರಂಭದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ರೋಟರಿ ಕ್ಲಬ್ ಆಫ್ ಬೆಳಗಾವಿ ಸೆಂಟ್ರಲ್ ಕಾರ್ಯದರ್ಶಿ ಅಭ್ಯಯ ಜೋಶಿ, ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ್, ಉಪ ಕೃಷಿ ನಿರ್ದೇಶಕ ಎಸ್.ಬಿ. ಕೊಂಗವಾಡ, ಉಪ ಕೃಷಿ ನಿರ್ದೇಶಕ ಎಸ್.ಡಿ. ಕೋಲ್ಕಾರ್, ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರು ಪಿ.ಎನ್. ಲೋಕೇಶ್, ಜಿಪ ಸಿಇಓ ರಾಹುಲ್ ಸಿಂಧೆ ಸೇರಿದಂತೆ ಅನೇಕರು ಇದ್ದರು.

# ಸಮುದಾಯ ಭವನ ನಿರ್ಮಾಣಕ್ಕೆ ಸಚಿವೆ ಗುದ್ದಲಿ ಪೂಜೆ

## ಮಹಾಬಲೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ ಲಕ್ಷ್ಮೀ ಹೆಬ್ಬಾಳ್ಕರ್




ಬೆಳಗಾವಿ: ಸಹ್ಯಾದ್ರಿ ನಗರದಲ್ಲಿರುವ ಶ್ರೀ ಮಹಾಬಳೇಶ್ವರ ದೇವಸ್ಥಾನದ ಆವರಣದಲ್ಲಿ ಸಮುದಾಯ ಭವನ, ಉದ್ಯಾನವನ ಹಾಗೂ ಬೊರವೆಲ್ ಹಾಕಿಸುವ ಕಾಮಗಾರಿಗಳಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಭೂಮಿ ಪೂಜೆ ನೆರವೇರಿಸಿದರು.

ಮಹಾ ಶಿವರಾತ್ರಿಯ ಪ್ರಯುಕ್ತ ಮಹಾಬಳೇಶ್ವರ ಸ್ವಾಮಿಗೆ ವಿಶೇಷ ಪೂಜೆಯನ್ನು ಸಲ್ಲಿಸಿದ ಸಚಿವರು, ನಾಡಿನ ಸುಭೀಕ್ಷೆಗಾಗಿ ಪ್ರಾರ್ಥನೆ ಸಲ್ಲಿಸಿದರು.

ಈ ವೇಳೆ ಅರ್ಚಕರಾದ ಅಡವಯ್ಯ ಹಿರೇಮಠ್, ವಿಜಯ ಹಿರೇಮಠ್, ಮಹಾಬಲೇಶ್ವರ ದೇವಸ್ಥಾನ ಸಮಿತಿಯ ಸದಸ್ಯರಾದ ಅಣ್ಣಯ್ಯ ಪಾಟೀಲ, ರಾಜು ಡೂಗನವರ, ಸುರೇಶ್ ಘೋರ್ಪಡೆ, ಸಂಜು ಅಂಗಡಿ, ಗೋಪಾಲ ಪಂಚಾಳ, ಹರೀಶ್ ಹಂಡೆ, ಮಲ್ಲಪ್ಪಾ ಮಾಕಿ, ಗುರುಸಿದ್ದ ಪಾಟೀಲ, ಅಡವಯ್ಯ ಸ್ವಾಮಿಗಳು, ರತ್ನಾ ಕುಲಕರ್ಣಿ, ಸುರಭಿ ಜಡಗಿ, ರಾಜಶ್ರೀ, ಅಶ್ವಿನಿ ಹಾವನ್ನಗೋಳ, ಸ್ನೇಹಾ ಪಾಟೀಲ ಉಪಸ್ಥಿತರಿದ್ದರು.

# ಕಾರು ಹತ್ತಿಸಿ ಅಣ್ಣನನ್ನೇ ಹತ್ಯೆಗೈದ ಸಹೋದರರು

ಶಿವಮೊಗ್ಗ: ಆಸ್ತಿಗಾಗಿ, ಇಬ್ಬರು ಸಹೋದರರು ಸೇರಿ ಕಾರು ಹತ್ತಿಸಿ ಅಣ್ಣನನ್ನೇ ಹತ್ಯೆಗೈದ ಘಟನೆ ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನ ಚಿಪ್ಪಳ್ಳಿ ಬಳಿ ಫೆ. 29ರ ಸಂಜೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.



ರಫೀಕ್(45) ಮೃತ ವ್ಯಕ್ತಿ. ಆರೋಪಿಗಳಾದ ಇನಾಯತ್ ಮತ್ತು ಅಕ್ಕನ ಮಗ ಸಮೀರ್, ರಸ್ತೆ ಬಳಿ ಕಾರು ಹತ್ತಿಸಿ ಕೊಲೆ ಮಾಡಿ ಎಸ್ಕೇಪ್ ಆಗಿದ್ದರು. ಈ ಘಟನೆ ಆನಂದಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿತ್ತು. ಈ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ ಪೊಲೀಸರು, ಆರೋಪಿಗಳು ಬಂಧಿಸಿದ್ದಾರೆ. ಕಾರು ಹತ್ತಿಸಿ ಹತ್ಯೆ ಮಾಡಿರುವ ವಿಡಿಯೋ ಮೊಬೈಲ್ನಲ್ಲಿ ಸೆರೆಯಾಗಿದೆ.

ಇನ್ನು ಕಾರು ಹತ್ತಿಸಿದ ಬಳಿಕ ಗಂಭೀರವಾಗಿ ಗಾಯಗೊಂಡಿದ್ದ ರಫೀಕ್, ಸ್ಥಳದಲ್ಲೇ ಕೊನೆಯುಸಿರೆಳೆದಿದ್ದ. ಈ ಕುರಿತು ಸ್ಥಳೀಯರು ಪೊಲೀಸರು ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕಾಗಮಿಸಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದರು, ಈ ಸಂಬಂಧ ಆನಂದಪುರ ಪೊಲೀಸರು ಪ್ರಕರಣವನ್ನು ದಾಖಲಿಸಿಕೊಂಡು ತನಿಖೆಯನ್ನು ನಡೆಸಿದ್ದರು. ಆದರೆ, ಆರೋಪಿಗಳು ಪೊಲೀಸರಿಗೆ ಯಾವ ಸಾಕ್ಷಿಯು ಸಿಗಬಾರದೆಂದು ಸಾಗರ ತಾಲೂಕಿನ ಆನಂದಪುರದಲ್ಲಿರುವ ಮುರುಘಾ ಮಠದ ಆವರಣದಲ್ಲಿ ಬಟ್ಟೆ ಬದಲಿಸಿಕೊಂಡಿದ್ದರು. ಈ ದೃಶ್ಯವೆಲ್ಲವೂ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿತ್ತು. ಬಳಿಕ ಪೊಲೀಸರು ಆರೋಪಿಗಳನ್ನು ಬಂಧಿಸಿ ತನಿಖೆಗೆ ಒಳಪಡಿಸಿದಾಗ, ಇದು ಕುಟುಂಬದವರೇ ಆಸ್ತಿಗಾಗಿ ಮಾಡಿದ ಕೊಲೆ ಎಂದು ತಿಳಿದು ಬಂದಿದೆ.

# ಚಾಕ್ಲೇಟ್ ಅಂತಾ ಮಾತ್ರೆ ಸೇವಿಸಿದ್ದ ಮಗು ಸಾವು

ಚಿತ್ರದುರ್ಗ: ಚಾಕ್ಲೇಟ್ ಎಂದು ಭಾವಿಸಿ ಮಾತ್ರೆ ಸೇವಿಸಿದ್ದ ಮಗು ಸಾವನ್ನಪ್ಪಿರುವ ಘಟನೆ ಚಿತ್ರದುರ್ಗ ತಾಲೂಕಿನ ಕಡಬನಕಟ್ಟೆ ಗ್ರಾಮದಲ್ಲಿ ನಡೆದಿದೆ.

ಕಳೆದ ನಾಲ್ಕು ದಿನಗಳ ಹಿಂದೆ ಕಡಬನಕಟ್ಟೆ ಗ್ರಾಮದ ವಸಂತ್ ಕುಮಾರ್ ಹಾಗೂ ಪವಿತ್ರ ದಂಪತಿಯ ಪುತ್ರ ಹೃತ್ವಿಕ್(4) ಮನೆಯಲ್ಲಿದ್ದ ಮಾತ್ರೆಗಳನ್ನು ಸೇವಿಸಿ ಅಸ್ವಸ್ಥಗೊಂಡಿದ್ದನು.

ಬಾಲಕ ಅಸ್ವಸ್ಥಗೊಂಡ ವಿಚಾರ ಗೊತ್ತಾಗುತ್ತಿದ್ದಂತೆಯೇ ಪೋಷಕರು ಆತನನ್ನು ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿದ್ದಾರೆ. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿತ್ತು. ಕಳೆದ ನಾಲ್ಕು ದಿನಗಳಿಂದ ಚಿಕಿತ್ಸೆ ನೀಡಲಾಗಿದ್ದು, ಬಾಲಕನ ಜೀವ ಉಳಿಸಲು ವೈದ್ಯರು ಶ್ರಮಪಟ್ಟಿದ್ದರು. ಆದರೆ ಚಿಕಿತ್ಸೆ ಫಲಿಸದೇ ಇಂದು ಬಾಲಕ ಕೊನೆಯುಸಿರೆಳೆದಿದ್ದಾನೆ. ಮೃತ ಮಗುವಿನ ತಾಯಿ ಪವಿತ್ರಾಗೆ ಈ ಹಿಂದೆ 3 ಶಸ್ತ್ರ ಚಿಕಿತ್ಸೆಗಳಾಗಿದ್ದು,ಆಕೆಗೆ ವೈದ್ಯರು ನೀಡಿದ್ದ ಮಾತ್ರೆಗಳನ್ನು ಮನೆಯಲ್ಲಿಟ್ಟಿದ್ದರು. ಆದರೆ ಚಾಕ್ಲೇಟ್ ಎಂದು ಭಾವಿಸಿದ್ದ ಮಗು ಆ ಮಾತ್ರೆಗಳನ್ನು ಸೇವಿಸಿತ್ತು. ಹೀಗಾಗಿ ಚಿಕಿತ್ಸೆ ಫಲಕಾರಿಯಾಗದೇ ಇಂದು ಸಾವನ್ನಪ್ಪಿದೆ. ಇದರಿಂದಾಗಿ ಮಗುವಿನ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಈ ಪ್ರಕರಣ ತುರುವನೂರು ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

# ಕಾಡು ಹಂದಿ ದಾಳಿಗೆ ಮಹಿಳೆ ಸಾವು



ಬೀದರ್: ಜೋಳ ಕಟಾವು ಮಾಡಲು ಜಮೀನಿಗೆ ತೆರಳಿದ್ದಾಗ ಮಹಿಳೆ ಮೇಲೆ ಕಾಡು ಹಂದಿ ದಾಳಿ ಮಾಡಿರುವ ಘಟನೆ ಬೀದರ್ ತಾಲೂಕಿನ ಹೊಕ್ರಾಣ (ಕೆ) ಗ್ರಾಮದಲ್ಲಿ ನಡೆದಿದೆ.

ಹೊಕ್ರಾಣ (ಕೆ) ಗ್ರಾಮದ ಕವಿತಾ ರವಿಕುಮಾರ್ (45) ಮೃತ ದುರ್ದೈವಿ. ಅಹಮ್ಮದ್ ಅಲಿ ಖಾಜಾ ಸಾಬ್ ಎಂಬುವರ ಜಮೀನಿಗೆ ಜೋಳ ಕಟಾವು ಮಾಡಲೆಂದು ನಾಲ್ವರು ಮಹಿಳೆಯರು ಹೋಗಿದ್ದರು. ಈ ವೇಳೆ ಮಹಿಳೆ ಮೇಲೆ ಏಕಾಏಕಿ ಕಾಡು ಹಂದಿ ದಾಳಿ ಮಾಡಿದ್ದರಿಂದ ಗಂಭಿರವಾಗಿ ಗಾಯಗೊಂಡಿದ್ದರು. ತಕ್ಷಣ ಗಾಯಾಳುವನ್ನು ಆಸ್ಪತ್ರೆಗೆ ತೆಗೆದುಕೊಂಡು ಹೋಗಲಾಗುತ್ತಿತ್ತು. ಆದ್ರೆ ಮಾರ್ಗ ಮಧ್ಯೆಯೇ ಮಹಿಳೆ ಸಾವನ್ನಪ್ಪಿದ್ದಾರೆ.

ಅರಣ್ಯ ಸಚಿವ ಈಶ್ವರ್ ಖಂಡ್ರೆ ತವರು ಜಿಲ್ಲೆಯಲ್ಲೇ ಮಹಿಳೆ ಮೇಲೆ ಕಾಡು ಹಂದಿ ದಾಳಿಗೆ ಮಹಿಳೆ ಸಾವನ್ನಪ್ಪಿದ್ದಾಳೆ. ಈ ಹಿನ್ನೆಲೆಯಲ್ಲಿ ಇಂದು ಸಚಿವರು ಹೊಕ್ರಾಣ (ಕೆ) ಗ್ರಾಮಕ್ಕೆ ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಲಿದ್ದಾರೆ. ಮನ್ನಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮದುವೆಗೆ ಕೆಲವೇ ಗಂಟೆಗಳ ಮೊದಲು ಮಗನನ್ನೆ ಹತ್ಯೆ ಮಾಡಿದ ತಂದೆ



ನವದೆಹಲಿ: ಮಗನ ಮದುವೆಗೆ ಕೆಲವೇ ಗಂಟೆ ಬಾಕಿ ಇರುವ ಹೊತ್ತಲ್ಲೇ ಜಿಮ್ ಮಾಲೀಕನೊಬ್ಬ ತನ್ನ ಮಗನನ್ನೇ ಹತ್ಯೆ ಮಾಡಿರುವ ಘಟನೆ ದಕ್ಷಿಣ ದೆಹಲಿಯಲ್ಲಿ ನಡೆದಿದೆ.

ಗೌರವ್ ಸಿಂಘಾಲ್ (29) ಎಂಬಾತನನ್ನು ಆತನ ತಂದೆ ರಂಗಲಾಲ್ ಹತ್ಯೆ ಮಾಡಿದ್ದಾನೆ ಎಂದು ಆರೋಪಿಸಲಾಗಿದೆ. ರಂಗಲಾಲ್‌ನನ್ನು ಬಂಧಿಸಲಾಗಿದೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ. ಗೌರವ್ ತನ್ನ ಮದುವೆಯ ಮೆರವಣಿಗೆಗೆ ಹೊರಟಿದ್ದ. ಈ ವೇಳೆ ಆತನ ತಂದೆಯೇ ಚೂಪಾದ ಆಯುಧ ಬಳಸಿ ಕೊಂದಿದ್ದಾನೆ. ಗೌತಮ್ ಜಿಮ್ ನಡೆಸುತ್ತಿದ್ದ. ದೇವ್ಲಿ ಎಕ್ಸ್‌ಟೆನ್ಶನ್‌ನಲ್ಲಿರುವ ಮನೆಯಲ್ಲೇ ಆತನ ಎದೆಗೆ 15 ಬಾರಿ ಇರಿದಿದ್ದು, ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಜಿಮ್ ಮಾಲೀಕನಾಗಿರುವ ಗೌರವ್ ಸಿಂಘಾಲ್ ಅವರಿಗೆ ಮದುವೆ ಇಷ್ಟವಿರಲಿಲ್ಲ. ಆದರೆ, ರಂಗಲಾಲ್ ಅವರು ಪದೇಪದೆ ಒತ್ತಾಯಿಸಿದ ಕಾರಣ ಅವರು ಮದುವೆಗೆ ಒಪ್ಪಿದ್ದರು. ಇನ್ನು, ಇದೇ ವಿಷಯಕ್ಕೆ ಸಂಬಂಧಿಸಿದಂತೆ ರಂಗಲಾಲ್ ಅವರನ್ನು ಗೌರವ್ ಸಿಂಘಾಲ್ ಅವರು ಅವಮಾನಿಸುತ್ತಿದ್ದರು. ಎಲ್ಲರ ಎದುರು ಮಗನಿಂದಲೇ ಅವಮಾನಕ್ಕೀಡಾದ ರಂಗಲಾಲ್ ಅವರು ಕುದ್ದುಹೋಗಿದ್ದರು. ಬುಧವಾರ ರಾತ್ರಿಯೂ ಇಬ್ಬರ ಮಧ್ಯೆ ಜಗಳ ನಡೆದಿದ್ದು, ಕುಪಿತಗೊಂಡ ರಂಗಲಾಲ್ ಅವರು ಮಗನನ್ನೇ ಹತ್ಯೆಗೈದಿದ್ದಾರೆ ಎಂದು ತಿಳಿದುಬಂದಿದೆ. ಮದುವೆ ಮೆರವಣಿಗೆ ಮಾಡಲು ಮದುಮಗನಿಗಾಗಿ ಜನರು ಕಾಯುತ್ತಿದ್ದರು. ಆದರೆ ಗೌರವ್ ಬರಲಿಲ್ಲ. ಅನುಮಾನಗೊಂಡು ಅತಿಥಿಗಳು ಹುಡುಕಾಟ ನಡೆಸಿದ್ದಾರೆ. ಆದರೆ ಪಾರ್ಕ್‌ವೊಂದರಲ್ಲಿ ಆತನ ಮೃತದೇಹ ಪತ್ತೆಯಾಗಿದೆ. ಸಂಭ್ರಮದ ಮನೆಯಲ್ಲಿ ಶೋಕದ ವಾತಾವರಣ ಮಡುಗಟ್ಟಿದೆ.

# ಮಾ. 12ರಂದು ಪಾಪ್ಯುಲರ್ ವೆಹಿಕಲ್ಸ್ ಅಂಡ್ ಸರ್ವೀಸಸ್ ಐಪಿಒ ಮಾರಾಟ

ಹುಬ್ಬಳ್ಳಿ: ಪಾಪ್ಯುಲರ್ ವೆಹಿಕಲ್ಸ್ ಅಂಡ್ ಸರ್ವೀಸಸ್ ಲಿಮಿಟೆಡ್(ಪಿವಿಎಸ್-ಎಲ್) ಆರಂಭಿಕ ಷೇರು ಬಿಡುಗಡೆ ಅಥವಾ ಮಾರಾಟ ಸಂಬಂಧ 2024 ಮಾರ್ಚ್ 12 ರಂದು ಈಕ್ವಿಟಿ ಷೇರುಗಳ ಮಾರಾಟ ಆರಂಭಿಸಲಿದೆ.




ಆರಂಭಿಕ ಷೇರು ಮಾರಾಟದ ಒಟ್ಟು ಗಾತ್ರದಲ್ಲಿ ಕಂಪನಿಯು 250 ಕೋಟಿ ರೂ. ಮೊತ್ತದ 1,19,17,075 ಈಕ್ವಿಟಿ ಷೇರುಗಳ ಮಾರಾಟ ನಡೆಸಲಿದೆ. ಈ ಹರಾಜು ಪ್ರಕ್ರಿಯೆಯಲ್ಲಿ ಪ್ರತಿ ಷೇರಿಗೆ 280 ರೂ.ನಿಂದ 295 ರೂ.ವರೆಗೆ ದರ ನಿಗದಿಪಡಿಸಲಾಗಿದೆ. ಸಾರ್ವಜನಿಕರು ಕನಿಷ್ಠ 50 ಈಕ್ವಿಟಿ ಷೇರುಗಳು ಮತ್ತು ತದನಂತರದಲ್ಲಿ 50 ಈಕ್ವಿಟಿ ಷೇರುಗಳ ಗುಣಕದಲ್ಲಿ ಷೇರುಗಳ ಖರೀದಿ ನಡೆಸಬಹುದು.

ಚಂದಾದಾರಿಕೆಗಾಗಿ ಹರಾಜು/ಮಾರಾಟ ಕೊಡುಗೆ 2024 ಮಾರ್ಚ್ 12ರಂದು ತೆರೆಯಲಿದ್ದು, 2024 ಮಾರ್ಚ್ 14ರಂದು ಮುಕ್ತಾಯ ಕಾಣಲಿದೆ.

ಆರಂಭಿರ ಷೇರು ಬಿಡುಗಡೆ ಅಥವಾ ಐಪಿಒದಿಂದ ಬರುವ ನಿವ್ವಳ ಆದಾಯವನ್ನು ಕಂಪನಿ ಮತ್ತು ಅದರ ಅಂಗಸಂಸ್ಥೆಗಳು ಪಡೆದಿರುವ ಕೆಲವು ಸಾಲಗಳ ಪೂರ್ಣ ಅಥವಾ ಭಾಗಶಃ ಮರುಪಾವತಿ ಮತ್ತು ಅಥವಾ ಪೂರ್ವಪಾವತಿಗೆ ಬಳಸಿಕೊಳ್ಳಲು ಕಂಪನಿ ಪ್ರಸ್ತಾಪಿಸಿದೆ.

ಕಂಪನಿಯ ಅಂಗಸಂಸ್ಥೆಗಳೆಂದರೆ, ಕಂಘಾಐ, ಕಒಒಋಐ, ಏಉಕಐ, ಏಅಕಐ ಮತ್ತು ಕಒಕಐ ಮಾಡಿರುವ ಸಾಲ ತೀರಿಸಲು 1,920 ದಶಲಕ್ಷ ರೂಪಾಯಿ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಐಪಿಒದ ಬಾಕಿ ಮೊತ್ತ ಬಳಸಿಕೊಳ್ಳಲು ಕಂಪನಿ ಉದ್ದೇಶಿಸಿದೆ.

ಪಾಪ್ಯುಲರ್ ವೆಹಿಕಲ್ಸ್ ಅಂಡ್ ಸರ್ವೀಸಸ್ ಲಿಮಿಟೆಡ್ ಕಂಪನಿಯು ಮಾರಾಟ ಕೊಡುಗೆ ಮೂಲಕ "ಬನ್ಯಾನ್ ಟ್ರೀ ಗ್ರೋಥ್ ಕ್ಯಾಪಿಟಲ್ 2, ಎಲ್‌ಎಲ್‌ಸಿ" ಕಂಪನಿಗೆ 1,19,17,075 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲಿದೆ.

ಕೇರಳದ ಎರ್ನಾಕುಲಂನಲ್ಲಿ ಇರುವ ಕಂಪನಿಗಳ ರಿಜಿಸ್ಟ್ರಾರ್ ಆಫ್ ಕಂಪನೀಸ್ ಗೆ 2024 ಮಾರ್ಚ್ 4ರಂದು ಸಲ್ಲಿಸಲಾಗಿರುವ ಕಂಪನಿಯ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ಈಕ್ವಿಟಿ ಷೇರುಗಳ ಮಾರಾಟ ಮಾಡಲಾಗುತ್ತದೆ. ಬಿಎಸ್‌ಇ ಮತ್ತು ಎನ್-ಎಸ್‌ಇ ಐಪಿಒ ಬಿಡುಗಡೆ ಪ್ರಕ್ರಿಯೆಯನ್ನು ನೋಂದಾಯಿಸಲು ಕಂಪನಿ ಉದ್ದೇಶಿಸಿದೆ.

ಆರಂಭಿಕ ಷೇರು ಬಿಡುಗಡೆ ಅಥವಾ ಷೇರುಗಳ ಮಾರಾಟಕ್ಕಾಗಿ ನ್ಯಾಷನಲ್ ಸ್ಟಾಕ್ ಎಕ್ಸ್ ಚೇಂಜ್ ಆಫ್ ಇಂಡಿಯಾವು ನಿಯೋಜಿತ ಷೇರು ವಿನಿಮಯ ಕೇಂದ್ರವಾಗಿದೆ.

ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್, ನುವಾಮಾ ವೆಲ್ತ್ ಮ್ಯಾನೇಜ್‌ಮೆಂಟ್ ಲಿಮಿಟೆಡ್ ಮತ್ತು ಸೆಂಟ್ರಮ್ ಕ್ಯಾಪಿಟಲ್ ಲಿಮಿಟೆಡ್ ಈ ಮಾರಾಟ ಕೊಡುಗೆಯ ಲೆಕ್ಕಪತ್ರ ನಿರ್ವಹಿಸುವ ಲೀಡ್ ಮ್ಯಾನೇಜರ್‌ಗಳಾಗಿವೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089